ಸತ್ಯ ಮತ್ತು ಧೈರ್ಯದ ಧ್ವನಿ

ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 135 | ರಾಯಚೂರು Raichur | 06-11-2026 | ಶುಕ್ರವಾರ Friday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685



ಜಪಾನ್ ವಿರುದ್ಧ 4-1 ಗೋಲುಗಳ ಭರ್ಜರಿ ಜಯ: ಆರನೇ ಬಾರಿ

ಏಷ್ಯನ್ ಚಾಂಪಿಯನ್ಸ್ ಟ್ರೋಫಿ ಮುಡಿಗೇರಿಸಿಕೊಂಡ ಭಾರತ



ನವದೆಹಲಿ: ಏಷ್ಯನ್ ಚಾಂಪಿಯನ್ ಟ್ರೋಫಿ ಹಾಕಿ ಟೂರ್ನಿಯ ಫೈನಲ್ ಪಂದ್ಯದಲ್ಲಿ ಜಪಾನ್ ತಂಡವನ್ನು 4-1 ಗೋಲುಗಳ ಅಂತರದಿಂದ ಮಣಿಸಿದ ಭಾರತ ಪುರುಷರ ಹಾಕಿ ತಂಡ, ದಾಖಲೆಯ ಆರನೇ ಬಾರಿಗೆ ಪ್ರಶಸ್ತಿ ಮುಡಿಗೇರಿಸಿಕೊಂಡಿದೆ. ಆರಂಭದಲ್ಲಿ ಹಿನ್ನಡೆ ಅನುಭವಿಸಿದರೂ ಅದ್ಭುತವಾಗಿ ಪುಟಿದೆದ್ದ ಹರ್ಮನ್‌ಪ್ರೀತ್ ಸಿಂಗ್ ನೇತೃತ್ವದ ಭಾರತ ತಂಡ, ಅಂತಿಮ ಹಂತದಲ್ಲಿ ಆಕ್ರಮಣಕಾರಿ ಆಟ ಪ್ರದರ್ಶಿಸಿ ಪ್ರಶಸ್ತಿ ಗೆದ್ದುಕೊಂಡಿತು.

ಗುರುವಾರ ನಡೆದ ರೋಚಕ ಫೈನಲ್ ಪಂದ್ಯದಲ್ಲಿ ಜಪಾನ್ ತಂಡ ಆರಂಭದಿಂದಲೇ ಭಾರತದ ವಿರುದ್ಧ ತೀವ್ರ ಪೈಪೋಟಿ ನೀಡಿತು. ಪಂದ್ಯದ ಮೂರನೇ ನಿಮಿಷದಲ್ಲಿಯೇ ಗೋಲು ದಾಖಲಿಸಿದ ಜಪಾನ್ 1-0 ಅಂತರದ ಮುನ್ನಡೆ ಸಾಧಿಸಿ ಭಾರತದ ಮೇಲೆ ಒತ್ತಡ ಹೇರಿತು. ಜಪಾನ್ ಆಟಗಾರರ ಸಂಘಟಿತ ರಕ್ಷಣಾತ್ಮಕ ಆಟ ಹಾಗೂ ನಿರಂತರ ದಾಳಿಯಿಂದಾಗಿ ಭಾರತದ ಆಟಗಾರರು ಆರಂಭಿಕ ಹಂತದಲ್ಲಿ ಗೋಲು ಗಳಿಸಲು ಪರದಾಡಿದರು.

ಮೊದಲಾರ್ಧದಲ್ಲಿ ಹಲವು ಪ್ರಯತ್ನಗಳನ್ನು ನಡೆಸಿದರೂ ಭಾರತಕ್ಕೆ ಸಮಬಲ ಸಾಧಿಸಲು ಸಾಧ್ಯವಾಗಲಿಲ್ಲ. ಜಪಾನ್ ತಂಡ ತನ್ನ ಮುನ್ನಡೆಯನ್ನು ಕಾಯ್ದುಕೊಳ್ಳಲು ಬಲಿಷ್ಠ ರಕ್ಷಣಾ ತಂತ್ರ ಅನುಸರಿಸಿತು. ಆದರೆ ಮೂರನೇ ಕ್ವಾರ್ಟರ್‌ನಲ್ಲಿ ಭಾರತದ ಶಿಲಾನಂದ್ ಲಾಕ್ರಾ ಮಹತ್ವದ ಗೋಲು ದಾಖಲಿಸುವ ಮೂಲಕ ಪಂದ್ಯವನ್ನು 1-1ರ ಸಮಬಲಕ್ಕೆ ತಂದರು. ಈ ಗೋಲು ಭಾರತೀಯ ಆಟಗಾರರಲ್ಲಿ ಹೊಸ ಆತ್ಮವಿಶ್ವಾಸ ಮೂಡಿಸುವುದರ ಜೊತೆಗೆ ಪಂದ್ಯದ ಗತಿಯನ್ನೇ ಬದಲಾಯಿಸಿತು.

ಸಮಬಲ ಸಾಧಿಸಿದ ನಂತರ ಭಾರತ ತಂಡ ಆಕ್ರಮಣಕಾರಿ ಆಟಕ್ಕೆ ಹೆಚ್ಚಿನ ಒತ್ತು ನೀಡಿತು. ಅಂತಿಮ ಕ್ವಾರ್ಟರ್‌ನಲ್ಲಿ ದಿಲ್‌ಪ್ರೀತ್ ಸಿಂಗ್, ಜುಗ್ರಾಜ್ ಸಿಂಗ್ ಹಾಗೂ ವಿವೇಕ್ ಸಾಗರ್ ಪ್ರಸಾದ್ ತಲಾ ಒಂದು ಗೋಲು

ಮಾರೆಮ್ಮ ದೇವಸ್ಥಾನದಲ್ಲಿ ₹6 ಲಕ್ಷ ಮೌಲ್ಯದ ಬೆಳ್ಳಿ ಆಭರಣ ಕಳವು



ಮಾನ್ವಿ: ತಾಲೂಕಿನ ಬೆಟ್ಟದೂರು ಗ್ರಾಮದ ಮಾರೆಮ್ಮ ದೇವಸ್ಥಾನದಲ್ಲಿ ದೇವಿ ಮೂರ್ತಿಗಳಿಗೆ ಅಳವಡಿಸಲಾಗಿದ್ದ ಸುಮಾರು ₹6 ಲಕ್ಷ ಮೌಲ್ಯದ ಬೆಳ್ಳಿ ಮುಖವಾಡಗಳನ್ನು ಕಳ್ಳರು ಕಳವು ಮಾಡಿರುವ ಘಟನೆ ನವೆಂಬರ್ 2ರಂದು ನಡೆದಿದ್ದು, ಈ ಸಂಬಂಧ ಮಾನ್ವಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಗ್ರಾಮದ ಮಾರೆಮ್ಮ ದೇವಸ್ಥಾನದಲ್ಲಿರುವ ಐದು ದೇವಿ ಮೂರ್ತಿಗಳಿಗೆ ಅಳವಡಿಸಲಾಗಿದ್ದ ಬೆಳ್ಳಿಯಿಂದ ತಯಾರಿಸಿದ ಐದು ಮುಖವಾಡಗಳನ್ನು ದುಷ್ಕರ್ಮಿಗಳು ಕಳವು ಮಾಡಿದ್ದಾರೆ. ಕಳುವಾಗಿರುವ ಬೆಳ್ಳಿ ಮುಖವಾಡಗಳ ಒಟ್ಟು ತೂಕ ಅಂದಾಜು 7.5 ಕೆ.ಜಿ. ಇದ್ದು, ಅವುಗಳ ಮೌಲ್ಯ ಸುಮಾರು ₹6 ಲಕ್ಷ ಎಂದು ಅಂದಾಜಿಸಲಾಗಿದೆ.

ಗ್ರಾಮಸ್ಥರ ಧಾರ್ಮಿಕ ನಂಬಿಕೆ ಹಾಗೂ ಆರಾಧನೆಯ ಕೇಂದ್ರವಾಗಿರುವ ಮಾರೆಮ್ಮ ದೇವಸ್ಥಾನದಲ್ಲಿ ಈ ರೀತಿಯ ಕಳ್ಳತನ ನಡೆದಿರುವುದು ಸ್ಥಳೀಯರಲ್ಲಿ ಆತಂಕ ಮೂಡಿಸಿದೆ. ದೇವಿ ಮೂರ್ತಿಗಳ ಅಲಂಕಾರಕ್ಕಾಗಿ ಬಳಸಲಾಗುತ್ತಿದ್ದ ಬೆಲೆಬಾಳುವ ಬೆಳ್ಳಿ ಮುಖವಾಡಗಳನ್ನೇ ಕಳ್ಳರು ಗುರಿಯಾಗಿಸಿಕೊಂಡಿರುವುದು ಗಮನಾರ್ಹವಾಗಿದೆ.

ಘಟನೆಗೆ ಸಂಬಂಧಿಸಿದಂತೆ ಬೆಟ್ಟದೂರು ಗ್ರಾಮದ ರಮೇಶ ತಂದೆ ಯಲ್ಲಯ್ಯ ಪೂಜಾರಿ ಅವರು ಮಾನ್ವಿ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದಾರೆ. ದೂರಿನ ಆಧಾರದ ಮೇಲೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ.

ಕಳ್ಳತನದಲ್ಲಿ ಭಾಗಿಯಾಗಿರುವ ಆರೋಪಿಗಳ ಪತ್ತೆ ಹಾಗೂ ಕಳುವಾದ ಬೆಳ್ಳಿ ಆಭರಣಗಳ ವಶಕ್ಕೆ ಪಡೆಯುವ ನಿಟ್ಟಿನಲ್ಲಿ ಮಾನ್ವಿ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್ಪೆಕ್ಟರ್ ಸೋಮಶೇಖರ ಎಸ್. ಕೆಂಚರೆಡ್ಡಿ ಅವರು ಹೆಚ್ಚಿನ ತನಿಖೆ ಕೈಗೊಂಡಿದ್ದಾರೆ.

ದೇವಸ್ಥಾನದಲ್ಲಿನ ಬೆಲೆಬಾಳುವ ಆಭರಣಗಳ ಕಳ್ಳತನ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ಆರೋಪಿಗಳನ್ನು ಶೀಘ್ರ ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳಬೇಕೆಂಬ ಆಗ್ರಹ ಸ್ಥಳೀಯವಾಗಿ ವ್ಯಕ್ತವಾಗಿದೆ. ಪ್ರಕರಣದ ತನಿಖೆ ಮುಂದುವರಿದಿದೆ.

ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ ರಾಮಣ್ಣ ಹವಳೆಯವರಿಗೆ ಅಧಿಕೃತ ಆಹ್ವಾನ



ರಾಯಚೂರು, ನ. 5: ರಾಯಚೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ನವೆಂಬರ್ 14 ಮತ್ತು 15ರಂದು ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಆಯೋಜಿಸಲಾಗಿರುವ 12ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವ ರಾಷ್ಟ್ರ ಮತ್ತು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ರಾಮಣ್ಣ ಹವಳೆ ಅವರಿಗೆ ಸಮ್ಮೇಳನದ ಸ್ವಾಗತ ಸಮಿತಿಯ ಪದಾಧಿಕಾರಿಗಳು ಗುರುವಾರ ಅಧಿಕೃತ ಆಹ್ವಾನ ನೀಡಿದರು.

ಸಮ್ಮೇಳನದ ಸ್ವಾಗತ ಸಮಿತಿ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಎನ್. ಎಸ್. ಬೋಸರಾಜು ಅವರ ನೇತೃತ್ವದಲ್ಲಿ ಸಾಹಿತಿಗಳು, ಕನ್ನಡಪರ ಸಂಘಟನೆಗಳ ಮುಖಂಡರು ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ರಾಮಣ್ಣ ಹವಳೆ ಅವರನ್ನು ಭೇಟಿಯಾಗಿ ಸಮ್ಮೇಳನದ ಅಧಿಕೃತ ಆಮಂತ್ರಣ ಪತ್ರಿಕೆ ನೀಡಿ ಆತ್ಮೀಯವಾಗಿ ಆಹ್ವಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸ್ವಾಗತ ಸಮಿತಿಯ ಪದಾಧಿಕಾರಿಗಳು, ಜಿಲ್ಲೆಯ ಸಾಹಿತ್ಯಿಕ, ಸಾಂಸ್ಕೃತಿಕ ಹಾಗೂ ಐತಿಹಾಸಿಕ ಪರಂಪರೆಯನ್ನು ನಾಡಿನಾದ್ಯಂತ ಪರಿಚಯಿಸುವ ಉದ್ದೇಶದಿಂದ ಎರಡು ದಿನಗಳ ಕಾಲ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಆಯೋಜಿಸಲಾಗಿದೆ. ಜಿಲ್ಲೆಯ ಹಿರಿಯ ಸಾಹಿತಿ ರಾಮಣ್ಣ ಹವಳೆ ಅವರು ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವುದು ಜಿಲ್ಲೆಯ ಸಾಹಿತ್ಯ ವಲಯಕ್ಕೆ ಹೆಮ್ಮೆಯ ಸಂಗತಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಕನ್ನಡ ಭಾಷೆ, ಸಾಹಿತ್ಯ, ಕಲೆ, ಸಂಸ್ಕೃತಿ ಹಾಗೂ ನಾಡಿನ ಪರಂಪರೆಯ ಕುರಿತು ಚಿಂತನ-ಮಂಥನ ನಡೆಸಲು ಸಮ್ಮೇಳನ ಉತ್ತಮ ವೇದಿಕೆಯಾಗಲಿದೆ. ಹಿರಿಯ ಮತ್ತು ಯುವ ಸಾಹಿತಿಗಳು, 2ನೇ ಪುಟಕ್ಕೆ

ಮಾವಿನಕೆರೆ ಅಭಿವೃದ್ಧಿ ಹೆಸರಿನಲ್ಲಿ 15 ವರ್ಷಗಳಿಂದ ಅನುದಾನ ಲೂಟಿ: ರಾಮನಗೌಡ ಏಗನೂರು ಆರೋಪ



ರಾಯಚೂರು, ನ. 5: ನಗರದ ಐತಿಹಾಸಿಕ ಮಾವಿನಕೆರೆ ಅಭಿವೃದ್ಧಿ ಹೆಸರಿನಲ್ಲಿ ಕಳೆದ 15 ವರ್ಷಗಳಿಂದ ಕೋಟ್ಯಂತರ ರೂಪಾಯಿ ಅನುದಾನ ಖರ್ಚು ಮಾಡಲಾಗಿದ್ದರೂ ಕೆರೆಯ ಸ್ಥಿತಿಯಲ್ಲಿ ಯಾವುದೇ ಗಮನಾರ್ಹ ಸುಧಾರಣೆಯಾಗಿಲ್ಲ. ಸುಮಾರು ₹100 ಕೋಟಿಗೂ ಅಧಿಕ ಅನುದಾನ ವ್ಯಯಿಸಿರುವುದಾಗಿ ಹೇಳಲಾಗುತ್ತಿದ್ದರೂ ಕೆರೆ ಕೊಳಚೆಗುಂಡಿಯಾಗಿ ಮಾರ್ಪಟ್ಟಿದೆ. ಅಭಿವೃದ್ಧಿ ಕಾಮಗಾರಿಗಳ ಹೆಸರಿನಲ್ಲಿ ವ್ಯಾಪಕ ಅವ್ಯವಹಾರ ನಡೆದಿರುವ ಶಂಕೆಯಿದ್ದು, ಅನುದಾನದ ಬಳಕೆಯ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಜೆಡಿಎಸ್ ಮುಖಂಡ ರಾಮನಗೌಡ ಏಗನೂರು ಆಗ್ರಹಿಸಿದರು.


ನಗರದ ಮಾವಿನಕೆರೆ ಅಭಿವೃದ್ಧಿ ಕಾಮಗಾರಿಗಳನ್ನು ಗುರುವಾರ ಖುದ್ದಾಗಿ ವೀಕ್ಷಿಸಿದ ಅವರು, ಕೆರೆಯ ಒತ್ತುವರಿ, ಕೊಳಚೆ ನೀರಿನ ಸೇರ್ಪಡೆ, ಅಪೂರ್ಣ ಕಾಮಗಾರಿಗಳು ಹಾಗೂ ಅನುದಾನದ ಬಳಕೆಯಲ್ಲಿನ ಪಾರದರ್ಶಕತೆಯ ಕೊರತೆಯ ಕುರಿತು ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಮಾವಿನಕೆರೆ ಅಭಿವೃದ್ಧಿ ಎಂದರೆ ಕೆರೆಯ ಮೂಲ ಸ್ವರೂಪವನ್ನು ಸಂರಕ್ಷಿಸಿ, ಪರಿಸರ ಸಮತೋಲನ ಕಾಪಾಡುವುದರ ಜೊತೆಗೆ ಸಾರ್ವಜನಿಕರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವುದಾಗಿದೆ. ಆದರೆ ಇಲ್ಲಿ ಅಭಿವೃದ್ಧಿಯ ಹೆಸರಿನಲ್ಲಿ ಕೆರೆಯ ಜಾಗವನ್ನೇ ಒತ್ತುವರಿ ಮಾಡಲಾಗುತ್ತಿದೆ. ಸುಮಾರು 10ರಿಂದ 11 ಎಕರೆ ಕೆರೆ ಜಮೀನು ಒತ್ತುವರಿಯಾಗಿದೆ ಎಂಬ ಆರೋಪಗಳಿದ್ದರೂ ಅಧಿಕಾರಿಗಳು ಯಾವುದೇ ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ. ಒತ್ತುವರಿಯಾಗಿರುವ ಜಮೀನುಗಳಿಗೆ ಅನುಕೂಲವಾಗುವ ರೀತಿಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುತ್ತಿರುವುದು ಎಷ್ಟು ಸಮಂಜಸ ಎಂದು ಪ್ರಶ್ನಿಸಿದರು.

ನಗರದ ವಿವಿಧ ಬಡಾವಣೆಗಳಿಂದ ಹರಿದುಬರುವ ಚರಂಡಿ ನೀರು, ಒಳಚರಂಡಿ ತ್ಯಾಜ್ಯ ಹಾಗೂ ಮನೆಗಳ ಸ್ನಾನಗೃಹಗಳ ಕೊಳಚೆ ನೀರು ನಿರಂತರವಾಗಿ ಮಾವಿನಕೆರೆಗೆ ಸೇರುತ್ತಿದೆ. ಪರಿಣಾಮವಾಗಿ ಕೆರೆಯ ನೀರು ಹಸಿರು ಬಣ್ಣಕ್ಕೆ ತಿರುಗಿದ್ದು, ತೀವ್ರವಾಗಿ ಕಲುಷಿತಗೊಂಡಿದೆ. ಇಂತಹ ನೀರನ್ನು ಜಾನುವಾರುಗಳು ಕುಡಿದರೂ ಆರೋಗ್ಯಕ್ಕೆ ಅಪಾಯ ಎದುರಾಗುವ ಆತಂಕವಿದೆ ಎಂದು ಹೇಳಿದರು.

ಕೆರೆಯ 2ನೇ ಪುಟಕ್ಕೆ

ಕೃಷ್ಣಾ ಅಚ್ಚುಕಟ್ಟು ಪ್ರದೇಶದ ಬೆಳೆ ರಕ್ಷಣೆಗೆ ನ.30ರವರೆಗೆ ಕಾಲುವೆ ನೀರು ಹರಿಸಲು ಸಚಿವ ಡಾ. ಅಜಯ್ ಧರ್ಮಸಿಂಗ್ ಮನವಿ



ಬೆಂಗಳೂರು/ರಾಯಚೂರು, ನ. 5: ರಾಯಚೂರು ಸೇರಿದಂತೆ ಕೃಷ್ಣಾ ಅಚ್ಚುಕಟ್ಟು ಪ್ರದೇಶದಲ್ಲಿ ತೀವ್ರ ಬರ ಪರಿಸ್ಥಿತಿಯಿಂದ ರೈತರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ, ಆಲಮಟ್ಟಿ ಹಾಗೂ ನಾರಾಯಣಪುರ ಜಲಾಶಯಗಳಲ್ಲಿ ಲಭ್ಯವಿರುವ ನೀರಿನಲ್ಲಿ ಕುಡಿಯುವ ನೀರಿನ ಅಗತ್ಯಕ್ಕೆ ಮೀಸಲು ಕಾಯ್ದಿರಿಸಿ, ಉಳಿದ ನೀರನ್ನು ನವೆಂಬರ್ 30ರವರೆಗೆ ಕಾಲುವೆಗಳಿಗೆ ಹರಿಸುವ ಮೂಲಕ ರೈತರ ಬೆಳೆಗಳನ್ನು ರಕ್ಷಿಸಲು ತುರ್ತು ಕ್ರಮ ಕೈಗೊಳ್ಳುವಂತೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ಮನವಿ ಮಾಡಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಅವರಿಗೆ ಸಲ್ಲಿಸಿರುವ ಮನವಿಯಲ್ಲಿ, ಕೃಷ್ಣಾ ಅಚ್ಚುಕಟ್ಟು ಪ್ರದೇಶದ ರೈತರು ಎದುರಿಸುತ್ತಿರುವ ನೀರಾವರಿ ಸಮಸ್ಯೆ ಹಾಗೂ ಬೆಳೆಗಳ ಪ್ರಸ್ತುತ ಸ್ಥಿತಿಗತಿಗಳನ್ನು ವಿವರಿಸಿರುವ ಸಚಿವರು, ರೈತರ ಹಿತದೃಷ್ಟಿಯಿಂದ ಕಾಲುವೆಗಳಿಗೆ ನೀರು ಹರಿಸುವ ಅವಧಿಯನ್ನು ವಿಸ್ತರಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದ್ದಾರೆ.

ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳಲ್ಲಿ ಪ್ರಸ್ತುತ ಒಟ್ಟು ಸುಮಾರು 53 ಟಿಎಂಸಿ ನೀರು ಲಭ್ಯವಿದೆ. ಅಕ್ಟೋಬರ್ 15ರಂದು ನಡೆದ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ನವೆಂಬರ್ 12ರವರೆಗೆ ವಾರಾಬಂದಿ ಪದ್ಧತಿಯಡಿ ಕಾಲುವೆಗಳಿಗೆ ನೀರು ಹರಿಸಲು ತೀರ್ಮಾನಿಸಲಾಗಿತ್ತು. ಆದರೆ ಅಚ್ಚುಕಟ್ಟು ಪ್ರದೇಶದಲ್ಲಿ ಬೆಳೆದಿರುವ ಹತ್ತಿ, ತೊಗರಿ ಹಾಗೂ ಮೆಣಸಿನಕಾಯಿ ಬೆಳೆಗಳು ಪ್ರಸ್ತುತ ನಿರ್ಣಾಯಕ ಬೆಳವಣಿಗೆಯ ಹಂತದಲ್ಲಿದ್ದು, ಈ ಸಂದರ್ಭದಲ್ಲಿ ನೀರಿನ ಪೂರೈಕೆ 2ನೇ ಪುಟಕ್ಕೆ

ಮಂತ್ರಾಲಯದಲ್ಲಿ ಮತದಾನ ಮಾಡಿದ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದರು: ಪ್ರಜಾಪ್ರಭುತ್ವದ ಹಕ್ಕು ಚಲಾಯಿಸಲು ಕರೆ



ಮಂತ್ರಾಲಯ, ನ. 5: ಆಂಧ್ರಪ್ರದೇಶದಲ್ಲಿ ನಡೆಯುತ್ತಿರುವ ಮಂಡಲ ಪ್ರಾದೇಶಿಕ ಕ್ಷೇತ್ರ (ಎಂಪಿಟಿಸಿ) ಹಾಗೂ ಜಿಲ್ಲಾ ಪ್ರಾದೇಶಿಕ ಕ್ಷೇತ್ರ (ಜೆಡ್ಪಿಟಿಸಿ) ಚುನಾವಣೆಗಳ ಹಿನ್ನೆಲೆಯಲ್ಲಿ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಪೀಠಾಧಿಪತಿ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದರು ಗುರುವಾರ ತಮ್ಮ ಮತದಾನದ ಹಕ್ಕನ್ನು ಚಲಾಯಿಸಿದರು.

ಮಂತ್ರಾಲಯದ ಜಿಲ್ಲಾ ಪರಿಷತ್ ಪ್ರೌಢಶಾಲೆಯಲ್ಲಿ ಸ್ಥಾಪಿಸಲಾಗಿದ್ದ ಮತಗಟ್ಟೆಗೆ ಆಗಮಿಸಿದ ಶ್ರೀಗಳು ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ತಮ್ಮ ಹಕ್ಕನ್ನು ಚಲಾಯಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಗಳು, ಮತದಾನವು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬ ಅರ್ಹ ನಾಗರಿಕನಿಗೂ ದೊರೆತಿರುವ ಮಹತ್ವದ ಹಕ್ಕಾಗಿದೆ. ಪ್ರಜಾಪ್ರಭುತ್ವವನ್ನು ಬಲಪಡಿಸುವಲ್ಲಿ ಪ್ರತಿಯೊಬ್ಬ ಮತದಾರನ ಪಾತ್ರವೂ ಪ್ರಮುಖವಾಗಿದ್ದು, ಎಲ್ಲರೂ ತಮ್ಮ ಮತದಾನದ ಹಕ್ಕನ್ನು ತಪ್ಪದೇ ಚಲಾಯಿಸಬೇಕು ಎಂದು ಕರೆ ನೀಡಿದರು.

ಚುನಾವಣೆಗಳು ಪ್ರಜಾಪ್ರಭುತ್ವದ ಪ್ರಮುಖ ಆಧಾರಸ್ತಂಭವಾಗಿದ್ದು, ಜನಪ್ರತಿನಿಧಿಗಳನ್ನು ಆಯ್ಕೆ ಮಾಡುವ ಪ್ರಕ್ರಿಯೆಯಲ್ಲಿ ಸಾರ್ವಜನಿಕರು ಸಕ್ರಿಯವಾಗಿ ಭಾಗವಹಿಸಬೇಕು. ಮತದಾನದ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಮತ್ತಷ್ಟು ಸದೃಢಗೊಳಿಸಲು 2ನೇ ಪುಟಕ್ಕೆ

ಚೀಕಲಪರ್ವಿಯ ವಿಜಯದಾಸರ ಕಟ್ಟೆಗೆ ಉಡುಪಿ ಪಲಿಮಾರು ಮಠದ ಉಭಯ ಶ್ರೀಗಳ ಭೇಟಿ: ಭಕ್ತರಿಗೆ ಆಶೀರ್ವಚನ



ಮಾನ್ವಿ, ನ. 5: ತಾಲೂಕಿನ ಐತಿಹಾಸಿಕ ಹಾಗೂ ಧಾರ್ಮಿಕ ಮಹತ್ವ ಹೊಂದಿರುವ ಚೀಕಲಪರ್ವಿ ಗ್ರಾಮದ ಶ್ರೀ ವಿಜಯದಾಸರ ಜನ್ಮಸ್ಥಳ, ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ಸನ್ನಿಧಾನ ಹಾಗೂ ವಿಜಯದಾಸರ ಕಟ್ಟೆಗೆ ಉಡುಪಿ ಪಲಿಮಾರು ಮಠದ ಶ್ರೀ ವಿದ್ಯಾಧೀಶ ತೀರ್ಥ ಶ್ರೀಪಾದಂಗಳವರು ಮತ್ತು ಕಿರಿಯ ಶ್ರೀಗಳಾದ ಶ್ರೀ ವಿದ್ಯಾರಾಜೇಶ್ವರ ತೀರ್ಥ ಶ್ರೀಪಾದಂಗಳವರು ಭೇಟಿ ನೀಡಿ ದರ್ಶನ ಪಡೆದರು.

ಗ್ರಾಮದಲ್ಲಿರುವ ಶ್ರೀ ಮಂತ್ರಾಲಯ ರಾಘವೇಂದ್ರ ಸ್ವಾಮಿಗಳ ಮಠದ ಶ್ರೀ ಲಕ್ಷ್ಮೀನರಸಿಂಹ ಸನ್ನಿಧಾನ ಹಾಗೂ ಹರಿದಾಸ ಪರಂಪರೆಯ ಪ್ರಮುಖ ಸಂತರಾದ ಶ್ರೀ ವಿಜಯದಾಸರ ಕಟ್ಟೆಗೆ ಆಗಮಿಸಿದ ಉಭಯ ಶ್ರೀಗಳು ದೇವರ ದರ್ಶನ ಪಡೆದು ಪ್ರಾರ್ಥನೆ ಸಲ್ಲಿಸಿದರು. ಬಳಿಕ ನೆರೆದಿದ್ದ ಭಕ್ತರಿಗೆ ಅನುಗ್ರಹ ಸಂದೇಶ ನೀಡಿ, ಫಲಮಂತ್ರಾಕ್ಷತೆ ವಿತರಿಸಿ ಆಶೀರ್ವದಿಸಿದರು.

ಈ ಸಂದರ್ಭದಲ್ಲಿ ಅನುಗ್ರಹ ಸಂದೇಶ ನೀಡಿದ ಶ್ರೀ ವಿದ್ಯಾಧೀಶ ತೀರ್ಥ ಶ್ರೀಪಾದಂಗಳವರು, ಭಗವಂತನ ಮೇಲಿನ ಭಕ್ತಿ, ಧಾರ್ಮಿಕ ಶ್ರದ್ಧೆ ಹಾಗೂ ಸನ್ಮಾರ್ಗದ ಜೀವನ ಮನುಷ್ಯನ ಆಧ್ಯಾತ್ಮಿಕ ಬೆಳವಣಿಗೆಗೆ ಪೂರಕವಾಗಿವೆ. ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದಲ್ಲಿ ಧಾರ್ಮಿಕ 2ನೇ ಪುಟಕ್ಕೆ

ಹಾಲು, ಬಸ್ ಪ್ರಯಾಣ ದರ ಏರಿಕೆ ಖಂಡಿಸಿ ಕೆಆರ್‌ಎಸ್ ಪಕ್ಷದ ಪ್ರತಿಭಟನೆ



ರಾಯಚೂರು, ನ. 5: ರಾಜ್ಯ ಸರ್ಕಾರ ಹಾಲು ಹಾಗೂ ಬಸ್ ಪ್ರಯಾಣ ದರವನ್ನು ಹೆಚ್ಚಿಸಿರುವುದನ್ನು ಖಂಡಿಸಿ, ದರ ಏರಿಕೆಯನ್ನು ಕೂಡಲೇ ಹಿಂಪಡೆಯಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಷ್ಟ್ರ ಸಮಿತಿ (ಕೆಆರ್ ಎಸ್) ಪಕ್ಷದ ವತಿಯಿಂದ ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಕೆಆರ್‌ಎಸ್ ಪಕ್ಷದ ಜಿಲ್ಲಾಧ್ಯಕ್ಷ ವಿಜಯ್ ಕುರ್ಮಾ, ರಾಜ್ಯ ಸರ್ಕಾರ ನವೆಂಬರ್ 1ರಿಂದ ಹಾಲಿನ ದರ ಹಾಗೂ ನವೆಂಬರ್ 5ರಿಂದ ಬಸ್ ಪ್ರಯಾಣ ದರವನ್ನು ಹೆಚ್ಚಿಸಿರುವುದರಿಂದ ಬಡವರು, ರೈತರು, ಕಾರ್ಮಿಕರು, ವಿದ್ಯಾರ್ಥಿಗಳು ಹಾಗೂ ಮಧ್ಯಮ ವರ್ಗದ ಕುಟುಂಬಗಳ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳುತ್ತಿದೆ ಎಂದು ಆರೋಪಿಸಿದರು.

ಈಗಾಗಲೇ ಅಗತ್ಯ ವಸ್ತುಗಳು, ತರಕಾರಿ, ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಏರಿಕೆಯಿಂದ ಜನಸಾಮಾನ್ಯರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಹಾಲು ಮತ್ತು ಸಾರ್ವಜನಿಕ ಸಾರಿಗೆ ದರವನ್ನು ಹೆಚ್ಚಿಸುವ ನಿರ್ಧಾರ ಜನರ ಜೀವನ ನಿರ್ವಹಣೆಯನ್ನು ಮತ್ತಷ್ಟು ದುಬಾರಿಯಾಗಿಸುತ್ತದೆ. ಸರ್ಕಾರ ಜನಸಾಮಾನ್ಯರ ಆರ್ಥಿಕ ಪರಿಸ್ಥಿತಿಯನ್ನು ಪರಿಗಣಿಸಿ ದರ ಏರಿಕೆ ನಿರ್ಧಾರವನ್ನು ಮರುಪರಿಶೀಲಿಸಬೇಕು ಎಂದು ಒತ್ತಾಯಿಸಿದರು.

ರೈತರಿಗೆ ಹೆಚ್ಚಿನ ದರ ಒದಗಿಸುವ ಉದ್ದೇಶದಿಂದ ಹಾಲಿನ ದರ ಹೆಚ್ಚಿಸಲಾಗಿದೆ ಎಂದು ಸರ್ಕಾರ ಸಮರ್ಥಿಸಿಕೊಳ್ಳುತ್ತಿದೆ. ಆದರೆ ಹಾಲು ಒಕ್ಕೂಟಗಳಲ್ಲಿ ನಡೆಯುತ್ತಿರುವ ಅವ್ಯವಹಾರ ಹಾಗೂ ಅಕ್ರಮಗಳನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಪರಿಣಾಮಕಾರಿ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆರೋಪಿಸಿದರು. ಮಂಡ್ಯ ಹಾಲು ಒಕ್ಕೂಟದಲ್ಲಿ ನಡೆದಿದೆ ಎನ್ನಲಾದ ಹಾಲಿನ ಕಲಬೆರಕೆ ಹಾಗೂ ನೀರು ಬೆರೆಸಿದ ಪ್ರಕರಣಗಳ ಕುರಿತು ಸಮಗ್ರ ಮತ್ತು ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. 2ನೇ ಪುಟಕ್ಕೆ

ಕಾಡುಗೊಂಡನಹಳ್ಳಿ ಮೆಟ್ರೋ ನಿಲ್ದಾಣಕ್ಕೆ ಅರೇಬಿಕ್ ಕಾಲೇಜು ಹೆಸರಿಡಲು ಸಚಿವ ಜಮೀರ್ ಮನವಿ: ಕನ್ನಡಪರ ಸಂಘಟನೆಗಳ ವಿರೋಧ



ಬೆಂಗಳೂರು: ರಾಜಧಾನಿ ಬೆಂಗಳೂರಿನ ಬಹುನಿರೀಕ್ಷಿತ ನಮ್ಮ ಮೆಟ್ರೋ ಪಿಂಕ್ ಲೈನ್ ಮಾರ್ಗದ ಉದ್ಘಾಟನೆಗೆ ಸಿದ್ಧತೆಗಳು ನಡೆಯುತ್ತಿರುವ ಬೆನ್ನಲ್ಲೇ, ಮಾರ್ಗದಲ್ಲಿರುವ ಕಾಡುಗೊಂಡನಹಳ್ಳಿ ಮೆಟ್ರೋ ನಿಲ್ದಾಣದ ಹೆಸರು ಬದಲಾವಣೆ ಪ್ರಸ್ತಾಪ ವಿವಾದಕ್ಕೆ ಕಾರಣವಾಗಿದೆ. ನಿಲ್ದಾಣಕ್ಕೆ ಅರೇಬಿಕ್ ಕಾಲೇಜು ಮೆಟ್ರೋ ನಿಲ್ದಾಣ ಎಂದು ಮರುನಾಮಕರಣ ಮಾಡುವಂತೆ ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಮನವಿ ಸಲ್ಲಿಸಿದ್ದು, ಈ ಪ್ರಸ್ತಾಪಕ್ಕೆ ಕನ್ನಡಪರ ಸಂಘಟನೆಗಳು ಹಾಗೂ ಸಾಮಾಜಿಕ ಜಾಲತಾಣ ಬಳಕೆದಾರರಿಂದ ವಿರೋಧ ವ್ಯಕ್ತವಾಗಿದೆ.

ಕಾಡುಗೊಂಡನಹಳ್ಳಿ ಮೆಟ್ರೋ ನಿಲ್ದಾಣದ ಹೆಸರನ್ನು ಬದಲಾಯಿಸುವಂತೆ ಕೋರಿ ಸಚಿವ ಜಮೀರ್ ಅಹ್ಮದ್ ಖಾನ್ ಅವರು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿದ್ದಾರೆ ಎನ್ನಲಾಗಿದೆ. ಸ್ಥಳೀಯ ಪ್ರದೇಶದ ಐತಿಹಾಸಿಕ ಹಾಗೂ ಭೌಗೋಳಿಕ ಗುರುತನ್ನು ಪ್ರತಿಬಿಂಬಿಸುವ ಉದ್ದೇಶದಿಂದ ನಿಲ್ದಾಣಕ್ಕೆ ಅರೇಬಿಕ್ ಕಾಲೇಜು ಎಂಬ ಹೆಸರನ್ನು ಪರಿಗಣಿಸುವಂತೆ ಮನವಿಯಲ್ಲಿ ಕೋರಲಾಗಿದೆ.

ಈ ಸಂದರ್ಭದಲ್ಲಿ ಮಾಜಿ ಸಚಿವ ಬಿ. ನಾಗೇಂದ್ರ ಹಾಗೂ ಹೆಸ್ಕಾಂ ಅಧ್ಯಕ್ಷ ಅಜ್ಜಂಪೀರ್ ಖಾದ್ರಿ ಉಪಸ್ಥಿತರಿದ್ದರು ಎಂದು ತಿಳಿದುಬಂದಿದೆ.

ಆದರೆ, ಈಗಾಗಲೇ ಕಾಡುಗೊಂಡನಹಳ್ಳಿ ಎಂಬ ಸ್ಥಳೀಯ ಹೆಸರಿನಿಂದ ಗುರುತಿಸಿಕೊಂಡಿರುವ ಮೆಟ್ರೋ ನಿಲ್ದಾಣಕ್ಕೆ ಮರುನಾಮಕರಣ ಮಾಡುವ ಅಗತ್ಯವೇನು ಎಂಬ ಪ್ರಶ್ನೆಯನ್ನು ಕನ್ನಡಪರ ಸಂಘಟನೆಗಳು ಮುಂದಿಟ್ಟಿವೆ. ಬೆಂಗಳೂರಿನ ಐತಿಹಾಸಿಕ ಸ್ಥಳನಾಮಗಳು ಹಾಗೂ ಕನ್ನಡದ ಸಾಂಸ್ಕೃತಿಕ ಅಸ್ಮಿತೆಯನ್ನು ಉಳಿಸಿಕೊಳ್ಳುವುದು ಮುಖ್ಯವಾಗಿದ್ದು, ಸ್ಥಳೀಯವಾಗಿ ಬಳಕೆಯಲ್ಲಿರುವ ಹೆಸರನ್ನು ಬದಲಾಯಿಸುವುದು ಸೂಕ್ತವಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿವೆ.

ಮೆಟ್ರೋ ನಿಲ್ದಾಣಗಳಿಗೆ ಹೆಸರು ನಿಗದಿಪಡಿಸುವಾಗ ಆಯಾ ಪ್ರದೇಶಗಳ ಇತಿಹಾಸ, ಭೌಗೋಳಿಕ ಗುರುತು ಹಾಗೂ ಸ್ಥಳೀಯ ಜನರ ಅಭಿಪ್ರಾಯಗಳಿಗೆ ಆದ್ಯತೆ ನೀಡಬೇಕು. ಕಾಡುಗೊಂಡನಹಳ್ಳಿ ಎಂಬ ಹೆಸರನ್ನು ಮುಂದುವರಿಸುವುದು ಅಥವಾ ಕನ್ನಡ ಏಕೀಕರಣ ಹೋರಾಟದಲ್ಲಿ ಮಹತ್ವದ ಪಾತ್ರ ವಹಿಸಿದ ಹೋರಾಟಗಾರರ ಹೆಸರನ್ನು ಪರಿಗಣಿಸುವುದು ಸೂಕ್ತ ಎಂದು ಕೆಲವು ಕನ್ನಡಪರ ಸಂಘಟನೆಗಳು ಆಗ್ರಹಿಸಿವೆ.

ಇನ್ನೊಂದೆಡೆ, ಹೆಸರು ಬದಲಾವಣೆ ಪ್ರಸ್ತಾಪವು ಸಾಮಾಜಿಕ 2ನೇ ಪುಟಕ್ಕೆ

ಉದ್ಯಮಿ ಮಹ್ಮದ್ ಮಹಿಬೂಬ್ ನಾಗುಂಡಿಗೆ ಕಲಾ ಸಂಕುಲ ಸಂಸ್ಥೆಯ ರಾಜ್ಯಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿ



ದೇವದುರ್ಗ: ವ್ಯಾಪಾರ ಎಂದರೆ ಕೇವಲ ಲಾಭ-ನಷ್ಟದ ಲೆಕ್ಕವಲ್ಲ, ಅದು ಮನುಷ್ಯತ್ವದ ಸೇವೆ. ಜೊತೆಗೆ ಮಾನವೀಯತೆಯ ಪಾಠವೂ ಹೌದು ಎಂಬುದನ್ನು ಬದುಕಿನ ಮೂಲಕ ತೋರಿಸಿಕೊಟ್ಟವರು ದೇವದುರ್ಗದ ಯುವ ಉದ್ಯಮಿ ಹಾಗೂ ಲಿಮ್ರಾ ಜ್ಯೂಸ್ ಸೆಂಟರ್‌ನ ಮಾಲೀಕ ಮಹ್ಮದ್ ಮಹಿಬೂಬ್ ನಾಗುಂಡಿ. ಇಂತಹಉದ್ಯಮಿಗೆಕಲಾಸಂಕುಲಸಂಸ್ಥೆಯಿಂದ ನವೆಂಬರ್ 8ರಂದು ರಂಗಮಂದಿರದಲ್ಲಿ ಆಯೋಜಿಸಲಾಗಿರುವ ದೇಸೀ ಸಂಭ್ರಮ ಸಮಾರಂಭದಲ್ಲಿ ರಾಜ್ಯಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ.

ಮಹ್ಮದ್ ಮಹಿಬೂಬ್ ನಾಗುಂಡಿ ಅವರು ಎಸ್‌ಎಸ್‌ಎಲ್‌ಸಿವರೆಗೆ ಮಾತ್ರ ಓದಿದ್ದು, ತಂದೆ ಮಹ್ಮದ್ ಖಾಸಿಂಸಾಬ್ ನಾಗುಂಡಿ ಅವರು 1996ರಲ್ಲಿ ಸ್ಥಾಪಿಸಿದ ಲಿಮ್ರಾ ಜ್ಯೂಸ್ ಸೆಂಟರ್‌ನೊಂದಿಗೆ ವ್ಯಾಪಾರೋದ್ಯಮಕ್ಕೆ ಕಾಲಿಟ್ಟರು. ಅಂದಿನಿಂದ ಇಂದಿನವರೆಗೆ 30 ವರ್ಷಗಳಿಂದ ನಿರಂತರವಾಗಿ ಗ್ರಾಹಕರ ಮೆಚ್ಚುಗೆ ಗಳಿಸುತ್ತಾ ಬಂದಿದ್ದಾರೆ.

ತಂದೆಯ ಗರಡಿಯಲ್ಲಿ ವ್ಯಾಪಾರದ ಆಳ-ಅಗಲವನ್ನು ಅರಿತುಕೊಂಡ ಮಹ್ಮದ್ ಮಹಿಬೂಬ್ ಅವರು ಒಂದೇ ಜ್ಯೂಸ್ ಸೆಂಟರ್‌ಗೆ ಸೀಮಿತವಾಗದೆ ವಿವಿಧ ವ್ಯಾಪಾರಗಳಲ್ಲಿ ತೊಡಗಿಸಿಕೊಂಡರು. ವಿಶೇಷ ಬಿರಿಯಾನಿ, ರುಚಿಕರ ಜಿಲೇಬಿ, ಸಮೋಸಾ, ಬಾಲಿಶ್ ಸೇರಿದಂತೆ ವಿವಿಧ ಆಹಾರ ಪದಾರ್ಥಗಳ ವ್ಯಾಪಾರದಲ್ಲಿ ಯಶಸ್ವಿಯಾಗಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ.

ಮಹ್ಮದ್ ಮಹಿಬೂಬ್ ಅವರ ವಿಶೇಷತೆ ಎಂದರೆ, ತಮ್ಮಲ್ಲಿ ಕೆಲಸ ಮಾಡುವವರನ್ನು ತಮ್ಮ ಕುಟುಂಬದ ಸದಸ್ಯರಂತೆ ಭಾವಿಸುವುದು. ನಾಗಾಲ್ಯಾಂಡ್, ಒಡಿಶಾ, ಹೈದರಾಬಾದ್, ಉತ್ತರ ಪ್ರದೇಶ ಸೇರಿದಂತೆ ದೇಶದ ವಿವಿಧ ಭಾಗಗಳಿಂದ ಕೆಲಸ ಹುಡುಕಿಕೊಂಡು ಬಂದವರಿಗೆ ಉದ್ಯೋಗ ಹಾಗೂ ಆಶ್ರಯ ನೀಡಿದ್ದಾರೆ.

ತಮಗೆ ನಷ್ಟವಾದರೂ ಸರಿ, ಕೆಲಸಗಾರರಿಗೆ ಮಾತ್ರ ಕೈತುಂಬ ಸಂಬಳ ನೀಡುವ ಉದಾರ ಗುಣಕ್ಕೆ ಹೆಸರುವಾಸಿಯಾಗಿದ್ದಾರೆ. ನಷ್ಟ ಎಂಬ ಪದದ ಅರ್ಥ ನನಗೆ ಗೊತ್ತಿಲ್ಲ. ಆದರೆ ನನ್ನ ಜೊತೆ ದುಡಿಯುವವರ ಹೊಟ್ಟೆಯ ಬಗ್ಗೆ ನನಗೆ ಚೆನ್ನಾಗಿ ಗೊತ್ತು ಎಂಬುದು ಅವರ ಮನದಾಳದ ಮಾತು.

ಬೇಸಿಗೆಯಲ್ಲಿ ಲಿಮ್ರಾ ಜ್ಯೂಸ್ ಸೆಂಟರ್ ಗ್ರಾಹಕರಿಂದ ಗಿಜಿಗುಡುತ್ತಿರುತ್ತದೆ. ಚಿಕ್ಕು, ಆ್ಯಪಲ್, ಬಾದಾಮಿ, ಪೈನಾಪಲ್ ಜ್ಯೂಸ್‌ಗಳನ್ನು ಯಾವುದೇ ರಾಸಾಯನಿಕ ಬಳಸದೆ ನೈಸರ್ಗಿಕವಾಗಿ ತಯಾರಿಸಿಕೊಡುವುದೇ ಈ ಸೆಂಟರ್‌ನ ವಿಶೇಷತೆ.

ಗಡಿಗಿ ಲಸ್ಸಿ ಮತ್ತು ಗೋಡಂಬಿ ಜ್ಯೂಸ್ ಅತ್ಯಂತ ಜನಪ್ರಿಯವಾಗಿವೆ. ಇವುಗಳಿಗಾಗಿಯೇ ದೂರದೂರಿನಿಂದ ಗ್ರಾಹಕರು ಹುಡುಕಿಕೊಂಡು ಬರುತ್ತಾರೆ. ಎಳನೀರು ಕೂಡ ಇಲ್ಲಿನ ಮತ್ತೊಂದು ಆಕರ್ಷಣೆಯಾಗಿದೆ.

ಮಂತ್ರಿಗಳು, ಶಾಸಕರು ಸೇರಿದಂತೆ ಅನೇಕ ಜನಪ್ರತಿನಿಧಿಗಳು ಈ ಜ್ಯೂಸ್ ಸೆಂಟರ್‌ನಿಂದಲೇ ಎಳನೀರು ಮತ್ತು ವಿವಿಧ ಬಗೆಯ ಜ್ಯೂಸ್‌ಗಳನ್ನು ತರಿಸಿಕೊಂಡು ಸೇವಿಸುವ ಪರಿಪಾಠವಿದೆ.

ಮಹಿಬೂಬ್ ಅವರು ಕೇವಲ ವ್ಯಾಪಾರದಲ್ಲಿ ಮಗ್ನರಾಗದೆ, ದೇಶ-ವಿದೇಶಗಳನ್ನು ಸುತ್ತುವುದರ ಜೊತೆಗೆ ದಾನ-ಧರ್ಮದ ಕಾರ್ಯಗಳಲ್ಲೂ ಮುಂಚೂಣಿಯಲ್ಲಿದ್ದಾರೆ. ಶಾಲಾ ಮಕ್ಕಳಿಗೆ ಉಚಿತವಾಗಿ ನೋಟ್‌ಬುಕ್, ಪೆನ್ ವಿತರಿಸುವುದು, ಜಯಂತಿಗಳ ಸಂದರ್ಭದಲ್ಲಿ ನೀರಿನ ಪ್ಯಾಕೆಟ್‌ಗಳನ್ನು ಸರಬರಾಜು ಮಾಡುವುದು, ಕನ್ನಡ ಸಾಹಿತ್ಯ ಪರಿಷತ್ತು, ಚುಟುಕು ಸಾಹಿತ್ಯ ಪರಿಷತ್ತು ಸೇರಿದಂತೆ ಕನ್ನಡಪರ ಕಾರ್ಯಕ್ರಮಗಳಿಗೆ ಸದಾ ಬೆಂಬಲ ನೀಡುವುದು ಅವರ ಸ್ವಭಾವವಾಗಿದೆ.

ಇಂತಹ ಸೇವಾ ಮನೋಭಾವ ಹೊಂದಿರುವ ಮಹ್ಮದ್ ಮಹಿಬೂಬ್ ಅವರ ಸೇವೆಯನ್ನು ಗುರುತಿಸಿ, ಕಲಾ ಸಂಕುಲ ಸಂಸ್ಥೆಯು ನವೆಂಬರ್ 8ರಂದು ರಂಗಮಂದಿರದಲ್ಲಿ ನಡೆಯುವ ದೇಸೀ ಸಂಭ್ರಮ ಕಾರ್ಯಕ್ರಮದಲ್ಲಿ ರಾಜ್ಯಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸುತ್ತಿರುವುದು ನಮ್ಮೆಲ್ಲರ ಹೆಮ್ಮೆಯ ಸಂಗತಿಯಾಗಿದೆ.

ವ್ಯಾಪಾರದ ಜೊತೆಗೆ ಮನುಷ್ಯತ್ವವನ್ನೂ ಬೆಳೆಸಿಕೊಂಡಿರುವ ಮಹ್ಮದ್ ಮಹಿಬೂಬ್ ನಾಗುಂಡಿ ಅವರು ಇಂದಿನ ಯುವಕರಿಗೆ ಮಾದರಿಯಾಗಿದ್ದಾರೆ.

''ಮಹ್ಮದ್ ಮಹಿಬೂಬ್ ಅವರ ಅಂಗಡಿ ಎಂದರೆ ನಮಗೆ ನಂಬಿಕೆ. ಎಳನೀರು ಬೇಕಾದರೂ, ಜ್ಯೂಸ್ ಬೇಕಾದರೂ ನಾವು ಮೊದಲು ನೆನಪಿಸಿಕೊಳ್ಳುವುದು ಲಿಮ್ರಾ ಜ್ಯೂಸ್ ಸೆಂಟರ್ ಅನ್ನೇ. ವ್ಯಾಪಾರದಲ್ಲಿ ಪ್ರಾಮಾಣಿಕತೆ ಮತ್ತು ನಿಷ್ಠೆ ಹೊಂದಿರುವ ವ್ಯಕ್ತಿ. ತಂದೆಯಿಂದ ಬಂದ ಗರಡಿ ಸಂಸ್ಕಾರವನ್ನು ಮಗ ಇಂದಿಗೂ ಉಳಿಸಿಕೊಂಡು ಬಂದಿದ್ದಾನೆ. ಗಡಿಗಿ ಲಸ್ಸಿ, ಗೋಡಂಬಿ ಜ್ಯೂಸ್ ಎಂದರೆ ದೇವದುರ್ಗದಲ್ಲೇ ಪ್ರಸಿದ್ಧ. ರಾಸಾಯನಿಕ ಬಳಸದೆ ಶುದ್ಧವಾಗಿ ತಯಾರಿಸಿಕೊಡುತ್ತಾರೆ ಎಂಬುದೇ ಇವರ ದೊಡ್ಡತನ.''
ಬಸವರಾಜ ಯಲ್ಲಪ್ಪ ಅಕ್ಕರಿಕಿ, ಯುವ ರಾಜಕಾರಣಿ.

''ಕೆಲಸಗಾರರನ್ನು ತಮ್ಮ ಕುಟುಂಬದವರಂತೆ ನೋಡಿಕೊಳ್ಳುವ ಮಾಲೀಕ. ತಮಗೆ ನಷ್ಟವಾದರೂ ಕೆಲಸಗಾರರ ಸಂಬಳಕ್ಕೆ ಮೋಸ ಮಾಡದ ಗುಣ ಈ ಕಾಲದಲ್ಲಿ ಅಪರೂಪ. ವ್ಯಾಪಾರದ ಜೊತೆಗೆ ಕನ್ನಡ, ಸಾಹಿತ್ಯ ಹಾಗೂ ದಾನ-ಧರ್ಮವನ್ನು ಬೆಳೆಸಿದ ಮಹ್ಮದ್ ಮಹಿಬೂಬ್ ನಾಗುಂಡಿ ಅವರಂತಹವರನ್ನು ಗುರುತಿಸುವುದು ನಮ್ಮ ಕರ್ತವ್ಯ. ಅವರಿಗೆ ರಾಜ್ಯಮಟ್ಟದ ಪ್ರಶಸ್ತಿ ನೀಡುತ್ತಿರುವುದು ನಮಗೆ ಹೆಮ್ಮೆಯ ಸಂಗತಿ.''
ಮಾರುತಿ ಬಡಿಗೇರ, ಕಲಾ ಸಂಕುಲ ಸಂಸ್ಥೆ, ರಾಯಚೂರು.

ಅಮೃತ ವಾಣಿ

ನಂಬಿಕೆ ಮಾತ್ರ ಕಳೆದುಕೊಳ್ಳಬೇಡ ಪ್ರಾರ್ಥನೆ ಮಾಡು ಪ್ರಯತ್ನ ಪಡು.

1639ನೆಯ ದಿನಕ್ಕೆ ಏಮ್ಸ್ ಹೋರಾಟ

ಡಿಸೆಂಬರ್ ಅಂತ್ಯದವರೆಗೆ ಕಾಲುವೆಗಳಿಗೆ ನೀರು ಹರಿಸಲು ಆಗ್ರಹಿಸಿ ರೈತರಿಂದ ಬೃಹತ್ ಪ್ರತಿಭಟನೆ



ಲಿಂಗಸುಗೂರು, ನ.5: ತಾಲೂಕಿನ ರೈತರ ಜೀವನಾಡಿಯಾಗಿರುವ ನಾರಾಯಣಪುರ ಬಲದಂಡೆ ಹಾಗೂ ರಾಮಪುರ ಏತ ನೀರಾವರಿ ಕಾಲುವೆಗಳಿಗೆ ಡಿಸೆಂಬರ್ ಕೊನೆಯ ವಾರದವರೆಗೆ ನಿರಂತರವಾಗಿ ನೀರು ಹರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಪಟ್ಟಣದ ಬಸವಸಾಗರ ಕ್ರಾಸ್ ಬಳಿ ನಾಲ್ಕು ಕಡೆ ರಸ್ತೆ ತಡೆ ನಡೆಸಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಬಸವರಾಜ ಕೋಡಿಹಾಳ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ರೈತರು ನೀರಾವರಿ ಸಮಸ್ಯೆಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ತಹಶೀಲ್ದಾರ್ ಸತ್ಯಮ್ಮ ಅವರಿಗೆ ಮನವಿ ಪತ್ರ ಸಲ್ಲಿಸಿ, ಬೆಳೆಗಳ ರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಂಘದ ತಾಲೂಕು ಅಧ್ಯಕ್ಷ ದುರ್ಗಾಪ್ರಸಾದ ರೆಡ್ಡಿ ಮಾತನಾಡಿ, ನವೆಂಬರ್ 12ರಿಂದ ಕಾಲುವೆಗಳಿಗೆ ನೀರು ಹರಿಸುವುದನ್ನು ಸ್ಥಗಿತಗೊಳಿಸಲು ನಿರ್ಧರಿಸಿರುವುದು ರೈತರಲ್ಲಿ ತೀವ್ರ ಆತಂಕ ಉಂಟುಮಾಡಿದೆ. ತಾಲೂಕಿನ ಬಹುತೇಕ ರೈತರು ಕೃಷಿಗಾಗಿ ನಾರಾಯಣಪುರ ಬಲದಂಡೆ ಹಾಗೂ ರಾಮಪುರ ಏತ ನೀರಾವರಿ ಕಾಲುವೆಗಳ ನೀರನ್ನೇ ಅವಲಂಬಿಸಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ನೀರು ಸ್ಥಗಿತಗೊಳಿಸಿದರೆ ರೈತರು ಬೆಳೆದಿರುವ ಬೆಳೆಗಳಿಗೆ ಭಾರಿ ಹಾನಿಯಾಗಲಿದೆ ಎಂದು ಹೇಳಿದರು.

ಪ್ರಸಕ್ತ ಹಿಂಗಾರು ಹಂಗಾಮಿನಲ್ಲಿ ರೈತರು ಕಡಲೆ, ಜೋಳ, ಗೋಧಿ, ಹತ್ತಿ ಸೇರಿದಂತೆ ವಿವಿಧ ಬೆಳೆಗಳನ್ನು ಬಿತ್ತನೆ ಮಾಡಿದ್ದಾರೆ. ಸದ್ಯ ಬೆಳೆಗಳು ಬೆಳವಣಿಗೆಯ ಹಂತದಲ್ಲಿದ್ದು, ಈ ಸಂದರ್ಭದಲ್ಲಿ ಸಮರ್ಪಕ ನೀರಾವರಿ ಸೌಲಭ್ಯ ಅತ್ಯಂತ ಅಗತ್ಯವಾಗಿದೆ. ಕಾಲುವೆಗಳಿಗೆ ನೀರು ಹರಿಸುವುದನ್ನು ಸ್ಥಗಿತಗೊಳಿಸಿದರೆ ಸಾವಿರಾರು ಎಕರೆ ಪ್ರದೇಶದಲ್ಲಿನ ಬೆಳೆಗಳು ಒಣಗುವ ಆತಂಕ ಎದುರಾಗಲಿದೆ ಎಂದು ತಿಳಿಸಿದರು.

ರೈತರು ಬಿತ್ತನೆ ಬೀಜ, ರಸಗೊಬ್ಬರ, ಕೂಲಿ ಕಾರ್ಮಿಕರ ವೇತನ ಹಾಗೂ ಡೀಸೆಲ್ ಸೇರಿದಂತೆ ಕೃಷಿ ಚಟುವಟಿಕೆಗಳಿಗಾಗಿ ಈಗಾಗಲೇ ಲಕ್ಷಾಂತರ ರೂಪಾಯಿ ಸಾಲ ಮಾಡಿ ಖರ್ಚು ಮಾಡಿದ್ದಾರೆ. ಬೆಳೆಗಳು ಕೈಗೆ ಬರುವ ಹಂತದಲ್ಲಿ ನೀರಿನ ಕೊರತೆ ಉಂಟಾದರೆ ರೈತರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಲಿದ್ದಾರೆ. ಕೃಷಿ ವೆಚ್ಚ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಸಂದರ್ಭದಲ್ಲಿ ನೀರಾವರಿ ಸೌಲಭ್ಯವನ್ನು ಸ್ಥಗಿತಗೊಳಿಸುವುದು ರೈತರ ಬದುಕಿನ ಮೇಲೆ ಗಂಭೀರ ಪರಿಣಾಮ ಬೀರಲಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರೈತರ ಹಿತದೃಷ್ಟಿಯಿಂದ ನಾರಾಯಣಪುರ ಬಲದಂಡೆ ಹಾಗೂ ರಾಮಪುರ ಏತ ನೀರಾವರಿ ಕಾಲುವೆಗಳಿಗೆ ಡಿಸೆಂಬರ್ ಅಂತ್ಯದವರೆಗೆ ಸಮರ್ಪಕ ಪ್ರಮಾಣದಲ್ಲಿ ನಿರಂತರವಾಗಿ ನೀರು ಹರಿಸಬೇಕು. ವಿಶೇಷವಾಗಿ ಕಾಲುವೆಗಳ ಕೊನೆಯ ಭಾಗದಲ್ಲಿರುವ ರೈತರ ಜಮೀನುಗಳಿಗೆ ನೀರು ತಲುಪುತ್ತಿದೆಯೇ ಎಂಬುದನ್ನು ಸಂಬಂಧಪಟ್ಟ ಅಧಿಕಾರಿಗಳು ಖುದ್ದಾಗಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಬೇಕು ಎಂದು ಒತ್ತಾಯಿಸಿದರು.

ಕಾಲುವೆಗಳ ಮೂಲಕ ನೀರಿನ ಸಮರ್ಪಕ ಹಂಚಿಕೆ ಹಾಗೂ ನಿರ್ವಹಣೆಗೆ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳಬೇಕು. ನೀರು ಹರಿಸುವಲ್ಲಿ ಯಾವುದೇ ತಾರತಮ್ಯವಾಗದಂತೆ ನೋಡಿಕೊಳ್ಳಬೇಕು. ರೈತರ ಬೆಳೆಗಳ ರಕ್ಷಣೆಗೆ ಸರ್ಕಾರ ಹಾಗೂ ನೀರಾವರಿ ಇಲಾಖೆ ಆದ್ಯತೆ ನೀಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಸಂಘದ ರಾಜ್ಯ ಉಪಾಧ್ಯಕ್ಷ ಹನುಮಂತಪ್ಪ ಹೊಳೆಯಾಚಿ, ರಾಜ್ಯ ಪ್ರಧಾನ ಕಾರ್ಯದರ್ಶಿ ಮಲ್ಲನಗೌಡ, ಮಹಾದೇವಿ ದೇವಿನಾಳಮಠ, ಉಮಾದೇವಿ ನಾಯಕ, ದೇವಕಿ ನಾಯಕ, ತಾಲೂಕು ಜಿಲ್ಲಾಧ್ಯಕ್ಷ ಮಲ್ಲೇಶ ನಾಯಕ, ರಾಮಣ್ಣ ಗೌಡೂರು, ಸೋಮರೆಡ್ಡಿ, ಅಮರಯ್ಯ ಗುಡದನಾಳ, ನಾಗಪ್ಪ ಮೋನೆದ್, ರಂಗಪ್ಪ, ಹುಲಗಪ್ಪ ನಾಯಕ, ಹನುಮಂತ ಹಳ್ಳಿ, ಆದಪ್ಪ, ದುರುಗಪ್ಪ ಗೌಡೂರು, ಹುಲಗಪ್ಪ ದೋಣಿ, ಭೀಮಪ್ಪ ಹೊಳಪ್ಪ, ವೀರಭದ್ರ, ಹುಲಗಪ್ಪ ದೊಡ್ಡಿ, ಶಿವನಗೌಡ, ಇಮಾಮ್ ಸಾಬ್ ಸೇರಿದಂತೆ ಅನೇಕ ರೈತರು ಭಾಗವಹಿಸಿದ್ದರು.

ಕಾಡುಗೊಂಡನಹಳ್ಳಿ ಮೆಟ್ರೋ ನಿಲ್ದಾಣಕ್ಕೆ ಅರೇಬಿಕ್ ಕಾಲೇಜು ಹೆಸರಿಡಲು ಸಚಿವ ಜಮೀರ್ ಮನವಿ: ಕನ್ನಡಪರ ಸಂಘಟನೆಗಳ ವಿರೋಧ

ಜಾಲತಾಣಗಳಲ್ಲಿಯೂ ಚರ್ಚೆಗೆ ಕಾರಣವಾಗಿದೆ. ಕಾಡುಗೊಂಡನಹಳ್ಳಿ ಎಂಬ ಹೆಸರು ಈಗಾಗಲೇ ಸಾರ್ವಜನಿಕರಿಗೆ ಪರಿಚಿತವಾಗಿದ್ದು, ಅದನ್ನು ಬದಲಾಯಿಸುವ ಅಗತ್ಯವಿಲ್ಲ ಎಂದು ಹಲವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನ ಮೆಟ್ರೋ ನಿಲ್ದಾಣಗಳಿಗೆ ಸ್ಥಳೀಯ ಜನರು ಸುಲಭವಾಗಿ ಗುರುತಿಸಬಹುದಾದ ಹೆಸರುಗಳನ್ನು ನೀಡಬೇಕು. ಪ್ರದೇಶದ ಮೂಲ ಹೆಸರನ್ನು ಉಳಿಸಿಕೊಳ್ಳುವುದರಿಂದ ಪ್ರಯಾಣಿಕರಿಗೆ ಅನುಕೂಲವಾಗುವುದರ ಜೊತೆಗೆ ಸ್ಥಳೀಯ ಇತಿಹಾಸ ಹಾಗೂ ಗುರುತನ್ನು ಸಂರಕ್ಷಿಸಿದಂತಾಗುತ್ತದೆ ಎಂದು ನೆಟ್ಟಿಗರು ಅಭಿಪ್ರಾಯಪಟ್ಟಿದ್ದಾರೆ.

ಅರೇಬಿಕ್ ಕಾಲೇಜಿನ ಹೆಸರನ್ನು ನಿಲ್ದಾಣಕ್ಕೆ ಇಡುವ ಪ್ರಸ್ತಾಪದ ಔಚಿತ್ಯವನ್ನು ಕೆಲವರು ಪ್ರಶ್ನಿಸಿದ್ದು, ಕನ್ನಡಪರ ಸಂಘಟನೆಗಳು ಈ ವಿಚಾರದಲ್ಲಿ ಇನ್ನಷ್ಟು ಸ್ಪಷ್ಟ ನಿಲುವು ವ್ಯಕ್ತಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

ಒಟ್ಟಿನಲ್ಲಿ, ಪಿಂಕ್ ಲೈನ್ ಮೆಟ್ರೋ ಮಾರ್ಗದ ಉದ್ಘಾಟನೆಗೆ ಸಿದ್ಧತೆಗಳು ನಡೆಯುತ್ತಿರುವ ಸಂದರ್ಭದಲ್ಲಿ ಕಾಡುಗೊಂಡನಹಳ್ಳಿ ನಿಲ್ದಾಣದ ಮರುನಾಮಕರಣ ಪ್ರಸ್ತಾಪ ಹೊಸ ಚರ್ಚೆಗೆ ಕಾರಣವಾಗಿದೆ. ಹೆಸರು ಬದಲಾವಣೆ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಯಾವ ನಿರ್ಧಾರ ಕೈಗೊಳ್ಳಲಿದ್ದಾರೆ ಎಂಬುದು ಕುತೂಹಲ ಮೂಡಿಸಿದೆ

ಕೃಷ್ಣಾ ಅಚ್ಚುಕಟ್ಟು ಪ್ರದೇಶದ ಬೆಳೆ ರಕ್ಷಣೆಗೆ ನ.30ರವರೆಗೆ ಕಾಲುವೆ ನೀರು ಹರಿಸಲು ಸಚಿವ ಡಾ. ಅಜಯ್ ಧರ್ಮಸಿಂಗ್ ಮನವಿ

ಸ್ಥಗಿತಗೊಂಡರೆ ರೈತರಿಗೆ ಅಪಾರ ಆರ್ಥಿಕ ನಷ್ಟ ಉಂಟಾಗುವ ಆತಂಕವಿದೆ ಎಂದು ಸಚಿವರು ಗಮನ ಸೆಳೆದಿದ್ದಾರೆ.

ಈಗಾಗಲೇ ಮಳೆಯ ಕೊರತೆ ಹಾಗೂ ಬರ ಪರಿಸ್ಥಿತಿಯಿಂದ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ. ಕೃಷಿ ಚಟುವಟಿಕೆಗಳಿಗೆ ಸಾಲ ಮಾಡಿ ಬೆಳೆ ಬೆಳೆದಿರುವ ರೈತರಿಗೆ ಕಟಾವಿನ ಹಂತದಲ್ಲಿ ನೀರಿನ ಅಭಾವ ಎದುರಾದರೆ ಅವರ ಆರ್ಥಿಕ ಪರಿಸ್ಥಿತಿ ಮತ್ತಷ್ಟು ಹದಗೆಡಲಿದೆ. ಹೀಗಾಗಿ ಲಭ್ಯವಿರುವ ಜಲಸಂಪನ್ಮೂಲವನ್ನು ವೈಜ್ಞಾನಿಕವಾಗಿ ನಿರ್ವಹಿಸಿ, ಬೆಳೆ ರಕ್ಷಣೆಗೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ಕೃಷ್ಣಾ ಅಚ್ಚುಕಟ್ಟು ಪ್ರದೇಶದ ವಿವಿಧ ಭಾಗಗಳಲ್ಲಿ ರೈತರು ಕಾಲುವೆಗಳಿಗೆ ನೀರು ಹರಿಸುವ ಅವಧಿಯನ್ನು ವಿಸ್ತರಿಸುವಂತೆ ನಿರಂತರವಾಗಿ ಮನವಿ ಸಲ್ಲಿಸುತ್ತಿದ್ದಾರೆ. ವಿಶೇಷವಾಗಿ ರಾಯಚೂರು ಸೇರಿದಂತೆ ನೀರಾವರಿ ಅವಲಂಬಿತ ಪ್ರದೇಶಗಳಲ್ಲಿ ಹತ್ತಿ, ತೊಗರಿ ಹಾಗೂ ಮೆಣಸಿನಕಾಯಿ ಬೆಳೆಗಳನ್ನು ಉಳಿಸಿಕೊಳ್ಳಲು ರೈತರು ನೀರಿಗಾಗಿ ಕಾಯುತ್ತಿದ್ದಾರೆ. ರೈತರ ಈ ಬೇಡಿಕೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕಾಗಿದೆ ಎಂದು ತಿಳಿಸಿದ್ದಾರೆ.

ಕುಡಿಯುವ ನೀರಿನ ಅಗತ್ಯಕ್ಕೆ ಯಾವುದೇ ತೊಂದರೆಯಾಗದಂತೆ ಮುನ್ನೆಚ್ಚರಿಕೆ ವಹಿಸುವುದರ ಜೊತೆಗೆ ಮುಂದಿನ ಬೇಸಿಗೆಯ ನೀರಿನ ಬೇಡಿಕೆಯನ್ನೂ ಗಮನದಲ್ಲಿಟ್ಟುಕೊಳ್ಳಬೇಕು. ಜಲಾಶಯಗಳಲ್ಲಿ ಲಭ್ಯವಿರುವ ನೀರಿನ ಪ್ರಮಾಣ, ಕೃಷಿ ಬೆಳೆಗಳ ಅಗತ್ಯ ಹಾಗೂ ಕುಡಿಯುವ ನೀರಿನ ಭದ್ರತೆಯನ್ನು ಸಮತೋಲನಗೊಳಿಸಿ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಬರಗಾಲದ ಸಂದರ್ಭದಲ್ಲಿ ರೈತರನ್ನು ಸಂಕಷ್ಟದಿಂದ ಪಾರು ಮಾಡುವುದು ಸರ್ಕಾರದ ಪ್ರಮುಖ ಆದ್ಯತೆಯಾಗಬೇಕು. ಕೈಗೆ ಬಂದ ಬೆಳೆ ನೀರಿನ ಕೊರತೆಯಿಂದ ಹಾಳಾಗದಂತೆ ತಡೆಯಲು ನವೆಂಬರ್ 30ರವರೆಗೆ ಕಾಲುವೆಗಳಿಗೆ ನೀರು ಹರಿಸುವ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಗೆ ಅಗತ್ಯ ನಿರ್ದೇಶನ ನೀಡಬೇಕು ಎಂದು ಡಾ. ಅಜಯ್ ಧರ್ಮಸಿಂಗ್ ಕೋರಿದ್ದಾರೆ.

ಈ ಸಂದರ್ಭದಲ್ಲಿ ಮಾಜಿ ಸಚಿವ ಹಾಗೂ ಶಹಾಪುರ ಶಾಸಕ ಶರಣಬಸಪ್ಪ ದರ್ಶನಾಪುರ ಮತ್ತು ಸುರಪುರ ಶಾಸಕ ವೇಣುಗೋಪಾಲ್ ನಾಯಕ್ ಉಪಸ್ಥಿತರಿದ್ದರು.

ಹಾಲು, ಬಸ್ ಪ್ರಯಾಣ ದರ ಏರಿಕೆ ಖಂಡಿಸಿ ಕೆಆರ್ ಎಸ್ ಪಕ್ಷದ ಪ್ರತಿಭಟನೆ

ಬಸ್ ಪ್ರಯಾಣ ದರವನ್ನು ಶೇ.25ರಷ್ಟು ಹೆಚ್ಚಿಸಿರುವುದರಿಂದ ಪ್ರತಿನಿತ್ಯ ಉದ್ಯೋಗ, ಶಿಕ್ಷಣ, ವ್ಯಾಪಾರ ಹಾಗೂ ಇತರ ಅಗತ್ಯ ಕೆಲಸಗಳಿಗಾಗಿ ಸಾರ್ವಜನಿಕ ಸಾರಿಗೆಯನ್ನು ಅವಲಂಬಿಸಿರುವ ಜನರಿಗೆ ತೊಂದರೆಯಾಗಲಿದೆ. ವಿಶೇಷವಾಗಿ ಗ್ರಾಮೀಣ ಪ್ರದೇಶಗಳಿಂದ ನಗರಗಳಿಗೆ ಸಂಚರಿಸುವ ಕಾರ್ಮಿಕರು, ವಿದ್ಯಾರ್ಥಿಗಳು ಹಾಗೂ ಸಣ್ಣ ವ್ಯಾಪಾರಿಗಳ ಮಾಸಿಕ ಪ್ರಯಾಣ ವೆಚ್ಚ ಹೆಚ್ಚಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಸರ್ಕಾರ ಆದಾಯ ಹೆಚ್ಚಿಸಿಕೊಳ್ಳಲು ಜನಸಾಮಾನ್ಯರ ಮೇಲೆ ದರ ಏರಿಕೆಯ ಹೊರೆ ಹಾಕುವ ಬದಲು ಆಡಳಿತ ವ್ಯವಸ್ಥೆಯಲ್ಲಿನ ಭ್ರಷ್ಟಾಚಾರ, ಅನಗತ್ಯ ವೆಚ್ಚ ಹಾಗೂ ಹಣಕಾಸಿನ ದುರುಪಯೋಗಕ್ಕೆ ಕಡಿವಾಣ ಹಾಕಬೇಕು. ಸಾರ್ವಜನಿಕ ಸಂಪನ್ಮೂಲಗಳನ್ನು ಸಮರ್ಪಕವಾಗಿ ಬಳಸಿಕೊಂಡು ಸರ್ಕಾರದ ಆದಾಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು ಎಂದು ವಿಜಯ್ ಕುಮಾರ್ ಒತ್ತಾಯಿಸಿದರು.

ಹಾಲು ಮತ್ತು ಬಸ್ ಪ್ರಯಾಣ ದರ ಏರಿಕೆಯನ್ನು ತಕ್ಷಣವೇ ಹಿಂಪಡೆಯಬೇಕು. ಹಾಲು ಒಕ್ಕೂಟಗಳಲ್ಲಿನ ಅವ್ಯವಹಾರಗಳ ಆರೋಪಗಳ ಕುರಿತು ಸಮಗ್ರ ತನಿಖೆ ನಡೆಸಬೇಕು. ಸಾರ್ವಜನಿಕರ ಆರ್ಥಿಕ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಅಗತ್ಯ ವಸ್ತುಗಳು ಹಾಗೂ ಸಾರ್ವಜನಿಕ ಸೇವೆಗಳ ದರ ನಿಯಂತ್ರಣಕ್ಕೆ ಸರ್ಕಾರ ಆದ್ಯತೆ ನೀಡಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಕೆಆರ್‌ಎಸ್ ಪಕ್ಷದ ಮುಖಂಡರಾದ ಶಂಕರಗೌಡ, ಕೃಷ್ಣ ಸುಕಲ್ಪೇಟ್, ದೇವಣ್ಣ ಪೋಲ್ದಿನ್ನಿ, ಆನಂದ್, ಸುರೇಶ್, ಶಿವರಾಜ್, ವೆಂಕಟೇಶ್, ಗಿರಿಯಪ್ಪ ಸೇರಿದಂತೆ ಪಕ್ಷದ ಕಾರ್ಯಕರ್ತರು ಹಾಗೂ ಇತರರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

ಜಪಾನ್ ವಿರುದ್ಧ 4-1 ಗೋಲುಗಳ ಭರ್ಜರಿ ಜಯ: ಆರನೇ ಬಾರಿ ಏಷ್ಯನ್ ಚಾಂಪಿಯನ್ಸ್ ಟ್ರೋಫಿ ಮುಡಿಗೇರಿಸಿಕೊಂಡ ಭಾರತ

ಗಳಿಸುವ ಮೂಲಕ ಭಾರತದ ಮುನ್ನಡೆಯನ್ನು 4-1ಕ್ಕೆ ಹೆಚ್ಚಿಸಿದರು. ಭಾರತದ ಸತತ ದಾಳಿಯನ್ನು ತಡೆಯಲು ಜಪಾನ್ ಆಟಗಾರರು ನಡೆಸಿದ ಪ್ರಯತ್ನಗಳು ಫಲ ನೀಡಲಿಲ್ಲ.

ಪಂದ್ಯದ ಆರಂಭದಲ್ಲಿ ಮುನ್ನಡೆ ಸಾಧಿಸಿದ್ದ ಜಪಾನ್, ಭಾರತದ ಆಕ್ರಮಣಕಾರಿ ಆಟದ ಎದುರು ಅಂತಿಮ ಹಂತದಲ್ಲಿ ರಕ್ಷಣಾತ್ಮಕ ಸ್ಥಿತಿಗೆ ತಲುಪಿತು. ನಿರ್ಣಾಯಕ ಸಂದರ್ಭದಲ್ಲಿ ಭಾರತದ ಆಟಗಾರರು ತೋರಿದ ಸಂಘಟಿತ ಪ್ರದರ್ಶನ ಹಾಗೂ ಗೋಲು ಗಳಿಸುವ ಸಾಮರ್ಥ್ಯ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿತು.

ಈ ಪಂದ್ಯವು ಭಾರತದ ಉಪನಾಯಕ ಹಾರ್ದಿಕ್ ಸಿಂಗ್ ಅವರ ವೃತ್ತಿಜೀವನದಲ್ಲಿಯೂ ಮಹತ್ವದ ಮೈಲುಗಲ್ಲಾಯಿತು. ಅವರು ತಮ್ಮ 200ನೇ ಅಂತರರಾಷ್ಟ್ರೀಯ ಪಂದ್ಯವನ್ನು ಆಡಿದ ಸಾಧನೆ ಮಾಡಿದರು. ಭಾರತದ ಮಿಡ್‌ಫೀಲ್ಡ್ ವಿಭಾಗದಲ್ಲಿ ಅವರ ಪ್ರದರ್ಶನ ತಂಡದ ಯಶಸ್ಸಿಗೆ ನೆರವಾಯಿತು.

ಟೂರ್ನಿಯುದ್ದಕ್ಕೂ ಅಜೇಯ ಪ್ರದರ್ಶನ ನೀಡಿದ ಭಾರತ ತಂಡ, ಫೈನಲ್‌ನಲ್ಲಿಯೂ ತನ್ನ ಸಾಮರ್ಥ್ಯ ಸಾಬೀತುಪಡಿಸಿತು. ಆರನೇ ಏಷ್ಯನ್ ಚಾಂಪಿಯನ್ಸ್ ಟ್ರೋಫಿ ಪ್ರಶಸ್ತಿ ಗೆಲ್ಲುವ ಮೂಲಕ ಏಷ್ಯನ್ ಹಾಕಿಯಲ್ಲಿ ತನ್ನ ಪ್ರಾಬಲ್ಯವನ್ನು ಮತ್ತೊಮ್ಮೆ ಪ್ರದರ್ಶಿಸಿತು.

ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ ರಾಮಣ್ಣ ಹವಳೆಯವರಿಗೆ ಅಧಿಕೃತ ಆಹ್ವಾನ

ಕವಿಗಳು, ಚಿಂತಕರು ಹಾಗೂ ಸಾಹಿತ್ಯಾಸಕ್ತರು ಒಂದೆಡೆ ಸೇರಿ ಕನ್ನಡ ಸಾಹಿತ್ಯದ ಬೆಳವಣಿಗೆಗೆ ಪೂರಕವಾದ ವಿಚಾರಗಳನ್ನು ಹಂಚಿಕೊಳ್ಳಲು ಅವಕಾಶ ದೊರೆಯಲಿದೆ ಎಂದು ತಿಳಿಸಿದರು.

ಸಮ್ಮೇಳನವನ್ನು ಅರ್ಥಪೂರ್ಣವಾಗಿ ಹಾಗೂ ಯಶಸ್ವಿಯಾಗಿ ನಡೆಸಲು ವಿವಿಧ ಸಮಿತಿಗಳ ಮೂಲಕ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದ್ದು, ಜಿಲ್ಲೆಯ ಎಲ್ಲ ತಾಲೂಕುಗಳಿಂದ ಸಾಹಿತಿಗಳು, ಕನ್ನಡಾಭಿಮಾನಿಗಳು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸ್ವಾಗತ ಸಮಿತಿ ಕಾರ್ಯಾಧ್ಯಕ್ಷ ಎ. ಪಾಪಾರೆಡ್ಡಿ, ಪ್ರಧಾನ ಕಾರ್ಯದರ್ಶಿ ರಂಗಣ್ಣ ಪಾಟೀಲ್ ಅಳ್ಳುಂಡಿ, ಕೋಶಾಧ್ಯಕ್ಷ ಜಯಣ್ಣ, ನಾಗಪ್ಪ ಹೊರಪೇಟಿ, ಸಹ ಕಾರ್ಯದರ್ಶಿ ಡಾ. ಬಿ. ವಿಜಯ ರಾಜೇಂದ್ರ, ಕರ್ನಾಟಕ ಸಂಘದ ಅಧ್ಯಕ್ಷ ಕೆ. ಶಾಂತಪ್ಪ, ಜಯಂತರಾವ್ ಪತಂಗೆ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ವೀರಹನುಮಾನ, ಬಾಬು ಭಂಡಾರಿಗಲ್, ಎಚ್.ಎಚ್. ಮ್ಯಾದಾರ್, ಈರಣ್ಣ ಬೆಂಗಾಲಿ, ಪ್ರತಿಭಾ ಗೋನಾಳ, ದಂಡಪ್ಪ ಬಿರಾದಾರ ಸೇರಿದಂತೆ ಹಲವು ಸಾಹಿತಿಗಳು, ಕನ್ನಡಪರ ಮುಖಂಡರು ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಮಾವಿನಕೆರೆ ಅಭಿವೃದ್ಧಿ ಹೆಸರಿನಲ್ಲಿ 15 ವರ್ಷಗಳಿಂದ ಅನುದಾನ ಲೂಟಿ: ರಾಮನಗೌಡ ಏಗನೂರು ಆರೋಪ

ನೀರು ಸಂಪೂರ್ಣ ಕಲುಷಿತಗೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದೆ. ಮೊದಲು ಕೆರೆಗೆ ಸೇರುತ್ತಿರುವ ಕೊಳಚೆ ನೀರನ್ನು ತಡೆಯಬೇಕು. ಒಳಚರಂಡಿ ವ್ಯವಸ್ಥೆಯನ್ನು ಸರಿಪಡಿಸಿ, ಕೆರೆಯ ನೀರಿನ ಶುದ್ಧೀಕರಣಕ್ಕೆ ಕ್ರಮ ಕೈಗೊಳ್ಳಬೇಕು. ಇದನ್ನು ಬಿಟ್ಟು ಕೇವಲ ಕಾಮಗಾರಿಗಳ ಹೆಸರಿನಲ್ಲಿ ಅನುದಾನ ಖರ್ಚು ಮಾಡುವುದರಿಂದ ಕೆರೆಯ ಅಭಿವೃದ್ಧಿ ಸಾಧ್ಯವಿಲ್ಲ ಎಂದು ಅಧಿಕಾರಿಗಳ ಕಾರ್ಯವೈಖರಿಯನ್ನು ಟೀಕಿಸಿದರು.

ಕೆರೆಯ ಕಲುಷಿತ ನೀರು ಸುತ್ತಮುತ್ತಲಿನ ಅಂತರ್ಜಲ ಹಾಗೂ ಕೊಳವೆಬಾವಿಗಳ ನೀರಿನ ಗುಣಮಟ್ಟದ ಮೇಲೂ ಪರಿಣಾಮ ಬೀರುವ ಸಾಧ್ಯತೆಯಿದೆ. ಇದರಿಂದ ಸಮೀಪದ ಬಡಾವಣೆಗಳ ನಿವಾಸಿಗಳ ಆರೋಗ್ಯಕ್ಕೆ ತೊಂದರೆಯಾಗುವ ಆತಂಕವಿದ್ದು, ಸಂಬಂಧಪಟ್ಟ ಇಲಾಖೆಗಳು ತಕ್ಷಣ ನೀರಿನ ಮಾದರಿಗಳನ್ನು ಸಂಗ್ರಹಿಸಿ ವೈಜ್ಞಾನಿಕ ಪರೀಕ್ಷೆ ನಡೆಸಬೇಕು. ಸಾರ್ವಜನಿಕರ ಆರೋಗ್ಯ ರಕ್ಷಣೆಗೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮಾವಿನಕೆರೆಯ ಮಧ್ಯಭಾಗದಲ್ಲಿ ರಸ್ತೆ ನಿರ್ಮಾಣ ಕಾಮಗಾರಿ ಆರಂಭಿಸಿ ಅರ್ಧಕ್ಕೆ ಸ್ಥಗಿತಗೊಳಿಸಲಾಗಿದೆ. ಈ ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಿದರೆ ಒತ್ತುವರಿಯಾಗಿರುವ ಜಮೀನುಗಳಿಗೆ ಸಂಪರ್ಕ ಕಲ್ಪಿಸಿದಂತಾಗುತ್ತದೆ. ಕೆರೆಯ ಸಂರಕ್ಷಣೆಗೆ ಆದ್ಯತೆ ನೀಡಬೇಕಾದ ಅಧಿಕಾರಿಗಳು ಒತ್ತುವರಿಗೆ ಅನುಕೂಲವಾಗುವ ರೀತಿಯಲ್ಲಿ ಕಾಮಗಾರಿಗಳನ್ನು ಕೈಗೊಳ್ಳುತ್ತಿದ್ದಾರೆ ಎಂಬ ಅನುಮಾನ ವ್ಯಕ್ತವಾಗುತ್ತಿದೆ. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು.

ಕಳೆದ 15 ವರ್ಷಗಳಿಂದ ಮಾವಿನಕೆರೆ ಅಭಿವೃದ್ಧಿಗಾಗಿ ನಿರಂತರವಾಗಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಆದರೆ ಇಂದಿಗೂ ಸಾರ್ವಜನಿಕರು ಕೆರೆಯ ಸುತ್ತಮುತ್ತ ಕುಳಿತುಕೊಳ್ಳಲು ಸಮರ್ಪಕ ಆಸನ ವ್ಯವಸ್ಥೆಯನ್ನೂ ಕಲ್ಪಿಸಲಾಗಿಲ್ಲ. ಕೆರೆಯ ಸ್ವಚ್ಛತೆ, ಪರಿಸರ ಸಂರಕ್ಷಣೆ ಹಾಗೂ ಸಾರ್ವಜನಿಕ ಸೌಲಭ್ಯಗಳ ಅಭಿವೃದ್ಧಿಗೆ ಆದ್ಯತೆ ನೀಡದಿರುವುದು ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ ಎಂದು ಆರೋಪಿಸಿದರು.

ಅಮೃತ್ ಯೋಜನೆ, ಕೆರೆ ಅಭಿವೃದ್ಧಿ ಯೋಜನೆ, ನಗರಸಭೆ ಹಾಗೂ ಮಹಾನಗರ ಪಾಲಿಕೆ ಸೇರಿದಂತೆ ವಿವಿಧ ಇಲಾಖೆಗಳ ಮೂಲಕ ಮಾವಿನಕೆರೆ ಅಭಿವೃದ್ಧಿಗೆ ಅನುದಾನ ಬಳಕೆಯಾಗಿರುವುದಾಗಿ ಹೇಳಲಾಗುತ್ತಿದೆ. ಆದರೆ ಯಾವ ಇಲಾಖೆಯಿಂದ ಎಷ್ಟು ಅನುದಾನ ಬಿಡುಗಡೆಯಾಗಿದೆ, ಯಾವ ಯೋಜನೆಯಡಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ, ಎಷ್ಟು ಹಣ ಖರ್ಚು ಮಾಡಲಾಗಿದೆ ಹಾಗೂ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ ಎಂಬ ಮಾಹಿತಿಯನ್ನು ಸಾರ್ವಜನಿಕರಿಗೆ ಬಹಿರಂಗಪಡಿಸುತ್ತಿಲ್ಲ ಎಂದು ದೂರಿದರು.

ಮಾಹಿತಿ ಹಕ್ಕು ಕಾಯ್ದೆಯಡಿ ಹಲವು ಬಾರಿ ಮಾಹಿತಿ ಕೋರಿದರೂ ಸಮರ್ಪಕ ದಾಖಲೆಗಳನ್ನು ಒದಗಿಸಿಲ್ಲ. ಸಾರ್ವಜನಿಕರ ತೆರಿಗೆ ಹಣದಿಂದ ಕೈಗೊಳ್ಳುವ ಪ್ರತಿಯೊಂದು ಅಭಿವೃದ್ಧಿ ಕಾಮಗಾರಿಯಲ್ಲೂ ಪಾರದರ್ಶಕತೆ ಇರಬೇಕು. ಕಾಮಗಾರಿಯ ಹೆಸರು, ಯೋಜನೆಯ ವಿವರ, ಅನುದಾನದ ಮೂಲ, ಅಂದಾಜು ವೆಚ್ಚ, ಗುತ್ತಿಗೆದಾರರ ಮಾಹಿತಿ ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಸಂಪರ್ಕ ಸಂಖ್ಯೆಗಳನ್ನೊಳಗೊಂಡ ಮಾಹಿತಿ ಫಲಕಗಳನ್ನು ಅಳವಡಿಸಬೇಕು. ಆದರೆ ಮಾವಿನಕೆರೆಯಲ್ಲಿ ಕೋಟ್ಯಂತರ ರೂಪಾಯಿ ವೆಚ್ಚದ ಕಾಮಗಾರಿಗಳು ನಡೆಯುತ್ತಿದ್ದರೂ ಮಾಹಿತಿ ಫಲಕಗಳೇ ಕಾಣಿಸುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಧಿಕಾರಿಗಳು ಯಾವುದೇ ರಾಜಕೀಯ ಪಕ್ಷ ಅಥವಾ ವ್ಯಕ್ತಿಯ ಹಿತಾಸಕ್ತಿಗಿಂತ ಸಾರ್ವಜನಿಕರ ಹಿತಾಸಕ್ತಿಗೆ ಆದ್ಯತೆ ನೀಡಬೇಕು. ಸರ್ಕಾರದಿಂದ ಬಿಡುಗಡೆಯಾಗುವ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಜನರ ಸಮಸ್ಯೆಗಳನ್ನು ಬಗೆಹರಿಸುವುದು ಅವರ ಪ್ರಮುಖ ಕರ್ತವ್ಯವಾಗಿದೆ. ಅಭಿವೃದ್ಧಿ ಕಾಮಗಾರಿಗಳಲ್ಲಿ ಪಾರದರ್ಶಕತೆ ಹಾಗೂ ಹೊಣೆಗಾರಿಕೆ ಇಲ್ಲದಿದ್ದರೆ ಸಾರ್ವಜನಿಕರ ವಿಶ್ವಾಸಕ್ಕೆ ಧಕ್ಕೆಯಾಗುತ್ತದೆ ಎಂದು ಹೇಳಿದರು.

ರಾಜಕಾರಣಿಗಳು ಹಾಗೂ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ದೊರೆತಿಲ್ಲ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳದಿದ್ದರೆ ಹೈಕೋರ್ಟ್ ಹಾಗೂ ಸುಪ್ರೀಂ ಕೋರ್ಟ್‌ಗಳಲ್ಲಿ ಕಾನೂನು ಹೋರಾಟ ನಡೆಸಲು ಸಿದ್ಧರಿದ್ದೇವೆ. ಶಾಸಕಾಂಗದಿಂದ ಬಿಡುಗಡೆಯಾಗುವ ಅನುದಾನವನ್ನು ಕಾರ್ಯಾಂಗ ಸಮರ್ಪಕವಾಗಿ ಬಳಸಿಕೊಳ್ಳಬೇಕು. ಸಾರ್ವಜನಿಕರ ಸಮಸ್ಯೆಗಳು ಬಗೆಹರಿಯದಿದ್ದರೆ ನ್ಯಾಯಾಂಗದ ಮೊರೆ ಹೋಗುವುದು ಅನಿವಾರ್ಯವಾಗಲಿದೆ ಎಂದು ಎಚ್ಚರಿಸಿದರು.

ಮಾವಿನಕೆರೆ ಅಭಿವೃದ್ಧಿಗೆ ಇದುವರೆಗೆ ಬಿಡುಗಡೆಯಾದ ಒಟ್ಟು ಅನುದಾನ, ವೆಚ್ಚದ ವಿವರ ಹಾಗೂ ಪೂರ್ಣಗೊಂಡ ಮತ್ತು ಬಾಕಿ ಉಳಿದಿರುವ ಕಾಮಗಾರಿಗಳ ಕುರಿತು ಸಮಗ್ರ ತನಿಖೆ ನಡೆಸಬೇಕು. ಕೆರೆಯ ಒತ್ತುವರಿ ತೆರವುಗೊಳಿಸಿ, ಕೊಳಚೆ ನೀರಿನ ಸೇರ್ಪಡೆಯನ್ನು ತಡೆಯಬೇಕು. ನೀರಿನ ಶುದ್ಧೀಕರಣ, ಕೆರೆಯ ಪರಿಸರ ಸಂರಕ್ಷಣೆ ಹಾಗೂ ಸಾರ್ವಜನಿಕರಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸುವ ಕಾರ್ಯಗಳಿಗೆ ಆದ್ಯತೆ ನೀಡಬೇಕು. ಅಧಿಕಾರಿಗಳು ತಕ್ಷಣ ಸ್ಪಂದಿಸದಿದ್ದರೆ ಸಾರ್ವಜನಿಕರ ಹಿತಾಸಕ್ತಿಗಾಗಿ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ರಾಮನಗೌಡ ಏಗನೂರು ಎಚ್ಚರಿಕೆ ನೀಡಿದರು.

ಚೀಕಲಪರ್ವಿಯ ವಿಜಯದಾಸರ ಕಟ್ಟೆಗೆ ಉಡುಪಿ ಪಲಿಮಾರು ಮಠದ ಉಭಯ ಶ್ರೀಗಳ ಭೇಟಿ: ಭಕ್ತರಿಗೆ ಆಶೀರ್ವಚನ

ಮೌಲ್ಯಗಳು, ಸತ್ಕಾರ್ಯಗಳು ಹಾಗೂ ಮಾನವೀಯ ಗುಣಗಳನ್ನು ಅಳವಡಿಸಿಕೊಳ್ಳುವ ಮೂಲಕ ಜೀವನವನ್ನು ಸಾರ್ಥಕಗೊಳಿಸಿಕೊಳ್ಳಬೇಕು ಎಂಬ ಸಂದೇಶ ನೀಡಿದರು.

ಹರಿದಾಸ ಸಾಹಿತ್ಯ ಪರಂಪರೆಯಲ್ಲಿ ಶ್ರೀ ವಿಜಯದಾಸರು ವಿಶಿಷ್ಟ ಸ್ಥಾನ ಹೊಂದಿದ್ದು, ಅವರ ಕೀರ್ತನೆಗಳು ಭಕ್ತಿ, ಜ್ಞಾನ ಹಾಗೂ ನೈತಿಕ ಮೌಲ್ಯಗಳ ಮಹತ್ವವನ್ನು ಸಾರುತ್ತವೆ. ಇಂತಹ ಮಹನೀಯರ ಜೀವನಾದರ್ಶಗಳು ಮತ್ತು ಆಧ್ಯಾತ್ಮಿಕ ಸಂದೇಶಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ಅಗತ್ಯವಾಗಿದೆ ಎಂಬ ಆಶಯ ವ್ಯಕ್ತವಾಯಿತು.

ಉಭಯ ಶ್ರೀಗಳ ಆಗಮನದಿಂದ ಚೀಕಲಪರ್ವಿ ಗ್ರಾಮದ ಭಕ್ತರಲ್ಲಿ ಧಾರ್ಮಿಕ ಸಂಭ್ರಮ ಮನೆಮಾಡಿತ್ತು. ಗ್ರಾಮಸ್ಥರು ಹಾಗೂ ಭಕ್ತರು ಶ್ರೀಗಳ ದರ್ಶನ ಪಡೆದು ಆಶೀರ್ವಾದ ಸ್ವೀಕರಿಸಿದರು.

ಮಂತ್ರಾಲಯದಲ್ಲಿ ಮತದಾನ ಮಾಡಿದ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದರು: ಪ್ರಜಾಪ್ರಭುತ್ವದ ಹಕ್ಕು ಚಲಾಯಿಸಲು ಕರೆ

ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದರು ಸಂದೇಶ ನೀಡಿದರು.

ಮತದಾನ ಪ್ರಕ್ರಿಯೆಯಲ್ಲಿ ಶ್ರೀಗಳು ಭಾಗವಹಿಸುವ ಮೂಲಕ ಸಾರ್ವಜನಿಕರಿಗೆ ಮತದಾನದ ಮಹತ್ವದ ಕುರಿತು ಜಾಗೃತಿ ಮೂಡಿಸಿದರು.

ಅಪಘಾತಕ್ಕೊಳಗಾದ ಹಸುವಿಗೆ ಚಿಕಿತ್ಸೆ ಕೊಡಿಸಿ ಮಾನವೀಯತೆ ಮೆರೆದ ವನಸಿರಿ ಅಮರೇಗೌಡ ಮಲ್ಲಾಪುರ



ಸಿಂಧನೂರು: ಗಿಡಮರಗಳ ಸಂರಕ್ಷಣೆಯ ಜೊತೆಗೆ ಪ್ರಾಣಿ-ಪಕ್ಷಿಗಳ ರಕ್ಷಣೆಯಲ್ಲಿಯೂ ನಿರಂತರವಾಗಿ ತೊಡಗಿಸಿಕೊಂಡಿರುವ ಪರಿಸರ ರಾಜ್ಯ ಪ್ರಶಸ್ತಿ ಪುರಸ್ಕೃತ ಹಾಗೂ ವನಸಿರಿ ಫೌಂಡೇಷನ್ ಅಧ್ಯಕ್ಷ ಅಮರೇಗೌಡ ಮಲ್ಲಾಪುರ ಅವರು ವಾಹನ ಡಿಕ್ಕಿಯಿಂದ ಗಾಯಗೊಂಡಿದ್ದ ಹಸುವಿಗೆ ಪಶುವೈದ್ಯರ ಮೂಲಕ ಚಿಕಿತ್ಸೆ ಕೊಡಿಸುವ ಮೂಲಕ ಮಾನವೀಯತೆ ಮೆರೆದಿದ್ದಾರೆ. ಅವರ ಈ ಕಾರ್ಯಕ್ಕೆ ಸಾರ್ವಜನಿಕ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ.

ನಗರದ ಆದರ್ಶ ಕಾಲೋನಿಯಲ್ಲಿ ಬಿಡಾಡಿ ದನಗಳು ಸಂಚರಿಸುತ್ತಿದ್ದ ಸಂದರ್ಭದಲ್ಲಿ ಹಸುವೊಂದಕ್ಕೆ ವಾಹನ ಡಿಕ್ಕಿ ಹೊಡೆದು ಗಾಯಗೊಂಡಿತ್ತು. ಗಾಯಗೊಂಡ ಹಸುವನ್ನು ಗಮನಿಸಿದ ಸ್ಥಳೀಯ ಸಾರ್ವಜನಿಕರು ತಕ್ಷಣ ಪರಿಸರ ಪ್ರೇಮಿ ಅಮರೇಗೌಡ ಮಲ್ಲಾಪುರ ಅವರಿಗೆ ದೂರವಾಣಿ ಮೂಲಕ ಮಾಹಿತಿ ನೀಡಿದರು.

ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಅಮರೇಗೌಡ ಮಲ್ಲಾಪುರ ಅವರು ಹಸುವಿನ ಸ್ಥಿತಿಯನ್ನು ಪರಿಶೀಲಿಸಿ, ಅದಕ್ಕೆ ಅಗತ್ಯ ಚಿಕಿತ್ಸೆ ಒದಗಿಸಲು ಮುಂದಾದರು. ಸಿಂಧನೂರಿನ ಪಶುವೈದ್ಯಾಧಿಕಾರಿ ಡಾ. ಮಲ್ಲಿಕಾರ್ಜುನ ಅವರನ್ನು ಸಂಪರ್ಕಿಸಿ ಘಟನೆಯ ಕುರಿತು ಮಾಹಿತಿ ನೀಡಿದರು.

ಬಳಿಕ ಪಶು ಆಸ್ಪತ್ರೆಯ ಸಿಬ್ಬಂದಿ ರಾಜ ಅವರು ಸ್ಥಳಕ್ಕೆ ಆಗಮಿಸಿ ಗಾಯಗೊಂಡ ಹಸುವನ್ನು ಪರೀಕ್ಷಿಸಿದರು. ಈ ಸಂದರ್ಭದಲ್ಲಿ ಹಸುವಿನ ಬಾಯಿಯಲ್ಲಿ ಹುಳುಗಳು ಕಾಣಿಸಿಕೊಂಡಿದ್ದು, ಮೈಮೇಲೆ ಚುಕ್ಕಿ ರೋಗದ ಲಕ್ಷಣಗಳೂ ಕಂಡುಬಂದವು. ಹಸುವಿನ ಆರೋಗ್ಯ ಸ್ಥಿತಿಯನ್ನು ಪರಿಶೀಲಿಸಿದ ಪಶು ಆಸ್ಪತ್ರೆಯ ಸಿಬ್ಬಂದಿ ಅಗತ್ಯ ಚಿಕಿತ್ಸೆ ನೀಡಿದರು.

ಅಪಘಾತಕ್ಕೊಳಗಾದ ಹಸುವನ್ನು ನಿರ್ಲಕ್ಷಿಸದೆ, ತಕ್ಷಣ ಸ್ಪಂದಿಸಿ ಪಶುವೈದ್ಯಕೀಯ ಚಿಕಿತ್ಸೆ ಕೊಡಿಸಲು ಮುಂದಾದ ಅಮರೇಗೌಡ ಮಲ್ಲಾಪುರ ಅವರ ಕಾರ್ಯಕ್ಕೆ ಸ್ಥಳೀಯರು ಮೆಚ್ಚುಗೆ ವ್ಯಕ್ತಪಡಿಸಿದರು. ಮೂಕಪ್ರಾಣಿಗಳ ನೋವಿಗೆ ಸ್ಪಂದಿಸುವ ಇಂತಹ ಮಾನವೀಯ ಕಾರ್ಯಗಳು ಸಮಾಜಕ್ಕೆ ಮಾದರಿಯಾಗಿವೆ ಎಂದು ಸಾರ್ವಜನಿಕರು ಅಭಿಪ್ರಾಯಪಟ್ಟರು.

ವನಸಿರಿ ಫೌಂಡೇಷನ್ ಮೂಲಕ ಗಿಡಮರಗಳನ್ನು ಉಳಿಸಿ ಬೆಳೆಸುವುದು, ಪರಿಸರ ಸಂರಕ್ಷಣೆ ಹಾಗೂ ಹಸಿರು ವಾತಾವರಣ ನಿರ್ಮಾಣಕ್ಕೆ ಶ್ರಮಿಸುತ್ತಿರುವ ಅಮರೇಗೌಡ ಮಲ್ಲಾಪುರ ಅವರು ಪ್ರಾಣಿ-ಪಕ್ಷಿಗಳ ರಕ್ಷಣೆಯಲ್ಲಿಯೂ ಆಸಕ್ತಿ ತೋರಿಸುತ್ತಿದ್ದಾರೆ. ಪರಿಸರ ಸಂರಕ್ಷಣೆ ಎಂದರೆ ಕೇವಲ ಗಿಡಮರಗಳನ್ನು ಬೆಳೆಸುವುದಷ್ಟೇ ಅಲ್ಲ, ಪ್ರಕೃತಿಯಲ್ಲಿರುವ ಪ್ರತಿಯೊಂದು ಜೀವಿಯನ್ನೂ ರಕ್ಷಿಸುವ ಜವಾಬ್ದಾರಿಯಾಗಿದೆ ಎಂಬ ಸಂದೇಶವನ್ನು ತಮ್ಮ ಕಾರ್ಯಗಳ ಮೂಲಕ ಸಾರುತ್ತಿದ್ದಾರೆ ಎಂದು ಸ್ಥಳೀಯರು ಪ್ರಶಂಸಿಸಿದರು.

ಈ ಕುರಿತು ಮಾತನಾಡಿದ ಅಮರೇಗೌಡ ಮಲ್ಲಾಪುರ, 12ನೇ ಶತಮಾನದ ಸಮಾಜ ಸುಧಾರಕ ಬಸವಣ್ಣನವರು ತಮ್ಮ ವಚನದಲ್ಲಿ ದಯವಿಲ್ಲದ ಧರ್ಮವಾವುದಯ್ಯಾ? ದಯವೇ ಬೇಕು ಸಕಲ ಪ್ರಾಣಿಗಳೆಲ್ಲರಲ್ಲಿ ಎಂದು ಸಾರಿದ್ದಾರೆ. ಸಕಲ ಜೀವಿಗಳ ಮೇಲೆ ಪ್ರೀತಿ, ಕರುಣೆ ಹಾಗೂ ದಯೆ ತೋರುವುದೇ ನಿಜವಾದ ಮಾನವೀಯತೆಯಾಗಿದೆ ಎಂದು ಹೇಳಿದರು.

ಮನುಷ್ಯನಂತೆ ಪ್ರಾಣಿ-ಪಕ್ಷಿಗಳಿಗೂ ಬದುಕುವ ಹಕ್ಕಿದೆ. ಅವುಗಳಿಗೆ ನೋವುಂಟಾದಾಗ ಸ್ಪಂದಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ರಸ್ತೆ ಅಪಘಾತಗಳಲ್ಲಿ ಗಾಯಗೊಳ್ಳುವ ಜಾನುವಾರುಗಳು ಹಾಗೂ ಇತರ ಪ್ರಾಣಿಗಳನ್ನು ನಿರ್ಲಕ್ಷಿಸದೆ, ತಕ್ಷಣ ಪಶುವೈದ್ಯಕೀಯ ನೆರವು ಒದಗಿಸಲು ಸಾರ್ವಜನಿಕರು ಮುಂದಾಗಬೇಕು ಎಂದು ಮನವಿ ಮಾಡಿದರು.

ಪರಿಸರ ಮತ್ತು ಜೀವಸಂಕುಲ ಪರಸ್ಪರ ಅವಲಂಬಿತವಾಗಿದ್ದು, ಪ್ರಕೃತಿಯ ಸಮತೋಲನ ಕಾಪಾಡಲು ಗಿಡಮರಗಳು ಹಾಗೂ ಪ್ರಾಣಿ-ಪಕ್ಷಿಗಳ ಸಂರಕ್ಷಣೆ ಅತ್ಯಂತ ಅಗತ್ಯವಾಗಿದೆ. ಪ್ರತಿಯೊಬ್ಬರೂ ತಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದರ ಜೊತೆಗೆ ಗಿಡಮರಗಳನ್ನು ಬೆಳೆಸಿ, ಮೂಕಪ್ರಾಣಿಗಳ ರಕ್ಷಣೆಗೆ ಕೈಜೋಡಿಸಬೇಕು. ಸಕಲ ಜೀವರಾಶಿಗಳ ಮೇಲೆ ದಯೆ ಮತ್ತು ಕರುಣೆ ತೋರುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಅಮರೇಗೌಡ ಮಲ್ಲಾಪುರ ಕರೆ ನೀಡಿದರು.

ಸರ್ಕಾರಿ ಶಾಲೆಗಳ ಉಳಿವಿನಿಂದ ಕನ್ನಡ ಭಾಷೆಯ ಬೆಳವಣಿಗೆ ಸಾಧ್ಯ: ರಾಜಶೇಖರ ಮಾಚರ್ಲಾ



ರಾಯಚೂರು, ನ. 5: ಕನ್ನಡ ನಾಡು, ನುಡಿ ಹಾಗೂ ಸಂಸ್ಕೃತಿಯ ಉಳಿವು ಮತ್ತು ಬೆಳವಣಿಗೆಯಲ್ಲಿ ಸರ್ಕಾರಿ ಶಾಲೆಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಕನ್ನಡ ಭಾಷೆಯನ್ನು ಉಳಿಸಿ ಬೆಳೆಸಬೇಕಾದರೆ ಸರ್ಕಾರಿ ಶಾಲೆಗಳನ್ನು ಸಂರಕ್ಷಿಸಿ, ಅವುಗಳ ಅಭಿವೃದ್ಧಿಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಅಖಂಡ ಕರ್ನಾಟಕ ರಕ್ಷಣಾ ಸಮಿತಿಯ ಸಂಸ್ಥಾಪಕ ರಾಜ್ಯಾಧ್ಯಕ್ಷ ರಾಜಶೇಖರ ಮಾಚರ್ಲಾ ಹೇಳಿದರು.

ನಗರದ ವಾರ್ಡ್ ನಂ. 4ರ ಗೋಲ್ ಮಾರ್ಕೆಟ್ ಇಂದಿರಾನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ಅಖಂಡ ಕರ್ನಾಟಕ ರಕ್ಷಣಾ ಸಮಿತಿ (ರಿ.) ರಾಜ್ಯ ಘಟಕದ ವತಿಯಿಂದ ಆಯೋಜಿಸಿದ್ದ 71ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ಆರಂಭದಲ್ಲಿ ಕನ್ನಡಾಂಬೆ ಶ್ರೀ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಮಾಡುವ ಮೂಲಕ ರಾಜ್ಯೋತ್ಸವ ಆಚರಣೆಗೆ ಚಾಲನೆ ನೀಡಲಾಯಿತು. ಬಳಿಕ ಶಾಲೆಯ ವಿದ್ಯಾರ್ಥಿಗಳು, ಶಿಕ್ಷಕರು, ಸಂಘಟನೆಯ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಸಾಮೂಹಿಕವಾಗಿ ನಾಡಗೀತೆ ಹಾಡಿ ಕನ್ನಡಾಂಬೆಗೆ ಗೌರವ ಸಲ್ಲಿಸಿದರು.

ರಾಜ್ಯೋತ್ಸವದ ಅಂಗವಾಗಿ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್ ಗಳು, ಪೆನ್ನುಗಳು ಹಾಗೂ ಹಣ್ಣುಹಂಪಲುಗಳನ್ನು ವಿತರಿಸಲಾಯಿತು. ಕನ್ನಡ ರಾಜ್ಯೋತ್ಸವವನ್ನು ಕೇವಲ ಸಾಂಸ್ಕೃತಿಕ ಆಚರಣೆಗೆ ಸೀಮಿತಗೊಳಿಸದೆ, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ನೆರವಾಗುವ ಸೇವಾ ಚಟುವಟಿಕೆಗಳ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ರಾಜಶೇಖರ ಮಾಚರ್ಲಾ, ಕನ್ನಡ ಭಾಷೆ ಸಾವಿರಾರು ವರ್ಷಗಳ ಶ್ರೀಮಂತ ಇತಿಹಾಸ, ಸಾಹಿತ್ಯ, ಸಂಸ್ಕೃತಿ ಹಾಗೂ ಪರಂಪರೆಯನ್ನು ಹೊಂದಿದೆ. ಕನ್ನಡ ನಾಡಿನ ಏಕೀಕರಣಕ್ಕಾಗಿ ಅನೇಕ ಮಹನೀಯರು, ಸಾಹಿತಿಗಳು ಹಾಗೂ ಹೋರಾಟಗಾರರು ಶ್ರಮಿಸಿದ್ದಾರೆ. ಅವರ ತ್ಯಾಗ ಮತ್ತು ಹೋರಾಟದ ಫಲವಾಗಿ ರೂಪುಗೊಂಡ ಕರ್ನಾಟಕದ ಭಾಷೆ ಹಾಗೂ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ಪ್ರತಿಯೊಬ್ಬ ಕನ್ನಡಿಗನ ಮೇಲಿದೆ ಎಂದು ತಿಳಿಸಿದರು.

ಕನ್ನಡ ಭಾಷೆಯ ಬೆಳವಣಿಗೆಗೆ ಸರ್ಕಾರಿ ಶಾಲೆಗಳು ಪ್ರಮುಖ ಆಧಾರಸ್ತಂಭಗಳಾಗಿವೆ. ವಿಶೇಷವಾಗಿ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ಮಕ್ಕಳಿಗೆ ಶಿಕ್ಷಣ ಒದಗಿಸುವಲ್ಲಿ ಸರ್ಕಾರಿ ಶಾಲೆಗಳ ಕೊಡುಗೆ ಅಪಾರವಾಗಿದೆ. ಇಂತಹ ಶಾಲೆಗಳಿಗೆ ಅಗತ್ಯ ಮೂಲಸೌಕರ್ಯ, ಶೈಕ್ಷಣಿಕ ಪರಿಕರಗಳು ಹಾಗೂ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಸರ್ಕಾರದ ಜೊತೆಗೆ ಸಂಘ ಸಂಸ್ಥೆಗಳು ಮತ್ತು ಸಾರ್ವಜನಿಕರೂ ಸಹಕರಿಸಬೇಕು ಎಂದು ಕರೆ ನೀಡಿದರು.

ವಿದ್ಯಾರ್ಥಿಗಳು ಕನ್ನಡ ಭಾಷೆಯ ಬಗ್ಗೆ ಅಭಿಮಾನ ಬೆಳೆಸಿಕೊಳ್ಳುವುದರ ಜೊತೆಗೆ ಉತ್ತಮ ಶಿಕ್ಷಣ ಪಡೆದು ಸಮಾಜದಲ್ಲಿ ಜವಾಬ್ದಾರಿಯುತ ನಾಗರಿಕರಾಗಿ ರೂಪುಗೊಳ್ಳಬೇಕು. ಕನ್ನಡವನ್ನು ಕೇವಲ ಮಾತನಾಡುವ ಭಾಷೆಯಾಗಿ ನೋಡದೆ, ಅದರ ಸಾಹಿತ್ಯ, ಇತಿಹಾಸ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಅರಿತುಕೊಳ್ಳಬೇಕು. ಪ್ರತಿಯೊಬ್ಬ ವಿದ್ಯಾರ್ಥಿಯೂ ಕನ್ನಡದ ಓದು ಮತ್ತು ಬರವಣಿಗೆಯಲ್ಲಿ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಅಖಂಡ ಕರ್ನಾಟಕ ರಕ್ಷಣಾ ಸಮಿತಿಯು ಕನ್ನಡ ನಾಡು, ನುಡಿ, ನೆಲ ಹಾಗೂ ಜಲದ ರಕ್ಷಣೆಗೆ ನಿರಂತರವಾಗಿ ಶ್ರಮಿಸುತ್ತಿದೆ. ಕನ್ನಡಪರ ಹೋರಾಟಗಳ ಜೊತೆಗೆ ಸಮಾಜಮುಖಿ ಸೇವಾ ಕಾರ್ಯಗಳಿಗೂ ಆದ್ಯತೆ ನೀಡಲಾಗುತ್ತಿದೆ. ಮುಂದಿನ ದಿನಗಳಲ್ಲಿಯೂ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೆರವು ನೀಡುವುದು ಸೇರಿದಂತೆ ವಿವಿಧ ಜನಪರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಸ್ವಾತಿ ಶರ್ಮಾ, ಮಹಿಳಾ ಘಟಕದ ರಾಜ್ಯ ಉಪಾಧ್ಯಕ್ಷೆ ಸರ್ವಮಂಗಳ ಜಿ. ಪಟ್ಟಣರ್ಕ, ರಾಜ್ಯ ಉಪಾಧ್ಯಕ್ಷ ನಾಗರಾಜ್ ಪಿ. ಬಾಣೇರ್ಕ, ರಾಜ್ಯ ಸಂಚಾಲಕ ಸುರೇಶ್ ಹೂಗಾರ, ಕಲಬುರಗಿ ಆಟೋ ಚಾಲಕರ ಘಟಕದ ಜಿಲ್ಲಾಧ್ಯಕ್ಷ ಚಿದಾನಂದ ಎಂ. ಬಾಣೇರ್ಕ, ರಾಯಚೂರು ಜಿಲ್ಲಾ ಗೌರವಾಧ್ಯಕ್ಷ ಹಳದಪ್ಪ ಗದ್ರಟಗಿ, ಕಾಂಗ್ರೆಸ್ ಮುಖಂಡ ವಿನಾಯಕ, ಸಿಂಧನೂರು ತಾಲೂಕು ಅಧ್ಯಕ್ಷ ಮುದುಕಪ್ಪ ಭೋವಿ, ಸಿಂಧನೂರು ತಾಲೂಕು ಉಪಾಧ್ಯಕ್ಷ ಮೋನೇಶ ಸಾಲಗುಂಧ, ಕೆ. ನರಸಿಂಹಲು ಹಾಗೂ ಶಾಲೆಯ ಮುಖ್ಯೋಪಾಧ್ಯಾಯಿನಿ ರೇಣುಕಾ ಉಪಸ್ಥಿತರಿದ್ದರು.

ಸಂಘಟನೆಯ ವಿವಿಧ ಘಟಕಗಳ ಪದಾಧಿಕಾರಿಗಳು, ಕಾರ್ಯಕರ್ತರು, ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸ್ಥಳೀಯ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿ ಕನ್ನಡ ರಾಜ್ಯೋತ್ಸವದ ಸಂಭ್ರಮಕ್ಕೆ ಸಾಕ್ಷಿಯಾದರು.

ಸರ್ಕಾರಿ ಶಾಲೆಗಳ ಖಾಸಗೀಕರಣದ ಪ್ರಯತ್ನ ಕೈಬಿಡಿ: ಕರ್ನಾಟಕ ವಿದ್ಯಾರ್ಥಿ ಸಂಘಟನೆ ಆಗ್ರಹ



ರಾಯಚೂರು: ಸರ್ಕಾರಿ ಶಾಲೆಗಳನ್ನು ಖಾಸಗಿ ಸಂಸ್ಥೆಗಳಿಗೆ ದತ್ತು ನೀಡುವ ಹೆಸರಿನಲ್ಲಿ ಖಾಸಗೀಕರಣಗೊಳಿಸಲು ರಾಜ್ಯ ಸರ್ಕಾರ ಮುಂದಾಗಿರುವುದು ಖಂಡನೀಯ. ಸರ್ಕಾರಿ ಶಾಲೆಗಳನ್ನು ಬಲಪಡಿಸುವ ಬದಲು ಖಾಸಗಿ ಕಂಪನಿಗಳ ಅಧೀನಕ್ಕೆ ಒಪ್ಪಿಸುವ ಪ್ರಯತ್ನವನ್ನು ತಕ್ಷಣ ಕೈಬಿಡಬೇಕು ಎಂದು ಕರ್ನಾಟಕ ವಿದ್ಯಾರ್ಥಿ ಸಂಘಟನೆ (ಕೆವಿಎಸ್) ಆಗ್ರಹಿಸಿದೆ.

ಈ ಕುರಿತು ಪ್ರಕಟಣೆ ನೀಡಿರುವ ಸಂಘಟನೆ, ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ, ಅಗತ್ಯ ಮೂಲಸೌಕರ್ಯ ಹಾಗೂ ವಿಷಯವಾರು ಶಿಕ್ಷಕರನ್ನು ಒದಗಿಸುವುದು ಸರ್ಕಾರದ ಪ್ರಮುಖ ಜವಾಬ್ದಾರಿಯಾಗಿದೆ. ಆದರೆ ಈ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸುವ ಬದಲು ಖಾಸಗಿ ಶಾಲಾ ಮಾಲೀಕರು ಹಾಗೂ ಖಾಸಗಿ ಕಂಪನಿಗಳಿಗೆ ಶಾಲೆಗಳನ್ನು ದತ್ತು ನೀಡುವ ಹೆಸರಿನಲ್ಲಿ ಖಾಸಗೀಕರಣಕ್ಕೆ ಮುಂದಾಗಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಆರೋಪಿಸಿದೆ.

ಶಿಕ್ಷಣವು ಪ್ರತಿಯೊಬ್ಬ ಮಗುವಿನ ಮೂಲಭೂತ ಹಕ್ಕಾಗಿದ್ದು, ಅದನ್ನು ವ್ಯಾಪಾರದ ಸರಕನ್ನಾಗಿ ಪರಿವರ್ತಿಸುವ ಯಾವುದೇ ಪ್ರಯತ್ನವನ್ನು ಒಪ್ಪಲು ಸಾಧ್ಯವಿಲ್ಲ. ಸರ್ಕಾರಿ ಶಾಲೆಗಳನ್ನು ಖಾಸಗಿ ಸಂಸ್ಥೆಗಳ ಅಧೀನಕ್ಕೆ ನೀಡುವುದರ ಹಿಂದಿನ ಉದ್ದೇಶವೇನು ಎಂಬುದನ್ನು ಸರ್ಕಾರ ಸಾರ್ವಜನಿಕರಿಗೆ ಸ್ಪಷ್ಟಪಡಿಸಬೇಕು. ಇಂತಹ ನಿರ್ಧಾರಗಳಿಂದ ಬಡವರು, ಮಧ್ಯಮ ವರ್ಗದವರು, ದಲಿತರು, ಶೋಷಿತರು ಹಾಗೂ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಮಕ್ಕಳ ಶೈಕ್ಷಣಿಕ ಭವಿಷ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಯಿದೆ ಎಂದು ಆತಂಕ ವ್ಯಕ್ತಪಡಿಸಿದೆ.

ಸರ್ಕಾರಿ ಶಾಲೆಗಳು ಗ್ರಾಮೀಣ ಪ್ರದೇಶಗಳು ಹಾಗೂ ಆರ್ಥಿಕವಾಗಿ ಹಿಂದುಳಿದ ಸಮುದಾಯಗಳ ಮಕ್ಕಳಿಗೆ ಶಿಕ್ಷಣದ ಪ್ರಮುಖ ಆಧಾರವಾಗಿವೆ. ಇಂತಹ ಶಾಲೆಗಳ ನಿರ್ವಹಣೆ ಮತ್ತು ಅಭಿವೃದ್ಧಿಯ ಜವಾಬ್ದಾರಿಯಿಂದ ಸರ್ಕಾರ ಹಿಂದೆ ಸರಿಯಬಾರದು. ಶಾಲೆಗಳಲ್ಲಿ ಶಿಕ್ಷಕರ ಕೊರತೆ, ಮೂಲಸೌಕರ್ಯಗಳ ಅಭಾವ ಹಾಗೂ ಶೈಕ್ಷಣಿಕ ಗುಣಮಟ್ಟಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸುವ ಮೂಲಕ ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ಮತ್ತಷ್ಟು ಸದೃಢಗೊಳಿಸಬೇಕು ಎಂದು ಒತ್ತಾಯಿಸಿದೆ.

ಖಾಸಗಿ ಕಂಪನಿಗಳಿಂದ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (ಸಿಎಸ್‌ಆರ್) ಅನುದಾನವನ್ನು ಪಡೆದು ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಬಳಸಿಕೊಳ್ಳಲು ಅವಕಾಶವಿದೆ. ಈ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಶಾಲಾ ಕಟ್ಟಡಗಳು, ಪ್ರಯೋಗಾಲಯಗಳು, ಗ್ರಂಥಾಲಯಗಳು, ಶೌಚಾಲಯಗಳು, ಕುಡಿಯುವ ನೀರು ಹಾಗೂ ಇತರ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಬಹುದು. ಇದಕ್ಕಾಗಿ ಸರ್ಕಾರಿ ಶಾಲೆಗಳನ್ನು ಖಾಸಗಿ ಸಂಸ್ಥೆಗಳ ಅಧೀನಕ್ಕೆ ಒಪ್ಪಿಸುವ ಅಗತ್ಯವೇನಿದೆ ಎಂದು ಸಂಘಟನೆ ಪ್ರಶ್ನಿಸಿದೆ.

ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಬೇಕು. ಪ್ರತಿಯೊಂದು ವಿಷಯಕ್ಕೂ ಅರ್ಹ ಶಿಕ್ಷಕರನ್ನು ನೇಮಿಸಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಕ್ರಮ ಕೈಗೊಳ್ಳಬೇಕು. ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡುವ ರೀತಿಯಲ್ಲಿ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸುವುದು ಸರ್ಕಾರದ ಆದ್ಯತೆಯಾಗಬೇಕು ಎಂದು ಆಗ್ರಹಿಸಿದೆ.

ಶಿಕ್ಷಣವು ಲಾಭ ಗಳಿಸುವ ಉದ್ಯಮವಲ್ಲ. ಅದು ಸಮಾಜದ ಸಮಾನತೆ, ಸಾಮಾಜಿಕ ನ್ಯಾಯ ಹಾಗೂ ಭವಿಷ್ಯದ ಪೀಳಿಗೆಯ ಅಭಿವೃದ್ಧಿಗೆ ಭದ್ರ ಬುನಾದಿಯಾಗಿದೆ. ಎಲ್ಲ ವರ್ಗದ ಮಕ್ಕಳಿಗೂ ಸಮಾನ ಶೈಕ್ಷಣಿಕ ಅವಕಾಶಗಳನ್ನು ಕಲ್ಪಿಸುವುದು ಸರ್ಕಾರದ ಕರ್ತವ್ಯವಾಗಿದ್ದು, ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ದುರ್ಬಲಗೊಳಿಸುವ ಯಾವುದೇ ನೀತಿಯನ್ನು ಜಾರಿಗೊಳಿಸಬಾರದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಸರ್ಕಾರಿ ಶಾಲೆಗಳನ್ನು ಖಾಸಗಿ ಸಂಸ್ಥೆಗಳಿಗೆ ದತ್ತು ನೀಡುವ ಯೋಜನೆಯನ್ನು ಸರ್ಕಾರ ತಕ್ಷಣ ಮರುಪರಿಶೀಲಿಸಿ ಕೈಬಿಡಬೇಕು. ಶಾಲೆಗಳ ಅಭಿವೃದ್ಧಿಗೆ ಅಗತ್ಯ ಅನುದಾನ ಬಿಡುಗಡೆ ಮಾಡಬೇಕು. ವಿಷಯವಾರು ಶಿಕ್ಷಕರ ನೇಮಕಾತಿ, ಮೂಲಸೌಕರ್ಯಗಳ ಸುಧಾರಣೆ ಹಾಗೂ ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ ನೀಡಬೇಕು. ಇಲ್ಲದಿದ್ದರೆ ವಿದ್ಯಾರ್ಥಿಗಳು, ಪಾಲಕರು ಹಾಗೂ ಸಾರ್ವಜನಿಕರನ್ನು ಸಂಘಟಿಸಿ ರಾಜ್ಯಾದ್ಯಂತ ತೀವ್ರ ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ ಎಂದು ಕರ್ನಾಟಕ ವಿದ್ಯಾರ್ಥಿ ಸಂಘಟನೆ ಎಚ್ಚರಿಸಿದೆ.

ಉತ್ತಮ ಆರೋಗ್ಯಕ್ಕಾಗಿ ಪೌಷ್ಟಿಕ ಆಹಾರ ಸೇವನೆ ಅಗತ್ಯ: ಅರವಿಂದ್ ಕುಮಾರ್



ಮಟಮಾರಿ, ನ.5: ಆರೋಗ್ಯಕರ ಜೀವನ ನಡೆಸಲು ಸಮತೋಲಿತ ಪೌಷ್ಟಿಕ ಆಹಾರ ಸೇವನೆ, ವೈಯಕ್ತಿಕ ಸ್ವಚ್ಛತೆ ಹಾಗೂ ಪರಿಸರ ನೈರ್ಮಲ್ಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ವಿಶೇಷವಾಗಿ ಗರ್ಭಿಣಿಯರು, ಬಾಣಂತಿಯರು ಮತ್ತು ಮಕ್ಕಳ ಆರೋಗ್ಯ ರಕ್ಷಣೆಯಲ್ಲಿ ಪೌಷ್ಟಿಕ ಆಹಾರ ಹಾಗೂ ಸಕಾಲಿಕ ಲಸಿಕಾಕರಣ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಅರವಿಂದ್ ಕುಮಾರ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಹಾಗೂ ಮಟಮಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಮಟಮಾರಿಯ ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿ ಆಯೋಜಿಸಿದ್ದ ಗ್ರಾಮ ಆರೋಗ್ಯ, ನೈರ್ಮಲ್ಯ ಮತ್ತು ಪೌಷ್ಟಿಕ ಆಹಾರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದಲ್ಲಿ ಉತ್ತಮ ಆರೋಗ್ಯ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದು ಅಗತ್ಯವಾಗಿದೆ. ಪೌಷ್ಟಿಕ ಆಹಾರ ಸೇವನೆಯೊಂದಿಗೆ ಶುದ್ಧ ಕುಡಿಯುವ ನೀರಿನ ಬಳಕೆ, ಕೈಗಳ ಸ್ವಚ್ಛತೆ, ಮನೆಯ ಸುತ್ತಮುತ್ತಲಿನ ಪರಿಸರ ನೈರ್ಮಲ್ಯ ಹಾಗೂ ಸಾಂಕ್ರಾಮಿಕ ರೋಗಗಳ ತಡೆಗಟ್ಟುವಿಕೆಗೆ ಹೆಚ್ಚಿನ ಗಮನ ನೀಡಬೇಕು. ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸದೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸುವುದರಿಂದ ಅನೇಕ ಕಾಯಿಲೆಗಳಿಂದ ದೂರವಿರಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಗರ್ಭಾವಸ್ಥೆಯಲ್ಲಿ ಮಹಿಳೆಯರು ಪೌಷ್ಟಿಕಾಂಶಯುಕ್ತ ಆಹಾರ ಸೇವಿಸುವುದರಿಂದ ತಾಯಿಯ ಆರೋಗ್ಯ ಕಾಪಾಡಿಕೊಳ್ಳುವುದರ ಜೊತೆಗೆ ಗರ್ಭದಲ್ಲಿರುವ ಮಗುವಿನ ಬೆಳವಣಿಗೆಗೂ ಸಹಕಾರಿಯಾಗುತ್ತದೆ. ಬಾಣಂತಿಯರು ಸಮತೋಲಿತ ಆಹಾರ ಸೇವಿಸುವುದರಿಂದ ಹೆರಿಗೆಯ ನಂತರ ದೈಹಿಕ ಚೇತರಿಕೆ ಹೊಂದಲು ಹಾಗೂ ಮಗುವಿಗೆ ಎದೆಹಾಲುಣಿಸಲು ಅನುಕೂಲವಾಗುತ್ತದೆ. ಹೀಗಾಗಿ ಗರ್ಭಿಣಿಯರು ಮತ್ತು ಬಾಣಂತಿಯರು ತಮ್ಮ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು ಎಂದು ಸಲಹೆ ನೀಡಿದರು.

ಮಕ್ಕಳ ಆರೋಗ್ಯ ರಕ್ಷಣೆಯಲ್ಲಿ ಲಸಿಕಾಕರಣ ಅತ್ಯಂತ ಮಹತ್ವದ್ದಾಗಿದ್ದು, ಸರ್ಕಾರದ ನಿಗದಿತ ಲಸಿಕಾ ವೇಳಾಪಟ್ಟಿಯಂತೆ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಬೇಕು. ಲಸಿಕೆಗಳಿಂದ 12 ಮಾರಕ ರೋಗಗಳ ವಿರುದ್ಧ ಮಕ್ಕಳಿಗೆ ರಕ್ಷಣೆ ಒದಗಿಸಬಹುದು. ಸಕಾಲದಲ್ಲಿ ಲಸಿಕೆ ಹಾಕಿಸುವುದರಿಂದ ತಡೆಗಟ್ಟಬಹುದಾದ ರೋಗಗಳ ಅಪಾಯವನ್ನು ಕಡಿಮೆ ಮಾಡಿ ಶಿಶು ಮರಣ ಪ್ರಮಾಣ ತಗ್ಗಿಸಲು ಸಾಧ್ಯವಾಗುತ್ತದೆ. ಪಾಲಕರು ಮಕ್ಕಳ ಲಸಿಕಾಕರಣದ ಬಗ್ಗೆ ನಿರ್ಲಕ್ಷ್ಯ ತೋರದೆ ಆರೋಗ್ಯ ಕಾರ್ಯಕರ್ತರ ಮಾರ್ಗದರ್ಶನ ಪಡೆಯಬೇಕು ಎಂದು ಹೇಳಿದರು.

ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ವಿಜಯಲಕ್ಷ್ಮಿ ಮಾತನಾಡಿ, ನವಜಾತ ಶಿಶುಗಳಿಗೆ ಜನನದಿಂದ ಆರು ತಿಂಗಳವರೆಗೆ ತಾಯಿಯ ಎದೆಹಾಲನ್ನು ಮಾತ್ರ ನೀಡಬೇಕು. ತಾಯಿಯ ಎದೆಹಾಲಿನಲ್ಲಿ ಮಗುವಿನ ಬೆಳವಣಿಗೆಗೆ ಅಗತ್ಯವಾದ ಪೋಷಕಾಂಶಗಳು ಹಾಗೂ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು ಸಹಕಾರಿಯಾಗುವ ಅಂಶಗಳಿರುತ್ತವೆ. ಆರು ತಿಂಗಳು ಪೂರ್ಣಗೊಂಡ ನಂತರ ಎದೆಹಾಲಿನ ಜೊತೆಗೆ ಮಗುವಿನ ವಯಸ್ಸಿಗೆ ಅನುಗುಣವಾಗಿ ಪೂರಕ ಪೌಷ್ಟಿಕ ಆಹಾರ ನೀಡಬೇಕು ಎಂದು ತಿಳಿಸಿದರು.

ಕುಟುಂಬದ ಆರೋಗ್ಯ ಮತ್ತು ತಾಯಿ-ಮಗುವಿನ ಸುರಕ್ಷತೆಯ ದೃಷ್ಟಿಯಿಂದ ಕುಟುಂಬ ಯೋಜನೆಯ ಬಗ್ಗೆ ಅರಿವು ಹೊಂದುವುದು ಅಗತ್ಯವಾಗಿದೆ. ಎರಡು ಮಕ್ಕಳ ಜನನದ ನಡುವೆ ಕನಿಷ್ಠ ಮೂರು ವರ್ಷಗಳ ಅಂತರ ಕಾಯ್ದುಕೊಳ್ಳುವುದರಿಂದ ತಾಯಿಯ ದೈಹಿಕ ಆರೋಗ್ಯ ಸುಧಾರಿಸುವುದರ ಜೊತೆಗೆ ಮಕ್ಕಳ ಆರೈಕೆ ಹಾಗೂ ಪೌಷ್ಟಿಕ ಬೆಳವಣಿಗೆಗೆ ಹೆಚ್ಚಿನ ಅವಕಾಶ ದೊರೆಯುತ್ತದೆ. ಆರೋಗ್ಯಕರ ಕುಟುಂಬಗಳಿಂದಲೇ ಆರೋಗ್ಯವಂತ ಸಮಾಜ ನಿರ್ಮಾಣ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಗ್ರಾಮೀಣ ಪ್ರದೇಶಗಳಲ್ಲಿ ಆರೋಗ್ಯ, ನೈರ್ಮಲ್ಯ ಹಾಗೂ ಪೌಷ್ಟಿಕ ಆಹಾರದ ಮಹತ್ವದ ಕುರಿತು ಸಾರ್ವಜನಿಕರಲ್ಲಿ ನಿರಂತರ ಜಾಗೃತಿ ಮೂಡಿಸುವ ಅಗತ್ಯವಿದೆ. ವಿಶೇಷವಾಗಿ ಮಹಿಳೆಯರು ಮತ್ತು ಮಕ್ಕಳಿಗೆ ಆರೋಗ್ಯ ಇಲಾಖೆಯ ಸೇವೆಗಳು ಹಾಗೂ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಮಾಹಿತಿ ತಲುಪಿಸುವುದು ಇಂತಹ ಕಾರ್ಯಕ್ರಮಗಳ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಆಶಾ ಕಾರ್ಯಕರ್ತೆಯರಾದ ಚಂದ್ರಿಕಾ, ಸುಭದ್ರಾ, ವಿದ್ಯಾ, ಬಿ. ಲಕ್ಷ್ಮೀ ಹಾಗೂ ಎನ್. ಲಕ್ಷ್ಮೀ ಉಪಸ್ಥಿತರಿದ್ದರು.

ಸರ್ಕಾರಿ ಬಾಲಕಿಯರ ಶಾಲೆಗೆ 7 ಲ್ಯಾಪ್‌ಟಾಪ್ ವಿತರಣೆ: ಕಂಪ್ಯೂಟರ್ ಜ್ಞಾನ ಪಡೆದುಕೊಳ್ಳಲು ತಹಸೀಲ್ದಾರ್ ಅಶೋಕ ಪವಾರ್ ಕರೆ



ಸಿರವಾರ, ನ.5: ಆಧುನಿಕ ಶಿಕ್ಷಣ ವ್ಯವಸ್ಥೆಯಲ್ಲಿ ಪಠ್ಯಪುಸ್ತಕಗಳ ಜ್ಞಾನದ ಜೊತೆಗೆ ಕಂಪ್ಯೂಟರ್ ಹಾಗೂ ಡಿಜಿಟಲ್ ತಂತ್ರಜ್ಞಾನದ ಅರಿವು ಅತ್ಯಗತ್ಯವಾಗಿದ್ದು, ವಿದ್ಯಾರ್ಥಿನಿಯರು ತಮಗೆ ದೊರೆತಿರುವ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ಶೈಕ್ಷಣಿಕವಾಗಿ ಪ್ರಗತಿ ಸಾಧಿಸಬೇಕು ಎಂದು ತಹಸೀಲ್ದಾರ್ ಅಶೋಕ ಪವಾರ್ ಕರೆ ನೀಡಿದರು.

ಪಟ್ಟಣದ ಸರ್ಕಾರಿ ಬಾಲಕಿಯರ ಪ್ರಾಥಮಿಕ ಶಾಲೆಗೆ ಇಂಡಿ ವಿಲೇಜ್ ಫೌಂಡೇಷನ್ ವತಿಯಿಂದ ಕೊಡುಗೆಯಾಗಿ ನೀಡಲಾದ ಏಳು ಲ್ಯಾಪ್ ಟಾಪ್‌ಗಳನ್ನು ವಿತರಿಸಿ, ನೂತನ ಕಂಪ್ಯೂಟರ್ ಪ್ರಯೋಗಾಲಯವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರಿ ಶಾಲೆಗಳೆಂದರೆ ಕೆಲವರಲ್ಲಿ ನಿರ್ಲಕ್ಷ್ಯದ ಮನೋಭಾವನೆ ಕಂಡುಬರುತ್ತದೆ. ಆದರೆ ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುವ ಮಕ್ಕಳಲ್ಲಿಯೂ ಅಪಾರ ಪ್ರತಿಭೆ ಹಾಗೂ ಕಲಿಕಾ ಸಾಮರ್ಥ್ಯವಿದೆ. ಇಂತಹ ವಿದ್ಯಾರ್ಥಿಗಳಿಗೆ ಅಗತ್ಯವಾದ ಶೈಕ್ಷಣಿಕ ಸೌಲಭ್ಯಗಳನ್ನು ಒದಗಿಸಿದಾಗ ಅವರು ಕೂಡ ಉತ್ತಮ ಸಾಧನೆ ಮಾಡಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಸರ್ಕಾರಿ ಶಾಲೆಯ ವಿದ್ಯಾರ್ಥಿನಿಯರ ಶೈಕ್ಷಣಿಕ ಅಭಿವೃದ್ಧಿಗೆ ಆದ್ಯತೆ ನೀಡಿ ಲ್ಯಾಪ್‌ಟಾಪ್ ಗಳನ್ನು ಒದಗಿಸಿರುವ ಇಂಡಿ ವಿಲೇಜ್ ಫೌಂಡೇಷನ್ ನ ಕಾರ್ಯ ಶ್ಲಾಘನೀಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಹಿಂದಿನ ಕಾಲದಲ್ಲಿ ಓದಲು ಮತ್ತು ಬರೆಯಲು ಬಾರದವರನ್ನು ಅನಕ್ಷರಸ್ಥರು ಎಂದು ಪರಿಗಣಿಸಲಾಗುತ್ತಿತ್ತು. ಆದರೆ ಇಂದಿನ ತಂತ್ರಜ್ಞಾನ ಆಧಾರಿತ ಯುಗದಲ್ಲಿ ಸಾಮಾನ್ಯ ಶಿಕ್ಷಣದ ಜೊತೆಗೆ ಕಂಪ್ಯೂಟರ್ ಜ್ಞಾನವೂ ಅತ್ಯಂತ ಅಗತ್ಯವಾಗಿದೆ. ಶಿಕ್ಷಣ, ಉದ್ಯೋಗ, ಸ್ಪರ್ಧಾತ್ಮಕ ಪರೀಕ್ಷೆಗಳು ಹಾಗೂ ದೈನಂದಿನ ಜೀವನದ ಅನೇಕ ಕ್ಷೇತ್ರಗಳಲ್ಲಿ ಡಿಜಿಟಲ್ ತಂತ್ರಜ್ಞಾನದ ಬಳಕೆ ಹೆಚ್ಚುತ್ತಿರುವುದರಿಂದ ವಿದ್ಯಾರ್ಥಿಗಳು ಬಾಲ್ಯದಿಂದಲೇ ಕಂಪ್ಯೂಟರ್ ಕಲಿಕೆಗೆ ಹೆಚ್ಚಿನ ಆಸಕ್ತಿ ವಹಿಸಬೇಕು ಎಂದು ಸಲಹೆ ನೀಡಿದರು.

ಫೌಂಡೇಷನ್ ವತಿಯಿಂದ ಒದಗಿಸಿರುವ ಲ್ಯಾಪ್‌ಟಾಪ್‌ಗಳನ್ನು ಕೇವಲ ಶಾಲೆಯ ಆಸ್ತಿಯೆಂದು ಪರಿಗಣಿಸದೆ, ವಿದ್ಯಾರ್ಥಿನಿಯರ ಭವಿಷ್ಯ ರೂಪಿಸುವ ಪ್ರಮುಖ ಶೈಕ್ಷಣಿಕ ಸಾಧನಗಳೆಂದು ಭಾವಿಸಬೇಕು. ಶಿಕ್ಷಕರ ಮಾರ್ಗದರ್ಶನದಲ್ಲಿ ಅವುಗಳನ್ನು ಬಳಸಿಕೊಂಡು ಕಂಪ್ಯೂಟರ್‌ನ ಮೂಲಭೂತ ಜ್ಞಾನ, ತಂತ್ರಜ್ಞಾನದ ಬಳಕೆ ಹಾಗೂ ಡಿಜಿಟಲ್ ಕಲಿಕೆಯ ಕೌಶಲಗಳನ್ನು ಬೆಳೆಸಿಕೊಳ್ಳಬೇಕು. ಲ್ಯಾಪ್‌ಟಾಪ್ ಗಳು ಅನೇಕ ವರ್ಷಗಳ ಕಾಲ ವಿದ್ಯಾರ್ಥಿಗಳಿಗೆ ಉಪಯೋಗವಾಗುವಂತೆ ಅವುಗಳ ನಿರ್ವಹಣೆ ಮತ್ತು ಸಂರಕ್ಷಣೆಗೆ ಶಾಲಾ ಆಡಳಿತ ಮಂಡಳಿ ಹಾಗೂ ಶಿಕ್ಷಕರು ವಿಶೇಷ ಗಮನ ಹರಿಸಬೇಕು ಎಂದು ತಿಳಿಸಿದರು.

ಸರ್ಕಾರಿ ಶಾಲೆಯನ್ನು ಗುರುತಿಸಿ ವಿದ್ಯಾರ್ಥಿನಿಯರಿಗೆ ಆಧುನಿಕ ತಂತ್ರಜ್ಞಾನದ ಸೌಲಭ್ಯ ಕಲ್ಪಿಸಿರುವ ಇಂಡಿ ವಿಲೇಜ್ ಫೌಂಡೇಷನ್ ನ ಪದಾಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದ ಅವರು, ಇಂತಹ ಸಮಾಜಮುಖಿ ಕಾರ್ಯಗಳು ಸರ್ಕಾರಿ ಶಾಲೆಗಳ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಿರಸ್ತೇದಾರ್ ಫಕ್ರುದ್ದೀನ್, ಇಂಡಿ ವಿಲೇಜ್ ಫೌಂಡೇಷನ್‌ನ ಎನ್‌ಜಿಒ ಸಂಯೋಜಕಿ ಸುಪ್ರಿಯಾ, ಅನುಷಾ, ಅಮರೇಶ್, ಗಂಗಪ್ಪ, ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್‌ಡಿಎಂಸಿ) ಅಧ್ಯಕ್ಷ ಮಲ್ಲಿಕಾರ್ಜುನ, ಮುಖ್ಯಗುರು ರಾಜಾಸಾಬ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಹೇಶ್, ಪ್ರಧಾನ ಕಾರ್ಯದರ್ಶಿ ಬಸವರಾಜ, ಜಿಪಿಟಿ ಶಿಕ್ಷಕರ ಸಂಘದ ಅಧ್ಯಕ್ಷ ಚನ್ನವೀರಯ್ಯ ಉಪಸ್ಥಿತರಿದ್ದರು.

ಶಿಕ್ಷಕಿಯರಾದ ಶಕುಂತಲಾ, ನಾಗರತ್ನ, ಲಲಿತಾ, ಶ್ರುತಿ, ಭುವನೇಶ್ವರಿ, ಯಲ್ಲಮ್ಮ, ರಮಾದೇವಿ, ವಿಜಯಲಕ್ಷ್ಮಿ ಹಾಗೂ ಮೌಲಾಸಾಬ್ ಸೇರಿದಂತೆ ಶಾಲೆಯ ಸಿಬ್ಬಂದಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಕನ್ನಡಕ್ಕೆ ಎರಡು ಸಾವಿರ ವರ್ಷಗಳ ಭವ್ಯ ಇತಿಹಾಸ: ಶಾಸಕ ಜಿ. ಹಂಪಯ್ಯ ನಾಯಕ



ಸಿರವಾರ, ನ.5: ಕನ್ನಡ ಭಾಷೆಯು ಎರಡು ಸಾವಿರ ವರ್ಷಗಳಿಗೂ ಅಧಿಕ ಐತಿಹಾಸಿಕ ಪರಂಪರೆಯನ್ನು ಹೊಂದಿದ್ದು, ಎಂಟು ಜ್ಞಾನಪೀಠ ಪ್ರಶಸ್ತಿಗಳನ್ನು ಪಡೆದಿರುವ ಕನ್ನಡ ಸಾಹಿತ್ಯವು ದೇಶದ ಶ್ರೀಮಂತ ಸಾಹಿತ್ಯ ಪರಂಪರೆಗಳಲ್ಲಿ ಒಂದಾಗಿದೆ ಎಂದು ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕ ಜಿ. ಹಂಪಯ್ಯ ನಾಯಕ ಸಾಹುಕಾರ್ ಹೇಳಿದರು.

ತಾಲೂಕಿನ ತಮ್ಮ ಸ್ವಗ್ರಾಮ ಬಲ್ಲಟಗಿಯ ಶ್ರೀ ಬಸವೇಶ್ವರ ಪ್ರಾಥಮಿಕ ಹಾಗೂ ಪ್ರೌಢ ಆಂಗ್ಲ ಮಾಧ್ಯಮ ಶಾಲೆಯ ವತಿಯಿಂದ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಆಯೋಜಿಸಿದ್ದ ಕನ್ನಡಾಂಬೆ ಭುವನೇಶ್ವರಿಯ ಭಾವಚಿತ್ರದ ಮೆರವಣಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕನ್ನಡವು ಭಾರತದ ಪ್ರಾಚೀನ ದ್ರಾವಿಡ ಭಾಷೆಗಳಲ್ಲಿ ಒಂದಾಗಿದ್ದು, ತನ್ನದೇ ಆದ ವಿಶಿಷ್ಟ ಭಾಷಾ ಪರಂಪರೆ, ಸಾಹಿತ್ಯ, ಕಲೆ, ಸಂಸ್ಕೃತಿ ಹಾಗೂ ಇತಿಹಾಸವನ್ನು ಹೊಂದಿದೆ. ಕನ್ನಡ ಭಾಷೆಯ ಶ್ರೀಮಂತಿಕೆಗೆ ನಾಡಿನ ಸಾಹಿತಿಗಳು, ಕವಿಗಳು, ಚಿಂತಕರು ಹಾಗೂ ಕನ್ನಡಪರ ಹೋರಾಟಗಾರರ ಕೊಡುಗೆ ಅಪಾರವಾಗಿದೆ. ಕನ್ನಡ ನಾಡಿನ ಭಾಷಾ ಪರಂಪರೆಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬ ಕನ್ನಡಿಗನ ಮೇಲಿದೆ ಎಂದು ತಿಳಿಸಿದರು.

ಕರ್ನಾಟಕ ಏಕೀಕರಣ ಚಳವಳಿಯ ಇತಿಹಾಸವನ್ನು ಸ್ಮರಿಸಿದ ಶಾಸಕರು, ಆಲೂರು ವೆಂಕಟರಾವ್ ಅವರು 1905ರಲ್ಲಿಯೇ ಕರ್ನಾಟಕ ಏಕೀಕರಣದ ಆಶಯವನ್ನು ಜನರಲ್ಲಿ ಮೂಡಿಸುವ ಮೂಲಕ ಕನ್ನಡಿಗರಲ್ಲಿ ನಾಡು-ನುಡಿಯ ಪ್ರಜ್ಞೆಯನ್ನು ಜಾಗೃತಗೊಳಿಸಲು ಶ್ರಮಿಸಿದರು. ಕನ್ನಡ ಮಾತನಾಡುವ ಪ್ರದೇಶಗಳನ್ನು ಒಗ್ಗೂಡಿಸುವ ದೀರ್ಘಕಾಲದ ಹೋರಾಟದ ಫಲವಾಗಿ 1956ರಲ್ಲಿ ಮೈಸೂರು ರಾಜ್ಯ ರಚನೆಯಾಯಿತು. ನಂತರ 1973ರ ನವೆಂಬರ್ 1ರಂದು ಅಂದಿನ ಮುಖ್ಯಮಂತ್ರಿ ದಿವಂಗತ ಡಿ. ದೇವರಾಜ ಅರಸು ಅವರ ಆಡಳಿತಾವಧಿಯಲ್ಲಿ ರಾಜ್ಯಕ್ಕೆ ಕರ್ನಾಟಕ ಎಂದು ಅಧಿಕೃತವಾಗಿ ಮರುನಾಮಕರಣ ಮಾಡಲಾಯಿತು ಎಂದು ವಿವರಿಸಿದರು.

ವಿದ್ಯಾರ್ಥಿಗಳು ಪಠ್ಯಪುಸ್ತಕಗಳ ಅಧ್ಯಯನದೊಂದಿಗೆ ಕನ್ನಡ ಭಾಷೆಯ ಇತಿಹಾಸ, ಸಾಹಿತ್ಯ, ಸಂಸ್ಕೃತಿ ಹಾಗೂ ನಾಡಿನ ಮಹನೀಯರ ಸಾಧನೆಗಳನ್ನು ತಿಳಿದುಕೊಳ್ಳಬೇಕು. ಕನ್ನಡ ಭಾಷೆಯ ಬಗ್ಗೆ ಅಭಿಮಾನ ಬೆಳೆಸಿಕೊಂಡು ಅದರ ಉಳಿವು ಮತ್ತು ಬೆಳವಣಿಗೆಗೆ ಮುಂದಾಗಬೇಕು ಎಂದು ಕರೆ ನೀಡಿದರು.

ರಾಜ್ಯೋತ್ಸವದ ಅಂಗವಾಗಿ ಶಾಲಾ ಆವರಣದಿಂದ ಆರಂಭವಾದ ಕನ್ನಡಾಂಬೆ ಭುವನೇಶ್ವರಿಯ ಭಾವಚಿತ್ರದ ಮೆರವಣಿಗೆ ಗ್ರಾಮದ ವಾಲ್ಮೀಕಿ ವೃತ್ತ ಸೇರಿದಂತೆ ಪ್ರಮುಖ ವೃತ್ತಗಳು ಹಾಗೂ ಬೀದಿಗಳ ಮೂಲಕ ಸಂಚರಿಸಿ ಮರಳಿ ಶಾಲಾ ಆವರಣಕ್ಕೆ ಆಗಮಿಸಿ ಮುಕ್ತಾಯಗೊಂಡಿತು.

ಮೆರವಣಿಗೆಯಲ್ಲಿ ಶಾಲಾ ವಿದ್ಯಾರ್ಥಿಗಳು ವಿವಿಧ ಸಾಂಪ್ರದಾಯಿಕ ವೇಷಭೂಷಣಗಳನ್ನು ಧರಿಸಿ ಭಾಗವಹಿಸುವ ಮೂಲಕ ಕನ್ನಡ ನಾಡಿನ ಸಾಂಸ್ಕೃತಿಕ ವೈಭವವನ್ನು ಪ್ರತಿಬಿಂಬಿಸಿದರು. ವಿದ್ಯಾರ್ಥಿಗಳ ಉತ್ಸಾಹಭರಿತ ಪಾಲ್ಗೊಳ್ಳುವಿಕೆಯಿಂದ ಗ್ರಾಮದಲ್ಲಿ ರಾಜ್ಯೋತ್ಸವದ ಸಂಭ್ರಮ ಮನೆಮಾಡಿತ್ತು.

ಈ ಸಂದರ್ಭದಲ್ಲಿ ಪಿ. ಶಂಕರಗೌಡ, ಮಲ್ಲಿಕಾರ್ಜುನ ಪಾಟೀಲ್, ವೆಂಕನಗೌಡ, ಶಾಲೆಯ ಅಧ್ಯಕ್ಷ ಪಿ. ಚಂದ್ರಶೇಖರ, ಆರ್. ಶರಣಗೌಡ, ಶಿವಶರಣಗೌಡ, ಮುದಪ್ಪ ಸಾಹುಕಾರ್, ಬಸವಗೌಡ ಕೊಡೆಕಲ್, ಪಿ. ಬಸವಗೌಡ ಸೇರಿದಂತೆ ಗ್ರಾಮದ ಮುಖಂಡರು, ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಬಾಲ್ಯವಿವಾಹ ಮುಕ್ತ ರಾಯಚೂರು ನಿರ್ಮಾಣಕ್ಕೆ ಸಂಕಲ್ಪ: 100 ದಿನಗಳ ಜಾಗೃತಿ ಅಭಿಯಾನದ ಪೋಸ್ಟರ್ ಬಿಡುಗಡೆ



ರಾಯಚೂರು, ನ. 5: ಜಿಲ್ಲೆಯಲ್ಲಿ ಬಾಲ್ಯವಿವಾಹ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಿ, ಮಕ್ಕಳ ಹಕ್ಕುಗಳು ಹಾಗೂ ಉಜ್ವಲ ಭವಿಷ್ಯವನ್ನು ರಕ್ಷಿಸುವ ಉದ್ದೇಶದಿಂದ ಮಾರ್ಗದರ್ಶಿ ಸೊಸೈಟಿ ವತಿಯಿಂದ ಹಮ್ಮಿಕೊಂಡಿರುವ ಬಾಲ್ಯವಿವಾಹ ಮುಕ್ತ ರಾಯಚೂರು 100 ದಿನಗಳ ವಿಶೇಷ ಜಾಗೃತಿ ಅಭಿಯಾನದ ಬ್ಯಾನರ್ ಹಾಗೂ ಪೋಸ್ಟರ್‌ಗಳನ್ನು ಹೆಚ್ಚುವರಿ ಜಿಲ್ಲಾ ಪೊಲೀಸ್ ಅಧೀಕ್ಷಕ ಹರೀಶ್ ಬಾಬು ಬಿಡುಗಡೆ ಮಾಡಿದರು.

ನಗರದ ಜಿಲ್ಲಾ ಪೊಲೀಸ್ ಸಭಾಂಗಣದಲ್ಲಿ ನವೆಂಬರ್ 4ರಂದು ಆಯೋಜಿಸಿದ್ದ ಅಪಹರಣಕ್ಕೊಳಗಾದ ಹಾಗೂ ಕಾಣೆಯಾದ ಮಕ್ಕಳ ಪತ್ತೆ ಮತ್ತು ಪಾಲಕರ ಸಭೆಯ ಸಂದರ್ಭದಲ್ಲಿ ಅಭಿಯಾನದ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಹೆಚ್ಚುವರಿ ಜಿಲ್ಲಾ ಪೊಲೀಸ್ ಅಧೀಕ್ಷಕ ಹರೀಶ್ ಬಾಬು, ಜಿಲ್ಲೆಯಲ್ಲಿ ಒಂದೇ ಒಂದು ಬಾಲ್ಯವಿವಾಹವೂ ನಡೆಯದಂತೆ ತಡೆಯುವುದು ನಮ್ಮ ಪ್ರಮುಖ ಗುರಿಯಾಗಿದೆ. ಬಾಲ್ಯವಿವಾಹವು ಮಕ್ಕಳ ಬಾಲ್ಯ, ಶಿಕ್ಷಣ, ಆರೋಗ್ಯ ಹಾಗೂ ಭವಿಷ್ಯವನ್ನು ಕಸಿದುಕೊಳ್ಳುವ ಸಾಮಾಜಿಕ ಅನಿಷ್ಟ ಪದ್ಧತಿಯಾಗಿದೆ. ಇದನ್ನು ನಿರ್ಮೂಲನೆ ಮಾಡಲು ಪೊಲೀಸ್ ಇಲಾಖೆ, ಸಂಬಂಧಪಟ್ಟ ಇಲಾಖೆಗಳು, ಸ್ವಯಂಸೇವಾ ಸಂಸ್ಥೆಗಳು ಹಾಗೂ ಸಾರ್ವಜನಿಕರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು.

ಬಾಲ್ಯವಿವಾಹ ನಿಷೇಧ ಕಾಯ್ದೆಯ ಪ್ರಕಾರ 18 ವರ್ಷ ಪೂರ್ಣಗೊಳಿಸದ ಹೆಣ್ಣುಮಕ್ಕಳು ಹಾಗೂ 21 ವರ್ಷ ಪೂರ್ಣಗೊಳಿಸದ ಗಂಡುಮಕ್ಕಳ ವಿವಾಹವು ಬಾಲ್ಯವಿವಾಹದ ವ್ಯಾಪ್ತಿಗೆ ಒಳಪಡುತ್ತದೆ. ಇಂತಹ ವಿವಾಹಗಳನ್ನು ಏರ್ಪಡಿಸುವುದು, ನೆರವೇರಿಸುವುದು ಹಾಗೂ ಕಾನೂನು ಉಲ್ಲಂಘನೆಯ ಮೂಲಕ ಅದಕ್ಕೆ ಸಹಕರಿಸುವುದು ಶಿಕ್ಷಾರ್ಹ ಅಪರಾಧವಾಗಿದೆ. ಬಾಲ್ಯವಿವಾಹ ನಡೆಯುತ್ತಿರುವ ಕುರಿತು ಮಾಹಿತಿ ದೊರೆತ ತಕ್ಷಣ ಸಂಬಂಧಪಟ್ಟ ಅಧಿಕಾರಿಗಳು ಕಾನೂನು ಕ್ರಮ ಕೈಗೊಳ್ಳಲಿದ್ದಾರೆ ಎಂದು ಎಚ್ಚರಿಸಿದರು.

100 ದಿನಗಳ ಅಭಿಯಾನದ ಅಂಗವಾಗಿ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಶಿಕ್ಷಣ ಇಲಾಖೆ ಹಾಗೂ ವಿವಿಧ ಸ್ವಯಂಸೇವಾ ಸಂಸ್ಥೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಲಿವೆ. ಜಿಲ್ಲೆಯಾದ್ಯಂತ ಶಾಲಾ-ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳು, ಗ್ರಾಮಮಟ್ಟದ ಸಭೆಗಳು, ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳು ಹಾಗೂ ಮನೆಮನೆಗೆ ತೆರಳಿ ಮಾಹಿತಿ ನೀಡುವ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಬಾಲ್ಯವಿವಾಹದಿಂದ ಉಂಟಾಗುವ ದುಷ್ಪರಿಣಾಮಗಳು, ಮಕ್ಕಳ ಶಿಕ್ಷಣದ ಮಹತ್ವ, ಬಾಲ್ಯವಿವಾಹ ನಿಷೇಧ ಕಾಯ್ದೆಯ ನಿಯಮಗಳು ಹಾಗೂ ಕಾನೂನು ಉಲ್ಲಂಘಿಸಿದವರಿಗೆ ವಿಧಿಸಲಾಗುವ ಶಿಕ್ಷೆಗಳ ಕುರಿತು ಪಾಲಕರು ಮತ್ತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಅಭಿಯಾನದ ಪ್ರಮುಖ ಉದ್ದೇಶವಾಗಿದೆ.

ಬಾಲ್ಯವಿವಾಹವನ್ನು ತಡೆಗಟ್ಟುವುದು ಕೇವಲ ಸರ್ಕಾರ ಅಥವಾ ಪೊಲೀಸ್ ಇಲಾಖೆಯ ಜವಾಬ್ದಾರಿಯಲ್ಲ. ಪ್ರತಿಯೊಬ್ಬ ನಾಗರಿಕನೂ ಸಾಮಾಜಿಕ ಹೊಣೆಗಾರಿಕೆಯಿಂದ ಕಾರ್ಯನಿರ್ವಹಿಸಬೇಕು. ಬಾಲ್ಯವಿವಾಹ ನಡೆಯುತ್ತಿರುವ ಅಥವಾ ನಡೆಯುವ ಸಾಧ್ಯತೆ ಇರುವ ಬಗ್ಗೆ ಮಾಹಿತಿ ದೊರೆತರೆ ತಕ್ಷಣ ಮಕ್ಕಳ ಸಹಾಯವಾಣಿ 1098, ತುರ್ತು ಸಹಾಯವಾಣಿ 112 ಅಥವಾ ಸಮೀಪದ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕು ಎಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ರಾಯಚೂರು ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಸುದರ್ಶನ್, ಮಾರ್ಗದರ್ಶಿ ಸೊಸೈಟಿ ನಿರ್ದೇಶಕ ಆನಂದರಾಜ್, ಮಹಿಳಾ ಪೊಲೀಸ್ ಠಾಣೆಯ ಪೊಲೀಸ್ ಇನ್‌ಸ್ಪೆಕ್ಟರ್ ಅಮರೇಶ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಆಸಾಂಸ್ಥಿಕ ರಕ್ಷಣಾಧಿಕಾರಿ ಕೆರಲಿಂಗಪ್ಪ, ಕಾನೂನು ಪರಿವೀಕ್ಷಣಾಧಿಕಾರಿ ಶಿವರಾಜ್, ಸಮಾಜ ಕಾರ್ಯಕರ್ತ ತಿಕ್ಕಯ್ಯ, ಶ್ರುತಿ ಸಂಸ್ಕೃತಿ ಸಂಸ್ಥೆಯ ಜಿಲ್ಲಾ ಸಂಯೋಜಕ ಅನಿಲ್ ಕುಮಾರ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ, ಪೊಲೀಸ್ ಸಿಬ್ಬಂದಿ ಹಾಗೂ ಮಾರ್ಗದರ್ಶಿ ಸೊಸೈಟಿಯ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಬ್ಯಾಂಕಿಂಗ್ ಕ್ಷೇತ್ರದಲ್ಲಿ ಯಶಸ್ಸಿಗೆ ಪದವಿಯೊಂದಿಗೆ ವೃತ್ತಿಪರ ಕೌಶಲ್ಯ ಅಗತ್ಯ: ಸಾವಿತ್ರಿ ಎಂ.



ರಾಯಚೂರು, ನ. 5: ಇಂದಿನ ಸ್ಪರ್ಧಾತ್ಮಕ ಉದ್ಯೋಗ ಮಾರುಕಟ್ಟೆಯಲ್ಲಿ ಕೇವಲ ಪದವಿ ಶಿಕ್ಷಣ ಪಡೆದರೆ ಸಾಲದು. ಬ್ಯಾಂಕಿಂಗ್ ಮತ್ತು ಹಣಕಾಸು ಕ್ಷೇತ್ರದಲ್ಲಿ ಉತ್ತಮ ವೃತ್ತಿಜೀವನ ರೂಪಿಸಿಕೊಳ್ಳಲು ವಿದ್ಯಾರ್ಥಿಗಳು ವೃತ್ತಿಪರ ಕೌಶಲ್ಯ, ಹಣಕಾಸು ಜ್ಞಾನ ಹಾಗೂ ಮಾನ್ಯತೆ ಪಡೆದ ವೃತ್ತಿಪರ ಪ್ರಮಾಣಪತ್ರಗಳನ್ನು ಹೊಂದುವುದು ಅಗತ್ಯವಾಗಿದೆ ಎಂದು ಕಿಷ್ಕಿಂದ ವಿಶ್ವವಿದ್ಯಾಲಯದ ವಾಣಿಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಸಾವಿತ್ರಿ ಎಂ. ಅಭಿಪ್ರಾಯಪಟ್ಟರು.

ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಗುರುವಾರ ಆಂತರಿಕ ಗುಣಮಟ್ಟ ಭರವಸೆ ಕೋಶ (ಐಕ್ಯೂಎಸಿ) ವತಿಯಿಂದ ಆಯೋಜಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಪದವಿಯಾಚೆಗೆ: ಬ್ಯಾಂಕಿಂಗ್ ವೃತ್ತಿ ಅವಕಾಶಗಳು, ಹಣಕಾಸು ಕೌಶಲ್ಯಗಳು ಮತ್ತು ವೃತ್ತಿಪರ ಪ್ರಮಾಣಪತ್ರಗಳು (Beyond the Degree: Banking Careers, Financial Skills and Professional Certifications) ಎಂಬ ವಿಷಯದ ಕುರಿತು ಅವರು ಉಪನ್ಯಾಸ ನೀಡಿದರು.

ಪದವಿ ಶಿಕ್ಷಣವು ವಿದ್ಯಾರ್ಥಿಗಳ ವೃತ್ತಿಜೀವನಕ್ಕೆ ಭದ್ರ ಬುನಾದಿ ಒದಗಿಸುತ್ತದೆ. ಆದರೆ ನಿರಂತರವಾಗಿ ಬದಲಾಗುತ್ತಿರುವ ಬ್ಯಾಂಕಿಂಗ್ ಮತ್ತು ಹಣಕಾಸು ಕ್ಷೇತ್ರದ ಅಗತ್ಯಗಳಿಗೆ ಅನುಗುಣವಾಗಿ ವಿದ್ಯಾರ್ಥಿಗಳು ತಮ್ಮ ಜ್ಞಾನ ಮತ್ತು ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು. ಬ್ಯಾಂಕಿಂಗ್ ಕ್ಷೇತ್ರವೆಂದರೆ ಕೇವಲ ಬ್ಯಾಂಕ್ ಕ್ಲರ್ಕ್ ಅಥವಾ ಅಧಿಕಾರಿ ಹುದ್ದೆಗಳಿಗೆ ಸೀಮಿತವಾಗಿಲ್ಲ. ಹಣಕಾಸು ವಿಶ್ಲೇಷಣೆ, ಸಾಲ ನಿರ್ವಹಣೆ, ಹೂಡಿಕೆ ಮತ್ತು ಸಂಪತ್ತು ನಿರ್ವಹಣೆ, ಡಿಜಿಟಲ್ ಬ್ಯಾಂಕಿಂಗ್, ಅಪಾಯ ನಿರ್ವಹಣೆ, ವಿಮೆ, ಹಣಕಾಸು ತಂತ್ರಜ್ಞಾನ (ಫಿನ್‌ಟೆಕ್) ಹಾಗೂ ಗ್ರಾಹಕ ಸೇವೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ವ್ಯಾಪಕ ಉದ್ಯೋಗಾವಕಾಶಗಳಿವೆ ಎಂದು ವಿವರಿಸಿದರು.

ವಿದ್ಯಾರ್ಥಿಗಳು ಪದವಿ ಹಂತದಲ್ಲಿಯೇ ತಮ್ಮ ಆಸಕ್ತಿ ಹಾಗೂ ಸಾಮರ್ಥ್ಯಕ್ಕೆ ಅನುಗುಣವಾಗಿ ವೃತ್ತಿಜೀವನದ ಗುರಿಗಳನ್ನು ನಿರ್ಧರಿಸಿಕೊಳ್ಳಬೇಕು. ಬ್ಯಾಂಕಿಂಗ್ ಮತ್ತು ಹಣಕಾಸು ಕ್ಷೇತ್ರದಲ್ಲಿನ ಹೊಸ ಬೆಳವಣಿಗೆಗಳನ್ನು ನಿರಂತರವಾಗಿ ಅಧ್ಯಯನ ಮಾಡುವುದರೊಂದಿಗೆ ಪ್ರಾಯೋಗಿಕ ಜ್ಞಾನ, ತಾಂತ್ರಿಕ ಕೌಶಲ್ಯ ಮತ್ತು ವೃತ್ತಿಪರ ಅರ್ಹತೆಗಳನ್ನು ಗಳಿಸಿಕೊಳ್ಳಬೇಕು. ಇದರಿಂದ ಉದ್ಯೋಗಾವಕಾಶಗಳನ್ನು ಹೆಚ್ಚಿಸಿಕೊಳ್ಳುವುದರ ಜೊತೆಗೆ ವೃತ್ತಿಜೀವನದಲ್ಲಿ ಉನ್ನತ ಸ್ಥಾನಗಳನ್ನು ತಲುಪಲು ಸಾಧ್ಯವಾಗುತ್ತದೆ ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲೆ ಡಾ. ಸುಗುಣ ಬಸವರಾಜ ಮಾತನಾಡಿ, ವಿದ್ಯಾರ್ಥಿಗಳ ಶೈಕ್ಷಣಿಕ ಜ್ಞಾನದೊಂದಿಗೆ ಉದ್ಯೋಗಾಧಾರಿತ ಕೌಶಲ್ಯಗಳನ್ನು ವೃದ್ಧಿಸುವಲ್ಲಿ ಇಂತಹ ವಿಶೇಷ ಉಪನ್ಯಾಸ ಕಾರ್ಯಕ್ರಮಗಳು ಮಹತ್ವದ ಪಾತ್ರ ವಹಿಸುತ್ತವೆ. ಇಂದಿನ ಸ್ಪರ್ಧಾತ್ಮಕ ಉದ್ಯೋಗ ಮಾರುಕಟ್ಟೆಯಲ್ಲಿ ಸಂವಹನ ಕೌಶಲ್ಯ, ತಂಡದೊಂದಿಗೆ ಕೆಲಸ ಮಾಡುವ ಸಾಮರ್ಥ್ಯ, ಸಮಸ್ಯೆಗಳನ್ನು ಪರಿಹರಿಸುವ ಮನೋಭಾವ, ಡಿಜಿಟಲ್ ಸಾಕ್ಷರತೆ, ವಿಶ್ಲೇಷಣಾತ್ಮಕ ಚಿಂತನೆ ಹಾಗೂ ಗ್ರಾಹಕರೊಂದಿಗೆ ಪರಿಣಾಮಕಾರಿಯಾಗಿ ವ್ಯವಹರಿಸುವ ಕೌಶಲ್ಯಗಳು ಅತ್ಯಂತ ಅಗತ್ಯವಾಗಿವೆ ಎಂದು ತಿಳಿಸಿದರು.

ವಿಶೇಷವಾಗಿ ಡಿಜಿಟಲ್ ಬ್ಯಾಂಕಿಂಗ್ ಮತ್ತು ಹಣಕಾಸು ತಂತ್ರಜ್ಞಾನ ಕ್ಷೇತ್ರಗಳು ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ಹೊಸ ತಂತ್ರಜ್ಞಾನಗಳನ್ನು ಕಲಿಯಲು ಆಸಕ್ತಿ ಬೆಳೆಸಿಕೊಳ್ಳಬೇಕು. ಶಿಕ್ಷಣದೊಂದಿಗೆ ಕೌಶಲ್ಯಾಭಿವೃದ್ಧಿಗೆ ಆದ್ಯತೆ ನೀಡಿದಾಗ ಮಾತ್ರ ಭವಿಷ್ಯದ ಉದ್ಯೋಗ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಸಾಧ್ಯವಾಗುತ್ತದೆ. ವಿದ್ಯಾರ್ಥಿನಿಯರು ತಮ್ಮ ಸಾಮರ್ಥ್ಯವನ್ನು ಗುರುತಿಸಿಕೊಂಡು ಆತ್ಮವಿಶ್ವಾಸದಿಂದ ವೃತ್ತಿಜೀವನ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಐಕ್ಯೂಎಸಿ ಸಂಚಾಲಕಿ ಡಾ. ಜ್ಯೋತಿ ಸಿ.ಕೆ. ಪ್ರಾಸ್ತಾವಿಕವಾಗಿ ಮಾತನಾಡಿ, ವಿದ್ಯಾರ್ಥಿನಿಯರಿಗೆ ಪಠ್ಯಾಧಾರಿತ ಶಿಕ್ಷಣದ ಜೊತೆಗೆ ವಿವಿಧ ವೃತ್ತಿ ಕ್ಷೇತ್ರಗಳ ಕುರಿತು ಮಾಹಿತಿ ಮತ್ತು ಮಾರ್ಗದರ್ಶನ ನೀಡುವ ಉದ್ದೇಶದಿಂದ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ವಾಣಿಜ್ಯಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕಿ ಡಾ. ಸ್ವರೂಪರಾಣಿ ಸಂಪನ್ಮೂಲ ವ್ಯಕ್ತಿ ಸಾವಿತ್ರಿ ಎಂ. ಅವರನ್ನು ಪರಿಚಯಿಸಿದರು.

ಈ ಸಂದರ್ಭದಲ್ಲಿ ರಾಯಚೂರಿನ ಎಲ್‌ವಿಡಿ ಮಹಾವಿದ್ಯಾಲಯದ ಪ್ರಾಣಿಶಾಸ್ತ್ರ ವಿಭಾಗದ ನಿವೃತ್ತ ಪ್ರಾಧ್ಯಾಪಕ ಡಾ. ಶಾನುಕುಮಾರ್, ಐಕ್ಯೂಎಸಿ ಸಹ ಸಂಚಾಲಕ ಡಾ. ಶರಣಗೌಡ ಕೆ., ಡಾ. ಉಮಾದೇವಿ ಹಾಗೂ ಶ್ರೀಮತಿ ಸರಸ್ವತಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಸಹ ಪ್ರಾಧ್ಯಾಪಕರಾದ ಡಾ. ಸೈಯಿದಾ ರಷೀದಾ ಪರ್ವೀನ್, ಸುಮಿತ್ರಾ ಪ್ಯಾಟಿ, ಸಹಾಯಕ ಪ್ರಾಧ್ಯಾಪಕರಾದ ರಂಗನಾಥ ಬಿಲ್ಲಾರ್, ಡಾ. ಸಂತೋಷಕುಮಾರ, ಡಾ. ಚನ್ನಬಸವ, ಡಾ. ಅಸ್ಮಾ, ಡಾ. ಪ್ರಸನ್ನಕುಮಾರ, ಡಾ. ಸುರೇಶ ಪಾಟೀಲ್ ಸೇರಿದಂತೆ ಕಾಲೇಜಿನ ಅತಿಥಿ ಉಪನ್ಯಾಸಕರು ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿ ಸಂಗೀತಾ ಪ್ರಾರ್ಥಿಸಿದರು. ಉಪನ್ಯಾಸಕಿ ಡಾ. ಪ್ರಿಯಾಂಕ ಸ್ವಾಗತಿಸಿದರು. ವಿದ್ಯಾರ್ಥಿನಿ ಸುಚಿತ್ರಾ ನಿರೂಪಿಸಿದರು. ಉಪನ್ಯಾಸಕ ಅಮರೇಶ ವಂದಿಸಿದರು. ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿನಿಯರು ಭಾಗವಹಿಸಿ ಬ್ಯಾಂಕಿಂಗ್ ಮತ್ತು ಹಣಕಾಸು ಕ್ಷೇತ್ರದಲ್ಲಿನ ವೃತ್ತಿ ಅವಕಾಶಗಳ ಕುರಿತು ಮಾಹಿತಿ ಪಡೆದುಕೊಂಡರು.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ವೀರ ಹನುಮಾನ್ ಅವರಿಗೆ ಆತ್ಮೀಯ ಸನ್ಮಾನ



ರಾಯಚೂರು, ನ. 5: ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾಗಿರುವ ಹಿರಿಯ ಸಾಹಿತಿ ಹಾಗೂ ಹೈಕು ಕವಿ ವೀರ ಹನುಮಾನ್ ಅವರನ್ನು ನಗರದ ಕನ್ನಡ ಭವನದಲ್ಲಿ ಬುಧವಾರ ಸಂಜೆ ಸಾಹಿತಿಗಳು, ಶಿಕ್ಷಕರು, ಕನ್ನಡಪರ ಸಂಘಟನೆಗಳ ಮುಖಂಡರು ಹಾಗೂ ಸಾಹಿತ್ಯಾಸಕ್ತರು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾನ್ವಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಮೂಕಪ್ಪ ಕಟ್ಟಿಮನಿ, ಹೈಕು ಸಾಹಿತ್ಯ ಕ್ಷೇತ್ರದಲ್ಲಿ ವೀರ ಹನುಮಾನ್ ಅವರು ತಮ್ಮದೇ ಆದ ವಿಶಿಷ್ಟ ಛಾಪು ಮೂಡಿಸಿರುವ ಸೃಜನಶೀಲ ಕವಿಯಾಗಿದ್ದಾರೆ. ಅಲ್ಪ ಪದಗಳಲ್ಲಿ ಅಗಾಧವಾದ ಜೀವನಾನುಭವ, ಸಾಮಾಜಿಕ ಪ್ರಜ್ಞೆ ಹಾಗೂ ಪ್ರಕೃತಿಯ ಸೂಕ್ಷ್ಮ ಸೌಂದರ್ಯವನ್ನು ಪರಿಣಾಮಕಾರಿಯಾಗಿ ಅಭಿವ್ಯಕ್ತಿಸುವ ಅವರ ಹೈಕು ಕವಿತೆಗಳು ಕನ್ನಡ ಸಾಹಿತ್ಯ ಲೋಕದಲ್ಲಿ ವಿಶೇಷ ಗಮನ ಸೆಳೆದಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕನ್ನಡ ಸಾಹಿತ್ಯದ ವಿವಿಧ ಪ್ರಕಾರಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿರುವ ವೀರ ಹನುಮಾನ್ ಅವರು ಸಾಹಿತ್ಯ ರಚನೆಗೆ ಮಾತ್ರ ಸೀಮಿತವಾಗದೆ ಸಾಹಿತ್ಯ ಸಂಘಟನೆ ಹಾಗೂ ಕನ್ನಡ ಭಾಷೆಯ ಬೆಳವಣಿಗೆಗೂ ನಿರಂತರವಾಗಿ ಶ್ರಮಿಸಿದ್ದಾರೆ. ಸಾಹಿತ್ಯದ ಮೂಲಕ ಸಾಮಾಜಿಕ ಜಾಗೃತಿ ಮೂಡಿಸುವುದರ ಜೊತೆಗೆ ಹೊಸ ತಲೆಮಾರಿನ ಬರಹಗಾರರಿಗೆ ಪ್ರೇರಣೆಯಾಗಿದ್ದಾರೆ. ಇಂತಹ ಹಿರಿಯ ಸಾಹಿತ್ಯ ಸಾಧಕರಿಗೆ ಪ್ರತಿಷ್ಠಿತ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಲಭಿಸಿರುವುದು ರಾಯಚೂರು ಜಿಲ್ಲೆಯ ಸಾಹಿತ್ಯ ವಲಯಕ್ಕೆ ಹೆಮ್ಮೆಯ ಸಂಗತಿಯಾಗಿದೆ ಎಂದು ಅಭಿನಂದಿಸಿದರು.

ನಿವೃತ್ತ ಮುಖ್ಯ ಶಿಕ್ಷಕ ವೀರಭದ್ರಪ್ಪ ಮಾತನಾಡಿ, ವೀರ ಹನುಮಾನ್ ಅವರು ಕೇವಲ ಕವಿಯಾಗಿ ಗುರುತಿಸಿಕೊಂಡವರಲ್ಲ. ಸಾಹಿತ್ಯವನ್ನು ಜನಸಾಮಾನ್ಯರ ನಡುವೆ ಕೊಂಡೊಯ್ಯುವ ಉದ್ದೇಶದಿಂದ ನಿರಂತರವಾಗಿ ಶ್ರಮಿಸಿದ ಕ್ರಿಯಾಶೀಲ ಸಾಹಿತ್ಯ ಸಂಘಟಕರೂ ಆಗಿದ್ದಾರೆ. ತಮ್ಮ ಸುದೀರ್ಘ ಸಾಹಿತ್ಯ ಸೇವೆ, ಹೈಕು ಕಾವ್ಯದ ಮೂಲಕ ಕನ್ನಡ ಸಾಹಿತ್ಯಕ್ಕೆ ನೀಡಿರುವ ಕೊಡುಗೆ ಹಾಗೂ ವಿವಿಧ ಸಾಹಿತ್ಯಿಕ ಚಟುವಟಿಕೆಗಳಲ್ಲಿ ತೋರಿರುವ ಬದ್ಧತೆ ಇತರರಿಗೆ ಮಾದರಿಯಾಗಿದೆ ಎಂದು ಹೇಳಿದರು.

ಸಾಹಿತ್ಯವು ಸಮಾಜದ ಬದುಕು, ಸಂಸ್ಕೃತಿ ಹಾಗೂ ಮಾನವೀಯ ಮೌಲ್ಯಗಳನ್ನು ಪ್ರತಿಬಿಂಬಿಸುವ ಪ್ರಮುಖ ಮಾಧ್ಯಮವಾಗಿದೆ. ಈ ನಿಟ್ಟಿನಲ್ಲಿ ವೀರ ಹನುಮಾನ್ ಅವರ ಸಾಹಿತ್ಯ ಸಾಧನೆ ಮಹತ್ವದ್ದಾಗಿದೆ. ಅವರ ನಿರಂತರ ಸಾಹಿತ್ಯ ಸೇವೆಯನ್ನು ಗುರುತಿಸಿ ರಾಜ್ಯ ಸರ್ಕಾರ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಿರುವುದು ಸಂತಸದ ಸಂಗತಿ. ಮುಂದಿನ ದಿನಗಳಲ್ಲಿಯೂ ಅವರಿಂದ ಇನ್ನಷ್ಟು ಮೌಲ್ಯಯುತ ಸಾಹಿತ್ಯ ಕೃತಿಗಳು ಹೊರಬರಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ವೀರ ಹನುಮಾನ್ ಅವರಿಗೆ ಸನ್ಮಾನ ಸಲ್ಲಿಸಿದ ಸಾಹಿತಿಗಳು ಹಾಗೂ ಸಾಹಿತ್ಯಾಸಕ್ತರು, ಅವರ ಸಾಹಿತ್ಯ ಸಾಧನೆ, ಕನ್ನಡಪರ ಕಾಳಜಿ ಮತ್ತು ಸಂಘಟನಾ ಕಾರ್ಯಗಳನ್ನು ಸ್ಮರಿಸಿ ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಪಿ. ಚನ್ನಬಸವಗೌಡ, ನಿವೃತ್ತ ಮುಖ್ಯ ಶಿಕ್ಷಕರಾದ ನಂದೀಶ್, ಹನುಮಂತಪ್ಪ, ನಿವೃತ್ತ ಶಿಕ್ಷಕರಾದ ಕೃಷ್ಣಪ್ಪ, ಬಹುಜನ ಚಿಂತಕ ಎಂ.ಆರ್. ಭೇರಿ, ಕರ್ನಾಟಕ ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಸುರೇಶ್ ಕುರುಡಿ, ಎಸ್ಸಿ-ಎಸ್ಟಿ ನೌಕರರ ಸಮನ್ವಯ ಸಮಿತಿಯ ಜಿಲ್ಲಾಧ್ಯಕ್ಷ ಜಿಂದಪ್ಪ, ಪತ್ರಕರ್ತ ಪರಮೇಶ್ವರ ಮಾನ್ವಿ, ಸಾಹಿತಿ ತಾಯಪ್ಪ ಮರ್ಚಟ್ಹಾಳ್, ದೈಹಿಕ ಶಿಕ್ಷಣ ಸಂಘದ ಅಧ್ಯಕ್ಷ ಯಂಕಪ್ಪ ಪಿರಂಗಿ, ಶಾಂತಕುಮಾರ, ಮುಖ್ಯ ಶಿಕ್ಷಕ ಈರಪ್ಪ ಕೊಂಬಿನ, ಕವಿ ಮಹಾಂತೇಶ ಬಿರಾದಾರ, ಎಸ್ಸಿ-ಎಸ್ಟಿ ನೌಕರರ ಸಮನ್ವಯ ಸಮಿತಿಯ ಕಾರ್ಯದರ್ಶಿ ಸಂತೋಷ ನಂದಿನಿ, ಸಮಿತಿಯ ಮಾಜಿ ತಾಲೂಕು ಅಧ್ಯಕ್ಷ ರಾಘವೇಂದ್ರ, ಶಿಕ್ಷಕ ವಸಂತಕುಮಾರ, ಕೆಎಸ್‌ಆರ್‌ಟಿಸಿಯ ಮುದ್ದುಕೃಷ್ಣ, ನಿವೃತ್ತ ಶಿಕ್ಷಕರಾದ ಸಾಬಣ್ಣ, ವೆಂಕಟೇಶ್, ನರಸಿಂಹಲು, ಕವಿ ಮಲ್ಲೇಶ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಸುಧಾರ್ಕ್, ಗಜಲ್ ಕವಿ ಕೊರೆನಲ್, ನಾಗರಾಜ್ ಜಾಲಿಬೆಂಚಿ, ಪತ್ರಕರ್ತ ರಂಗಸ್ವಾಮಿ, ಚಿನ್ನಬಾಬು ಸೇರಿದಂತೆ ಅನೇಕ ಸಾಹಿತಿಗಳು, ಸಾಹಿತ್ಯಾಸಕ್ತರು ಹಾಗೂ ಸ್ನೇಹಿತರು ಉಪಸ್ಥಿತರಿದ್ದು, ವೀರ ಹನುಮಾನ್ ಅವರಿಗೆ ಅಭಿನಂದನೆ ಸಲ್ಲಿಸಿದರು.

ಮನುಕುಲದ ಒಳಿತಿಗಾಗಿ ಶ್ರಮಿಸಿದ ಮಹಾನ್ ಮಾನವತಾವಾದಿ ಡಾ. ಅಂಬೇಡ್ಕರ್: ದುರ್ಗಪ್ಪ ಅಮರಾವತಿ



ಮಾನ್ವಿ, ನ. 5: ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಸಮಾಜದಲ್ಲಿನ ಅಸಮಾನತೆ, ಅಸ್ಪೃಶ್ಯತೆ ಹಾಗೂ ಶೋಷಣೆಯ ವಿರುದ್ಧ ನಿರಂತರ ಹೋರಾಟ ನಡೆಸಿ, ಸಮಾನತೆ ಮತ್ತು ಸಾಮಾಜಿಕ ನ್ಯಾಯದ ತಳಹದಿಯ ಮೇಲೆ ಸಮಸಮಾಜ ನಿರ್ಮಾಣಕ್ಕೆ ಶ್ರಮಿಸಿದ ಮಹಾನ್ ಮಾನವತಾವಾದಿ ಹಾಗೂ ಮನುಕುಲದ ಒಳಿತಿಗಾಗಿ ದುಡಿದ ಆದರ್ಶ ನೇತಾರರಾಗಿದ್ದಾರೆ ಎಂದು ಉಪನ್ಯಾಸಕ ದುರ್ಗಪ್ಪ ಅಮರಾವತಿ ಹೇಳಿದರು.

ಪಟ್ಟಣದ ಕಲ್ಮಠ ಪದವಿ ಪೂರ್ವ ಕಾಲೇಜಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಿದ್ದ ಡಾ. ಬಿ.ಆರ್. ಅಂಬೇಡ್ಕರ್ ಓದು ಕಾರ್ಯಕ್ರಮದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಸಮಗ್ರ ಬದುಕು ಮತ್ತು ಹೋರಾಟ ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಿದ ಅವರು, ಅಂಬೇಡ್ಕರ್ ಅವರ ಜೀವನ, ಸಾಧನೆ ಹಾಗೂ ಚಿಂತನೆಗಳು ಇಂದಿನ ಯುವಪೀಳಿಗೆಗೆ ಸ್ಫೂರ್ತಿದಾಯಕವಾಗಿವೆ ಎಂದು ತಿಳಿಸಿದರು.

ಡಾ. ಅಂಬೇಡ್ಕರ್ ಅವರು ತಮ್ಮ ಜೀವನದುದ್ದಕ್ಕೂ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಿದ್ದರು. ಸಮಾಜದಲ್ಲಿನ ಅಜ್ಞಾನ, ಅಸಮಾನತೆ ಹಾಗೂ ಶೋಷಣೆಯನ್ನು ಹೋಗಲಾಡಿಸಲು ಶಿಕ್ಷಣವೇ ಪ್ರಮುಖ ಅಸ್ತ್ರವಾಗಿದೆ ಎಂಬುದನ್ನು ಪ್ರತಿಪಾದಿಸಿದ್ದರು. ಪ್ರತಿಯೊಬ್ಬ ವಿದ್ಯಾರ್ಥಿಯೂ ಅವರ ಜೀವನ ಚರಿತ್ರೆ, ಹೋರಾಟದ ಹಾದಿ, ಸಾಹಿತ್ಯ ಹಾಗೂ ಸಾಮಾಜಿಕ ಚಿಂತನೆಗಳನ್ನು ಅಧ್ಯಯನ ಮಾಡುವ ಮೂಲಕ ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಸಮಾನತೆ, ಸ್ವಾತಂತ್ರ್ಯ ಹಾಗೂ ಭ್ರಾತೃತ್ವದ ಮೌಲ್ಯಗಳು ಭಾರತೀಯ ಸಂವಿಧಾನದ ಪ್ರಮುಖ ಆಶಯಗಳಾಗಿವೆ. ಈ ಮೌಲ್ಯಗಳನ್ನು ಕೇವಲ ಪುಸ್ತಕಗಳಿಗೆ ಸೀಮಿತಗೊಳಿಸದೆ ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಜಾತಿ, ಧರ್ಮ, ಭಾಷೆ ಹಾಗೂ ವರ್ಗಭೇದಗಳನ್ನು ಮೀರಿ ಎಲ್ಲರೂ ಸಹೋದರತ್ವದ ಭಾವನೆಯೊಂದಿಗೆ ಬದುಕಿದಾಗ ಮಾತ್ರ ಅಂಬೇಡ್ಕರ್ ಅವರ ಸಮಸಮಾಜದ ಕನಸು ನನಸಾಗಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಶಿಕ್ಷಣ ಪಡೆಯಿರಿ, ಸಂಘಟಿತರಾಗಿ, ಹೋರಾಡಿರಿ ಎಂಬ ಅಂಬೇಡ್ಕರ್ ಅವರ ಸಂದೇಶವನ್ನು ವಿದ್ಯಾರ್ಥಿಗಳು ಜೀವನದ ಮಾರ್ಗದರ್ಶಕ ತತ್ವವನ್ನಾಗಿ ಸ್ವೀಕರಿಸಬೇಕು. ನಿರಂತರ ಅಧ್ಯಯನ, ವೈಚಾರಿಕ ಚಿಂತನೆ, ಶಿಸ್ತು ಹಾಗೂ ಪರಿಶ್ರಮದ ಮೂಲಕ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳುವುದರ ಜೊತೆಗೆ ಸಮಾಜದ ಅಭಿವೃದ್ಧಿಗೂ ಕೊಡುಗೆ ನೀಡಬೇಕು ಎಂದು ಸಲಹೆ ನೀಡಿದರು.

ವಿದ್ಯಾರ್ಥಿಗಳಲ್ಲಿ ಅಂಬೇಡ್ಕರ್ ಅವರ ವಿಚಾರಧಾರೆ, ಸಂವಿಧಾನದ ಆಶಯಗಳು ಹಾಗೂ ಸಾಮಾಜಿಕ ನ್ಯಾಯದ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವಿವಿಧ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದು ಶ್ಲಾಘನೀಯ. ವಿಶೇಷವಾಗಿಪ್ರಬಂಧಸ್ಪರ್ಧೆಸೇರಿದಂತೆವಿವಿಧ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳಿಗೆ ಮಹನೀಯರ ಜೀವನಾದರ್ಶಗಳನ್ನು ಪರಿಚಯಿಸುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಪಂಪಾ ವಿರೂಪಾಕ್ಷೇಶ್ವರ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಎಸ್. ಎಸ್. ಪಾಟೀಲ ವಹಿಸಿದ್ದರು. ಹಿರಿಯ ಸಾಹಿತಿ ರಮೇಶಬಾಬು ಯಾಳಗಿ ಹಾಗೂ ಕಲ್ಮಠ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಸಿದ್ದನಗೌಡ ಪಾಟೀಲ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ರಾಯಚೂರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಅವರನ್ನು ಕಾಲೇಜಿನ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದ ಸಂಚಾಲಕ ಚನ್ನಬಸಪ್ಪ ಪ್ರಾಸ್ತಾವಿಕವಾಗಿ ಮಾತನಾಡಿ, ಅಂಬೇಡ್ಕರ್ ಅವರ ಚಿಂತನೆಗಳನ್ನು ವಿದ್ಯಾರ್ಥಿಗಳಿಗೆ ತಲುಪಿಸುವಲ್ಲಿ ಇಂತಹ ಕಾರ್ಯಕ್ರಮಗಳ ಮಹತ್ವವನ್ನು ವಿವರಿಸಿದರು.

ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಪ್ರಬಂಧ ಸ್ಪರ್ಧೆಯಲ್ಲಿ ಸಂಗೀತ (ತಂದೆ ವೀರೇಶ್) ಪ್ರಥಮ ಸ್ಥಾನ, ಪದ್ಮಾವತಿ (ತಂದೆ ವೆಂಕೋಬ) ದ್ವಿತೀಯ ಸ್ಥಾನ ಹಾಗೂ ವೈಷ್ಣವಿ (ತಂದೆ ತಿಮ್ಮಪ್ಪ) ತೃತೀಯ ಸ್ಥಾನ ಪಡೆದರು. ವಿಜೇತ ವಿದ್ಯಾರ್ಥಿನಿಯರಿಗೆ ಪ್ರಮಾಣಪತ್ರ ಹಾಗೂ ಪುಸ್ತಕಗಳನ್ನು ಬಹುಮಾನವಾಗಿ ನೀಡಿ ಗೌರವಿಸಲಾಯಿತು.

ಉಪನ್ಯಾಸಕ ಮಲ್ಲಿಕಾರ್ಜುನ ಬ್ಯಾಗವಾಟ ಸ್ವಾಗತಿಸಿದರು. ಉಪನ್ಯಾಸಕ ಆನಂದಕುಮಾರ ಕಾರ್ಯಕ್ರಮ ನಿರೂಪಿಸಿದರು. ಉಪನ್ಯಾಸಕಿ ಪ್ರಿಯಾಂಕ ವಂದಿಸಿದರು. ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಲೋಡ್ ಶೆಡ್ಡಿಂಗ್ ನಿಲ್ಲಿಸಿ ರೈತರಿಗೆ ಹಗಲು 9 ಗಂಟೆ ನಿರಂತರ ವಿದ್ಯುತ್ ಪೂರೈಕೆಗೆ ಆಗ್ರಹ



ಲಿಂಗಸುಗೂರು: ತಾಲೂಕಿನ ವಿವಿಧ ಹೋಬಳಿಗಳಲ್ಲಿ ಅನಿಯಮಿತವಾಗಿ ಲೋಡ್ ಶೆಡ್ಡಿಂಗ್ ಮಾಡುತ್ತಿರುವುದರಿಂದ ರೈತರು ಹಾಗೂ ವಿದ್ಯಾರ್ಥಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದು, ಕೂಡಲೇ ವಿದ್ಯುತ್ ಕಡಿತವನ್ನು ನಿಲ್ಲಿಸಿ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಹಗಲು ವೇಳೆಯಲ್ಲಿ ನಿರಂತರ 9 ಗಂಟೆಗಳ ಕಾಲ ವಿದ್ಯುತ್ ಪೂರೈಕೆ ಮಾಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಆಗ್ರಹಿಸಿದೆ.

ಈ ಕುರಿತು ಸಂಘದ ಜಿಲ್ಲಾಧ್ಯಕ್ಷ ಶಿವಪುತ್ರಗೌಡ ನಂದಿಹಾಳ ನೇತೃತ್ವದಲ್ಲಿ ರೈತರು ಪ್ರತಿಭಟನೆ ನಡೆಸಿ, ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಿಗೆ ಮನವಿ ಪತ್ರ ಸಲ್ಲಿಸಿದರು.

ತಾಲೂಕಿನ ವಿವಿಧ ಗ್ರಾಮೀಣ ಪ್ರದೇಶಗಳಲ್ಲಿ ಅನಿಯಮಿತ ವಿದ್ಯುತ್ ಕಡಿತದಿಂದ ಕೃಷಿ ಚಟುವಟಿಕೆಗಳಿಗೆ ತೀವ್ರ ಅಡಚಣೆ ಉಂಟಾಗುತ್ತಿದೆ. ವಿದ್ಯುತ್ ಪೂರೈಕೆಯಲ್ಲಿನ ವ್ಯತ್ಯಯದಿಂದ ರೈತರ ಪಂಪ್‌ಸೆಟ್‌ಗಳು ಸುಟ್ಟುಹೋಗುತ್ತಿರುವ ಪ್ರಕರಣಗಳು ಸಂಭವಿಸುತ್ತಿದ್ದು, ಇದರಿಂದ ರೈತರು ಹೆಚ್ಚುವರಿ ಆರ್ಥಿಕ ನಷ್ಟ ಅನುಭವಿಸುವಂತಾಗಿದೆ. ಈಗಾಗಲೇ ಕೃಷಿ ವೆಚ್ಚದ ಹೊರೆಯಿಂದ ಸಂಕಷ್ಟದಲ್ಲಿರುವ ರೈತರಿಗೆ ವಿದ್ಯುತ್ ಸಮಸ್ಯೆ ಮತ್ತಷ್ಟು ಹೊರೆ ಉಂಟುಮಾಡುತ್ತಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ತಾಲೂಕಿನಲ್ಲಿ ಬರಗಾಲದ ಪರಿಸ್ಥಿತಿ ಎದುರಾಗಿರುವುದರಿಂದ ರೈತರು ಬೆಳೆದಿರುವ ಬೆಳೆಗಳು ನೀರಿನ ಕೊರತೆಯಿಂದ ಒಣಗುತ್ತಿವೆ. ಕಷ್ಟಪಟ್ಟು ಬೆಳೆದ ಬೆಳೆಗಳನ್ನು ಉಳಿಸಿಕೊಳ್ಳಲು ರೈತರು ಹರಸಾಹಸ ಪಡುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಕೃಷಿ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಅತ್ಯಂತ ಅಗತ್ಯವಾಗಿದೆ. ಆದರೆ ಪದೇಪದೇ ವಿದ್ಯುತ್ ಕಡಿತಗೊಳಿಸುತ್ತಿರುವುದರಿಂದ ಬೆಳೆಗಳಿಗೆ ಸಮಯಕ್ಕೆ ಸರಿಯಾಗಿ ನೀರು ಹರಿಸಲು ಸಾಧ್ಯವಾಗುತ್ತಿಲ್ಲ ಎಂದು ದೂರಿದರು.

ರೈತರು ಈಗಾಗಲೇ ಬಿತ್ತನೆ ಬೀಜ, ರಸಗೊಬ್ಬರ, ಕೂಲಿ ಸೇರಿದಂತೆ ಕೃಷಿ ಚಟುವಟಿಕೆಗಳಿಗೆ ಸಾಕಷ್ಟು ಹಣ ಖರ್ಚು ಮಾಡಿದ್ದಾರೆ. ಬೆಳೆಗಳ ಬೆಳವಣಿಗೆಯ ಹಂತದಲ್ಲಿ ನೀರಾವರಿ ಸೌಲಭ್ಯಕ್ಕೆ ಅಡಚಣೆ ಉಂಟಾದರೆ ರೈತರು ಮತ್ತಷ್ಟು ಆರ್ಥಿಕ ಸಂಕಷ್ಟಕ್ಕೆ ಸಿಲುಕಲಿದ್ದಾರೆ. ಆದ್ದರಿಂದ ರೈತರ ಪಂಪ್‌ಸೆಟ್‌ಗಳಿಗೆ ಹಗಲು ವೇಳೆಯಲ್ಲಿ ನಿರಂತರ 9 ಗಂಟೆಗಳ ಕಾಲ ವಿದ್ಯುತ್ ಪೂರೈಕೆ ಮಾಡಬೇಕು ಎಂದು ಒತ್ತಾಯಿಸಿದರು.

ಅನಿಯಮಿತ ಲೋಡ್ ಶೆಡ್ಡಿಂಗ್‌ನಿಂದ ರೈತರು ಮಾತ್ರವಲ್ಲದೆ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೂ ತೊಂದರೆಯಾಗುತ್ತಿದೆ. ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯುತ್ ಕಡಿತದಿಂದ ವಿದ್ಯಾರ್ಥಿಗಳು ಓದು ಮತ್ತು ಪರೀಕ್ಷಾ ಸಿದ್ಧತೆ ನಡೆಸಲು ಸಮಸ್ಯೆ ಎದುರಿಸುತ್ತಿದ್ದಾರೆ. ಹೀಗಾಗಿ ರೈತರು ಹಾಗೂ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ವಿದ್ಯುತ್ ಪೂರೈಕೆಯಲ್ಲಿ ಉಂಟಾಗುತ್ತಿರುವ ವ್ಯತ್ಯಯವನ್ನು ಕೂಡಲೇ ಸರಿಪಡಿಸಬೇಕು ಎಂದು ಆಗ್ರಹಿಸಿದರು.

ಈ ಕುರಿತು ಈಗಾಗಲೇ ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರೂ ಸಮಸ್ಯೆ ಪರಿಹಾರಕ್ಕೆ ಸೂಕ್ತ ಕ್ರಮ ಕೈಗೊಂಡಿಲ್ಲ. ರೈತರ ನ್ಯಾಯಯುತ ಬೇಡಿಕೆಗಳನ್ನು ನಿರ್ಲಕ್ಷಿಸಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ ಪ್ರತಿಭಟನಾಕಾರರು, ವಿದ್ಯುತ್ ಇಲಾಖೆಯ ಅಧಿಕಾರಿಗಳು ಸಮಸ್ಯೆಯ ಗಂಭೀರತೆಯನ್ನು ಅರಿತು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮನವಿ ಸಲ್ಲಿಸಿದ ಒಂದು ವಾರದೊಳಗೆ ರೈತರ ಬೇಡಿಕೆಗಳಿಗೆ ಸ್ಪಂದಿಸಿ ಸಮರ್ಪಕ ವಿದ್ಯುತ್ ಪೂರೈಕೆಗೆ ಕ್ರಮ ಕೈಗೊಳ್ಳದಿದ್ದರೆ ಜೆಸ್ಕಾಂ ಕಚೇರಿ ಮುಂಭಾಗದಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾ ಕಾರ್ಯಾಧ್ಯಕ್ಷ ಆನಂದ ಕುಂಬಾರ, ಹನುಮಂತ ನೆಲೋಗಿ ಕುಪ್ಪಿಗುಡ್ಡ, ಬಸಪ್ಪ ಈಚನಾಳ, ಹನುಮಂತ, ತಿಮ್ಮಣ್ಣ, ಹುಲಗಪ್ಪ, ಸಣ್ಣ ಗದ್ದೆಪ್ಪ, ಮಲ್ಲೇಶ ಸೇರಿದಂತೆ ಹಲವಾರು ರೈತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K